ಸಂಪುಟ: 04 ಸಂಚಿಕೆ: 339 ಪುಟಗಳು: 08 ಗುರುವಾರ 20 ಫೆಬ್ರವರಿ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

9448225696 +91 8035841833 ₹5

ಮುಂಜಾನೆ ಮಾತು

ಮನಸ್ಸಿಟ್ಟು ಕಲಿತ ಅಕ್ಷರ, ಮೈಬಗ್ಗಿಸಿ ದುಡಿದು ತಿನ್ನುವ ಅನ್ನ, ಕಷ್ಟಪಟ್ಟು ಗಳಿಸಿದ ಸಂಪಾದನೆ, ಇಷ್ಟದಿಂದ ಮಾಡುವ ದೈವಭಕ್ತಿ, ಯಾರನ್ನು ಯಾವತ್ತೂ ಕೈ ಬಿಡುವುದಿಲ್ಲ.

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಯುವನಿಧಿ ಗ್ಯಾರಂಟಿ ಫಲಾನುಭವಿಗಳಿಗೆ ತರಬೇತಿ

• ಉದಯವಾಹಿನಿ, ಮೈಸೂರು

ಯುವ ನಿಧಿ ಯೋಜನೆಯ ಫಲಾನುಭವಿಗಳಿಗೆ ಅಗತ್ಯ ಕೌಶಲ ತರಬೇತಿ ನೀಡುವುದರೊಂದಿಗೆ ಉದ್ಯೋಗ ಕಲ್ಪಿಸುವ ಹೊಣೆಯನ್ನು ಸರಕಾರ ಕರ್ನಾಟಕ ಜರ್ಮನ್ ತಾಂತ್ರಿಕ ತರಬೇತಿ ಸಂಸ್ಥೆಗೆ ವಹಿಸಿದೆ.

ಡಿಪ್ಲೊಮಾ ಮತ್ತು ಎಂಜಿನಿಯರಿಂಗ್ ಪದವಿ ಪಡೆದ ವಿದ್ಯಾರ್ಥಿಗಳು ಈಗಾಗಲೇ ರಾಜ್ಯ ಸರಕಾರದ ಯುವ ನಿಧಿ ಯೋಜನೆಯಡಿ ಅರ್ಜಿ ಸಲ್ಲಿಸಿ ಮಾಸಾಶನ ಪಡೆಯುತ್ತಿದ್ದು, ಅವರಿಗೆ ಅಗತ್ಯ ತರಬೇತಿಯೊಂದಿಗೆ ಉದ್ಯೋಗ ಕಲ್ಪಿಸುವ ಜವಾಬ್ದಾರಿಯನ್ನು ಕೌಶಲಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯು ಮೈಸೂರು ರೆಸಿಡೆಂಸಿ ರಸ್ತೆಯ ಪ್ರಿಮಿಯರ್ ಸ್ಟುಡಿಯೋ ಬಳಿ ಕೇಂದ್ರವು 4 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾಗಿದೆ. ಇಲ್ಲಿ ಐಟಿಐ, ಡಿಪ್ಲೊಮಾ ಮತ್ತು ಎಂಜಿನಿಯರಿಂಗ್ ಪದವಿ ಪಡೆದವರಿಗೆ 1 ತಿಂಗಳಿನಿಂದ ನಾಲ್ಕು ತಿಂಗಳವರೆಗೆ ತರಬೇತಿ ನೀಡಲಾಗುತ್ತದೆ. ಸಿಎನ್‌ಸಿ ಮತ್ತು ಎಲೆಕ್ಟ್ರಿಷಿಯನ್ ವಿಷಯಗಳಲ್ಲಿ 8 ತರಬೇತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಎಲೆಕ್ಟ್ರಿಷಿಯನ್ ವಿಭಾಗದಲ್ಲಿ ನಾಲ್ಕು ಕೋರ್ಸ್‌ಗಳು ಮತ್ತು ಸಿಎನ್‌ಸಿ ವಿಭಾಗದಲ್ಲಿ ಐದು ಕೋರ್ಸ್‌ಗಳಿವೆ. ಕಳೆದ ಮೂರು ವರ್ಷಗಳಿಂದ 900 ಮಂದಿ ಐಟಿಐ, ಡಿಪ್ಲೊಮಾ, ಎಂಜಿನಿಯರಿಂಗ್ ಪದವೀಧರರಿಗೆ ಕೌಶಲ ತರಬೇತಿ ನೀಡಲಾಗಿದೆ.

ಉದ್ಯೋಗದ ಭರವಸೆ

ನಾನಾ ಕೌಶಲ ತರಬೇತಿ

ಹುಣಸೂರು ರಸ್ತೆಯ ಪ್ರಿಮಿಯರ್ ಸ್ಟುಡಿಯೋ ಬಳಿ ಕೇಂದ್ರವು 4 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾಗಿದೆ. ಇಲ್ಲಿ ಐಟಿಐ, ಡಿಪ್ಲೊಮಾ ಮತ್ತು ಎಂಜಿನಿಯರಿಂಗ್ ಪದವಿ ಪಡೆದವರಿಗೆ 1 ತಿಂಗಳಿನಿಂದ ನಾಲ್ಕು ತಿಂಗಳವರೆಗೆ ತರಬೇತಿ ನೀಡಲಾಗುತ್ತದೆ. ಸಿಎನ್‌ಸಿ ಮತ್ತು ಎಲೆಕ್ಟ್ರಿಷಿಯನ್ ವಿಷಯಗಳಲ್ಲಿ 8 ತರಬೇತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಎಲೆಕ್ಟ್ರಿಷಿಯನ್ ವಿಭಾಗದಲ್ಲಿ ನಾಲ್ಕು ಕೋರ್ಸ್‌ಗಳು ಮತ್ತು ಸಿಎನ್‌ಸಿ ವಿಭಾಗದಲ್ಲಿ ಐದು ಕೋರ್ಸ್‌ಗಳಿವೆ. ಕಳೆದ ಮೂರು ವರ್ಷಗಳಿಂದ 900 ಮಂದಿ ಐಟಿಐ, ಡಿಪ್ಲೊಮಾ, ಎಂಜಿನಿಯರಿಂಗ್ ಪದವೀಧರರಿಗೆ ಕೌಶಲ ತರಬೇತಿ ನೀಡಲಾಗಿದೆ.

ಈಗಾಗಲೇ ಯುವ ನಿಧಿಯ ಲಾನುಭವಿಗಳ ಪಟ್ಟಿಯನ್ನು ಪಡೆದಿರುವ ತರಬೇತಿ ಸಂಸ್ಥೆಯ ಅಧಿಕಾರಿಗಳು, ಅವರನ್ನು ಸಂಪರ್ಕಿಸಿ, ಉಚಿತ ಕೌಶಲ ತರಬೇತಿಯೊಂದಿಗೆ ಉದ್ಯೋಗಾವಕಾಶ ಸಿಗುವುದರ ಬಗ್ಗೆ ಮಾಹಿತಿ ನೀಡುವ ಮೂಲಕ ತರಬೇತಿಗೆ ಸೇರ್ಪಡೆ ಮಾಡಿಕೊಳ್ಳುತ್ತಿದ್ದಾರೆ.

ಮೈಸೂರು, ಬೆಂಗಳೂರು, ಕಲಬುರಗಿ, ಹುಬ್ಬಳ್ಳಿ, ಬೆಳಗಾವಿ, ಮಂಗಳೂರು ಮತ್ತು ಉಪ ಕೇಂದ್ರಗಳಾದ ಗೌರಿಬಿದನೂರು ಮತ್ತು ಕಾರ್ಕಳದಲ್ಲಿ ತರಬೇತಿ ಕೇಂದ್ರಗಳಲ್ಲಿನ ಅಧಿಕಾರಿಗಳು ಖುದ್ದಾಗಿ 20 ಸಾವಿರಕ್ಕೂ ಹೆಚ್ಚು ಯುವ ನಿಧಿ ಲಾನುಭವಿಗಳಿಗೆ ಕರೆ ಮಾಡಿದ್ದಾರೆ.

''ಮೈಸೂರು ಜಿಲ್ಲೆಯಲ್ಲಿ ಮೂರು ಸಾವಿರ ಲಾನುಭವಿಗಳು ಇದ್ದು, ಅದರಲ್ಲಿ ಎರಡು ಸಾವಿರ ಮಂದಿಯನ್ನು ದೂರವಾಣಿ ಮೂಲಕ ಸಂಪರ್ಕಿಸಲಾಗಿದ್ದು, ಮೊದಲನೇ ತಂಡದಲ್ಲಿ ಐವತ್ತು ಫಲಾನುಭವಿಗಳನ್ನು ತರಬೇತಿಗೆ ಸಜ್ಜುಗೊಳಿಸಲಾಗಿದೆ. ಶೀಘ್ರದಲ್ಲಿಯೇ ತರಬೇತಿ ಕಾರ್ಯಕ್ರಮ ಆರಂಭವಾಗಲಿದೆ,'' ಎಂದು ಕೇಂದ್ರದ ನಿರ್ದೇಶಕ ರಾಜು ಪಾಟೀಲ್ ಮಾಹಿತಿ ನೀಡಿದರು.

ಕನಿಷ್ಠ ಅರ್ಹತೆಗೂ ತರಬೇತಿ: ಎಸ್‌ಎಸ್‌ಎಲ್‌ಸಿ ಪಾಸ್ ಅಥವಾ ಫೇಲಾದ ವಿದ್ಯಾರ್ಥಿಗಳಿಗೂ ಎಲೆಕ್ಟ್ರಿಷಿಯನ್ ಮತ್ತು ಸಿಎನ್‌ಸಿ ವಿಷಯಗಳಲ್ಲಿ ಅಲ್ಪಾವಧಿ ಕೋರ್ಸ್‌ಗಳಿದ್ದು, ನೂರಕ್ಕೂ ಹೆಚ್ಚು ಮಂದಿಗೆ ಉಚಿತ ತರಬೇತಿ ನೀಡಲಾಗಿದೆ ಎನ್ನುತ್ತಾರೆ ಸಂಸ್ಥೆಯ ಅಧಿಕಾರಿಗಳು.

ಶಾಲಾ ಮಕ್ಕಳಿಗೆ ಬೇಸಿಗೆ ರಜೆಯಲ್ಲಿ ಮಹತ್ವದ ಬದಲಾವಣೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ರಾಜ್ಯದಲ್ಲಿ ಶಾಲಾ ಮಕ್ಕಳಿಗೆ ಬೇಸಿಗೆ ರಜೆ ಸಮೀಪಿಸುತ್ತಿದೆ ಮುಂದಿನ ತಿಂಗಳಲ್ಲಿ ಬಹುತೇಕ ಪರೀಕ್ಷೆಗಳು ಆರಂಭಗೊಳ್ಳಲಿದ್ದು ಪರೀಕ್ಷೆಗಳು ಮುಕ್ತಾಯವಾದ ಬೆನ್ನಲ್ಲೇ ರಜೆ ಘೋಷಣೆಯಾಗಲಿದೆ. ಅದ್ರಲ್ಲೂ ಈ ಬಾರಿ ಬೇಸಿಗೆ ರಜೆಯ ವಿಚಾರದಲ್ಲಿ ಮಹತ್ವದ ಬದಲಾವಣೆಯಾಗುವ ಸಾಧ್ಯತೆಯಿದೆ. ಈ ಬಾರಿ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಗಳಿಗೆ ಎಪ್ರೀಲ್ ತಿಂಗಳಲ್ಲಿ ಚುನಾವಣೆ ಘೋಷಣೆಯಾಗುವ ಸಾಧ್ಯತೆಯಿದೆ. ಇದಕ್ಕಾಗಿ ಸರಕಾರ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದೆ. ಈಗಾಗಲೇ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ವಿದ್ಯಾರ್ಥಿಗಳಿಗೆ ಅವಧಿಗೂ ಮೊದಲೇ ಅಂತಿಮ ಪರೀಕ್ಷೆಯನ್ನು ನಡೆಸುವ ಕುರಿತು ಅಂತಿಮ ವೇಳಾಪಟ್ಟಿಯನ್ನು ಶಿಕ್ಷಣ ಇಲಾಖೆ ಪ್ರಕಟಿಸಿದೆ. ಕಳೆದ ಬಾರಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಮಾರ್ಚ್ 25ರಂದು ಆರಂಭಗೊಂಡು, ಏಪ್ರಿಲ್ 6ರ ವರೆಗೆ ನಡೆದಿತ್ತು. ಆದರೆ ಈ ಬಾರಿ ಮಾರ್ಚ್ 21ರಂದು ಪರೀಕ್ಷೆ ಆರಂಭಗೊಂಡು ಎರಡು ದಿನಗಳ ಮೊದಲು ಅಂದ್ರೆ ಎಪ್ರಿಲ್ 4ಕ್ಕೆ ಅಂತಿಮ ಪರೀಕ್ಷೆ ನಡೆಯಲಿದೆ. ಇನ್ನು ಪಿಯುಸಿ ವೇಳಾಪಟ್ಟಿಯಲ್ಲಿಯೂ ಬದಲಾವಣೆಯನ್ನು ತರಲಾಗಿದೆ. ಪದವಿ ಪೂರ್ವ ಶಿಕ್ಷಣ ಇಲಾಖೆ ಕಳೆದ ಬಾರಿಯಂತೆ ಈ ಬಾರಿಯೂ ಮಾರ್ಚ್ 1ರಂದು ಅಂತಿಮ ಪರೀಕ್ಷೆಯನ್ನು ಆರಂಭಿಸುತ್ತಿದೆ. ಕಳೆದ ಬಾರಿ ಮಾರ್ಚ್22 ರಂದು ಅಂತಿಮ ಪರೀಕ್ಷೆ ನಡೆದಿದ್ದರೆ, ಈ ಬಾರಿ ಮಾರ್ಚ್ 20ರಂದು ಅಂತಿಮ ಪರೀಕ್ಷೆ ನಡೆಯಲಿದೆ. ಈ ಕುರಿತು ಈಗಾಗಲೇ ಅಂತಿಮ ವೇಳಾಪಟ್ಟಿ ಪ್ರಕಟವಾಗಿದೆ.

ಬಿಪಿಎಲ್ ಕಾರ್ಡ್ ದಾರರಿಗೆ ಮಹತ್ವದ ಎಚ್ಚರಿಕೆ ಕೊಟ್ಟ ಸಚಿವ

• ಉದಯವಾಹಿನಿ, ಬೆಂಗಳೂರು

ಅನ್ನಭಾಗ್ಯ ಯೋಜನೆ ಹಣ ವಿಳಂಬವಾಗುತ್ತಿರುವುದರ ಬಗ್ಗೆ ಮಾತನಾಡಿದ ಸಚಿವ ಕೆಎಚ್ ಮುನಿಯಪ್ಪ ಬಿಪಿಎಲ್ ಕಾರ್ಡ್ ದಾರರಿಗೆ ಮಹತ್ವದ ಎಚ್ಚರಿಕೆ ಕೊಟ್ಟಿದ್ದಾರೆ. ಈಗಾಗಲೇ ಪಂಚಾಯತ್ ಮಟ್ಟದಲ್ಲಿ ಬಿಪಿಎಲ್ ಕಾರ್ಡ್ ಪರಿಷ್ಕರಣೆ ನಡೆಯುತ್ತಿದೆ. ಇದು ನಿಧಾನವಾಗಿ ನಡೆಯುತ್ತಿದೆ. ಸರಿಯಾಗಿ ಪರಿಶೀಲಿಸಿ ಕೆಲಸ ನಡೆಯಬೇಕು. ಅದಕ್ಕಾಗಿ ಸ್ವಲ್ಪ ಸಮಯ ಹಿಡಿಯುತ್ತಿದೆ ಎಂದಿದ್ದಾರೆ. ಇನ್ನು, ಅರ್ಹತೆಯಿಲ್ಲದಿದ್ದರೂ ಬಿಪಿಎಲ್ ಕಾರ್ಡ್ ಹೊಂದಿರುವ ಶ್ರೀಮಂತರಿಗೆ ಎಚ್ಚರಿಕೆಯೊಂದನ್ನು ನೀಡಿದ್ದಾರೆ. ಎಪಿಎಲ್ ಕಾರ್ಡ್‌ನಲ್ಲಿರಬೇಕಾದವರು ಬಿಪಿಎಲ್ ಕಾರ್ಡ್ ಹೊಂದಿದ್ದರೆ ತಕ್ಷಣವೇ ಹಿಂದಿರುಗಿಸಿ ಎಂದು ಸಚಿವರು ಹೇಳಿದ್ದಾರೆ. ನಾವು ಸ್ವಲ್ಪ ಸಮಯ ಕೊಡುತ್ತೇವೆ. ಅದರೊಳಗೆ ಕೊಡದೇ ಇದ್ದರೆ ದಂಡ ವಿಧಿಸಬೇಕಾಗುತ್ತದೆ ಎಂದು ಎಚ್ಚರಿಕೆ ಕೊಟ್ಟಿದ್ದಾರೆ.

ಬೆಂಗಳೂರು ನಗರಕ್ಕೆ ಬಂಪರ್ ಕೊಡುಗೆ ಕೊಟ್ಟ ಕೇಂದ್ರ ಸರ್ಕಾರ

• ಉದಯವಾಹಿನಿ, ಬೆಂಗಳೂರು

ಉದ್ಯಾನ ನಗರಿ ಬೆಂಗಳೂರಿಗೆ ಕೇಂದ್ರ ಸರ್ಕಾರ ಬಂಪರ್ ಕೊಡುಗೆಯನ್ನು ನೀಡಿದೆ. 'ಪಿಎಂ ಇ-ಡ್ರೈವ್' ಯೋಜನೆಯಡಿ ನಗರಕ್ಕೆ 7,000 ಎಲೆಕ್ಟ್ರಿಕ್ ಬಸ್ ಗಳನ್ನು ನೀಡಲು ಒಪ್ಪಿಗೆ ನೀಡಲಾಗಿದೆ. ಮಹಾನಗರಗಳ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಲು ಕೇಂದ್ರ ಸರ್ಕಾರ ಈ ಮಹತ್ವದ ಯೋಜನೆಯನ್ನು ಜಾರಿಗೊಳಿಸುತ್ತಿದೆ. ಈ ಯೋಜನೆಯಡಿ ಬಸ್‌ಗಳನ್ನು ನೀಡುವಂತೆ ಹೈದರಾಬಾದ್ ಮತ್ತು ಬೆಂಗಳೂರು ನಗರಗಳು ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಕೆ ಮಾಡಿದ್ದವು. 2024ರ ಅಕ್ಟೋಬರ್‌ನಲ್ಲಿ ಕೇಂದ್ರ ಸರ್ಕಾರ ದೇಶದಲ್ಲಿ ವಿದ್ಯುತ್ ಚಾಲಿತ ವಾಹನಗಳಿಗೆ ಉತ್ತೇಜನ ನೀಡಲು ರೂಪಿಸಿರುವ 'ಪಿಎಂ ಇ-ಡ್ರೈವ್' ಯೋಜನೆಗೆ ಚಾಲನೆ ನೀಡಿತು. ಕೇಂದ್ರ ಬೃಹತ್ ಕೈಗಾರಿಕಾ ಖಾತೆ ಈ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿದೆ. ಈಗ ಬೆಂಗಳೂರು ನಗರಕ್ಕೆ ಈ ಯೋಜನೆಯ ಅಡಿ ಇ-ಬಸ್‌ಗಳನ್ನು ನೀಡಲಾಗುತ್ತಿದೆ. ಪಿಎಂ ಇ-ಡ್ರೈವ್' ಯೋಜನೆಯ ಅಡಿ ಬೆಂಗಳೂರು ನಗರಕ್ಕೆ 7,000 ಮತ್ತು ಹೈದರಾಬಾದ್ ನಗರಕ್ಕೆ 2,800 ಎಲೆಕ್ಟ್ರಿಕ್ ಬಸ್‌ಗಳನ್ನು ನೀಡಲು ಕೇಂದ್ರ ಸರ್ಕಾರ ಒಪ್ಪಿಗೆ ನೀಡಿದೆ.

ಲೋಕಾಯುಕ್ತ ವಿರುದ್ಧ ಸ್ನೇಹಮಯಿ ಕೃಷ್ಣ ಆಕ್ರೋಶ



ಮುಡಾ ಕೇಸ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಕ್ಲೀನ್‌ಚಿಟ್ ನೀಡಿ ಬಿ ರಿಪೋರ್ಟ್ ಸಲ್ಲಿಸಲು ಸಿದ್ಧತೆ ನಡೆಸಿರುವ ಮೈಸೂರು ಲೋಕಾಯುಕ್ತ ಪೊಲೀಸರ ವಿರುದ್ಧ ದೂರುದಾರ ಸ್ನೇಹಮಯಿ ಕೃಷ್ಣ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸಾಕ್ಷ್ಯಾಧಾರಗಳ ಕೊರತೆಯಿಂದ ಬಿ ರಿಪೋರ್ಟ್ ಸಲ್ಲಿಸುವುದಾಗಿ ಲೋಕಾಯುಕ್ತ ಪೊಲೀಸರು ಹೇಳಿದ್ದು , ಇದನ್ನ ನ್ಯಾಯಾಲಯದಲ್ಲಿ ಪ್ರಶ್ನಿಸಬಹುದೆಂದು ಹೇಳಿದ್ದಾರೆ. ತನಿಖೆ ಇನ್ನೂ ಬಾಕಿಯಿರುವಾಗಲೇ ಬಿ ರಿಪೋರ್ಟ್ ಸಲ್ಲಿಸಲು ಸಿದ್ಧತೆ ನಡೆಸಿದ್ದಾರೆ. ಇನ್ನು ತನಿಖೆ ಮುಕ್ತಾಯಗೊಳಿಸದೇ ಮಧ್ಯಂತರ ವರದಿ ಸಲ್ಲಿಸಲು ಮುಂದಾಗಿದ್ದಾರೆ. ಲೋಕಾಯುಕ್ತ ಪೊಲೀಸರಿಗೆ ನಾಚಿಕೆಯಾಗಬೇಕು ಎಂದು ಸ್ನೇಹಮಯಿ ಕೃಷ್ಣ ಕಿಡಿಕಾರಿದ್ದಾರೆ.

ಸಾಕ್ಷ್ಯಾಧಾರಗಳ ಕೊರತೆ; ಸಿಎಂ ಕ್ಲೀನ್‌ಚಿಟ್

ಸಿಎಂ ಸಿದ್ದರಾಮಯ್ಯಗೆ ಶಿಕ್ಷೆ ಕೊಡಿಸುವೆ: ಸ್ನೇಹಮಯಿ ಕೃಷ್ಣ ಶಪಥ

ವಾಷಿಂಗ್ ನಿರ್ಮಾ ಪೌಡರ್ ಹಾಕಿ ತೊಳೆದಿದ್ದಾರೆ

ಲೋಕಾಯುಕ್ತ ಕ್ಲೀನ್‌ಚಿಟ್‌ಗೆ ಅಶೋಕ್ ವ್ಯಂಗ್ಯ

ಮುಡಾ ಬಿಗ್ ಟ್ವಿಸ್ಟ್..!

ಲೋಕಾ ಕ್ಲೀನ್‌ಚಿಟ್

ಸಿದ್ದರಾಮಯ್ಯಗೆ ಬಿಗ್ ರಿಲೀಫ್



ಲೋಕಾಯುಕ್ತ

ನ್ಯಾಯ ಯಾರಿಗೆ ಕೊಟ್ಟಿದ್ದಾರೆ

• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣ ಪ್ರಕರಣ ತನಿಖೆ ಮುಕ್ತಾಯವಾಗಿದ್ದು, ಮೈಸೂರು ಲೋಕಾಯುಕ್ತ ನ್ಯಾಯಾಲಯಕ್ಕೆ ವರದಿ ಸಲ್ಲಿಸಲು ಮುಂದಾಗಿದೆ. ತನಿಖಾ ವರದಿಯಲ್ಲಿ ಸಿಎಂ ಸಿದ್ದರಾಮಯ್ಯಗೆ ಕ್ಲೀನ್‌ಚಿಟ್ ನೀಡಲಾಗಿದೆ. ಈ ಸಂಬಂಧ ದೂರುದಾರ ಸ್ನೇಹಮಯಿ ಕೃಷ್ಣಗೆ ಲೋಕಾಯುಕ್ತ ನೋಟಿಸ್ ನೀಡಿದೆ. 01 ಸಿದ್ದರಾಮಯ್ಯ, 02 ಪಾರ್ವತಿ, 03 ಮಲ್ಲಿಕಾರ್ಜುನ ಸ್ವಾಮಿ, 04 ದೇವರಾಜು ವಿರುದ್ಧ ದಾಖಲಾದ ಕೇಸ್‌ನಲ್ಲಿ ಸಾಕ್ಷ್ಯಾಧಾರಗಳ ಕೊರತೆಯಿಂದ ತನಿಖೆಗೆ ಅರ್ಹವಲ್ಲದ ಪ್ರಕರಣ ಎನ್ನುವುದನ್ನು ತಿಳಿಸಿದೆ. ಸಾಕ್ಷ್ಯಾಧಾರಗಳ ಕೊರತೆಯಿಂದ ಬಿ ರಿಪೋರ್ಟ್ ಸಲ್ಲಿಸುವುದಾಗಿ ಲೋಕಾಯುಕ್ತ ಮಾಹಿತಿ ನೀಡಿದೆ.

ಲೋಕಾಯುಕ್ತ ನೋಟಿಸ್‌ನಲ್ಲೇನಿದೆ..

ಪ್ರಕರಣ ತನಿಖೆ ವರದಿ ಸಂಬಂಧ ಲೋಕಾಯುಕ್ತ ಅಧಿಕಾರಿಗಳು ದೂರುದಾರ ಸ್ನೇಹಮಯಿ ಕೃಷ್ಣ ಅವರಿಗೆ ನೋಟಿಸ್ ಜಾರಿ ಮಾಡಿದ್ದು, ಸಾಕ್ಷ್ಯಾಧಾರಗಳ ಕೊರತೆಯಿಂದ ಈ ಪ್ರಕರಣ ತನಿಖೆಗೆ ಅರ್ಹವಲ್ಲ ಎಂದು ತಿಳಿಸಿದೆ.

ತನಿಖಾಧಿಕಾರಿಗಳಿಗೆ ಸಿವಿಲ್ ಸ್ವರೂಪದ್ದೆಂದು ತನಿಖೆ ನಡೆಸಲು ತಕ್ಕುದಲ್ಲವೆಂದು ಸಂಗತಿ ಅಥವಾ ಕಾನೂನಿನ ತಪ್ಪು ತಿಳುವಳಿಕೆಯೆಂದು ಕ್ರಮ ಜರುಗಿಸತಕ್ಕುದಲ್ಲವೆಂದು ಇದರಡಿಯಲ್ಲಿ ತನಿಖೆ ನಡೆಸದೆ ವಜಾ ಮಾಡಿದ ಮೊಕದ್ದಮೆಗಳು ಬರುತ್ತವೆ. ಸಾಕ್ಷ್ಯಾಧಾರಗಳ ಕೊರತೆ ಎಂದು ಕಂಡು ಬಂದಿದೆ. ಹೀಗಾಗಿ ಈ ಪ್ರಕರಣ ತನಿಖೆಗೆ ಅರ್ಹವಲ್ಲ ಎಂದಿದೆ. ಇನ್ನು ಈ ವರದಿಯನ್ನು ವಿರೋಧಿಸುವುದಿದ್ದರೆ ತಾವು ಈ ನೋಟೀಸು ತಲುಪಿದ ಒಂದು ವಾರದೊಳಗಾಗಿ ಮ್ಯಾಜಿಸ್ಟ್ರೇಟರ್ ಎದುರು ಆ ಬಗ್ಗೆ ವಿರೋಧಿಸಬಹುದಾಗಿದೆ ಎಂದು ತಿಳಿಸಿದೆ.

ಸಿದ್ದರಾಮಯ್ಯಗೆ ಬಿಗ್ ರಿಲೀಫ್: ಮುಡಾ ಹಗರಣದ ತನಿಖೆಯನ್ನು ಸಿಬಿಐಗೆ ವಹಿಸುವಂತೆ ದೂರುದಾರ ಸ್ನೇಹಮಯಿಕೃಷ್ಣ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿತ್ತು. ಇದರ ಬೆನ್ನಲ್ಲೇ ಇದೀಗ ಲೋಕಾಯುಕ್ತ ಸಹ ಈ ಪ್ರಕರಣ ತನಿಖೆಗೆ ಅರ್ಹವಲ್ಲ ಎಂದು ಅಭಿಪ್ರಾಯಪಟ್ಟಿದೆ. ಹೀಗಾಗಿ ಸಿದ್ದರಾಮಯ್ಯ ಹಾಗೂ ಅವರ ಪತ್ನಿ ಪಾರ್ವತಿ ಸೇರಿದಂತೆ ಉಳಿದ ಇಬ್ಬರಿಗೂ ರಿಲೀಫ್ ಸಿಕ್ಕಂತಾಗಿದೆ. ಅದರಲ್ಲೂ ಮುಖ್ಯವಾಗಿ ಚುನಾವಣೆ ರಾಜಕೀಯ ಕೊನೆ ಹಂತದಲ್ಲಿ ಇರುವಾಗಲೇ ಈ ಮುಡಾ ಹಗರಣ ಮೈಮೇಲೆ ಬಂದಿದ್ದರಿಂದ ಸಿದ್ದರಾಮಯ್ಯ ಆತಂಕಕೊಂಡಿದ್ದರು. ಆದ್ರೆ, ಇದೀಗ ನಿಟ್ಟುಸಿರುಬಿಟ್ಟಿದ್ದಾರೆ.

ಪ್ರಕರಣದ ಹಿನ್ನೆಲೆ

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಬಿ ಎಂ ಪಾರ್ವತಿ ಅವರು ಅಕ್ರಮವಾಗಿ 14 ನಿವೇಶನ ಪಡೆದಿದ್ದಾರೆ ಎನ್ನಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿದ್ದರಾಮಯ್ಯ ಸೇರಿ ಐವರು ಆರೋಪಿಗಳ ವಿರುದ್ಧ ವಿಶೇಷ ತನಿಖಾ ದಳ ಅಥವಾ ಬೇರಾವುದೇ ಸ್ವತಂತ್ರ ತನಿಖಾ ಸಂಸ್ಥೆಯಿಂದ ತನಿಖೆಗೆ ಆದೇಶಿಸಬೇಕು ಎಂದು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ 2024ರ ಆಗಸ್ಟ್ 8ರಂದು ಸ್ನೇಹಮಯಿ ಕೃಷ್ಣ ದೂರು ನೀಡಿದ್ದರು. ದೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಅವರ ಪತ್ನಿ ಪಾರ್ವತಿ, ಭಾವ ಮೈದುನ ಮಲ್ಲಿಕಾರ್ಜುನ ಸ್ವಾಮಿ, ಜೆ ದೇವರಾಜು ಹಾಗೂ ಇತರೆ ಹೆಸರಿನಡಿ ಐವರನ್ನು ಆರೋಪಿಗಳನ್ನಾಗಿಸಲಾಗಿತ್ತು. ಬೆನ್ನಿಗೇ ರಾಜ್ಯಪಾಲರು ಸಿದ್ದರಾಮಯ್ಯ ಮತ್ತು ಇತರೆ ಆರೋಪಿಗಳ ತನಿಖೆಗೆ ಅನುಮತಿಸಿದ್ದರು. ಇದನ್ನು ಸಿದ್ದರಾಮಯ್ಯ ಹೈಕೋರ್ಟ್‌ನಲ್ಲಿ ಪ್ರಶ್ನಿಸಿದ್ದರು. ರಾಜ್ಯಪಾಲರ ನಿರ್ಣಯ ಹೈಕೋರ್ಟ್ ಎತ್ತಿ ಹಿಡಿಯುತ್ತಿದ್ದಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ಸಿದ್ದರಾಮಯ್ಯ ಮತ್ತು ಇತರರ ವಿರುದ್ಧ ಎಫ್‌ಐಆರ್ ದಾಖಲಿಸಲು ಆದೇಶಿಸಿತ್ತು. ಇದರ ಅನ್ವಯ 2024ರ ಸೆ.27ರಂದು ಲೋಕಾಯುಕ್ತ ಪೊಲೀಸರು ಎಫ್‌ಐಆರ್ ದಾಖಲಿಸಿದ್ದರು.

ಕ್ಲೀನ್‌ಚಿಟ್ ಕೊಡ್ತಾರೆ ಪೊಲೀಸರು



ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಿದ ಲೋಕಾಯುಕ್ತ ಅಧಿಕಾರಿಗಳು ಸಿಎಂ ಸಿದ್ದರಾಮಯ್ಯನವರಿಗೆ ಕ್ಲೀನ್ ಚಿಟ್ ನೀಡಿದೆ. ಈ ಕುರಿತು ಪ್ರತಿಕ್ರಿಯೆ ನೀಡಿದ ವಿಪಕ್ಷ ನಾಯಕ ಆರ್ ಅಶೋಕ್ ಸಿಎಂ ಸೈಟ್ ವಾಪಾಸ್ ಕೊಟ್ಟಿರುವುದು ನಮ್ಮ ಹೋರಾಟದಿಂದ. ಆದ್ರೂ ಲೋಕಾಯುಕ್ತ ಕ್ಲೀನ್ ಚಿಟ್ ನೀಡಿರುವುದಕ್ಕೆ ನಮಗೆ ಬೇಸರ ಇದೆ. ನಮಗಿಂತಲೂ ಹೆಚ್ಚು ಕಾಂಗ್ರೇಸ್‌ನ ಕೆಲವು ನಾಯಕರಿಗೆ ಬೇಸರ ತರಿಸಿದೆ ಎಂದು ವ್ಯಂಗ್ಯವಾಡಿದರು. ಬಿಜೆಪಿ ಮತ್ತು ಜೆಡಿಎಸ್ ಮುಡಾ ವಿಚಾರದಲ್ಲಿ ಅಧಿವೇಶನದಲ್ಲಿ ಚರ್ಚೆ ಮ

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

ಸ್ವಾಧ್ಯಾಯೇನ ವ್ರತೈರ್ಹೋಮೈಃ

ತ್ರೈವಿದ್ಯೇನೇಜ್ಯಯಾ ಸುತೈಃ
ಮಹಾಯಜ್ಞೈಶ್ಚ ಯಜ್ಞೈಶ್ಚ
ಬ್ರಾಹ್ಮೀಯಂ ಕ್ರಿಯತೇ ತನುಃ.

ಮನುಸ್ಮೃತಿಯ ಎರಡನೇ ಅಧ್ಯಾಯದ ಇಪ್ಪತ್ತೆಂಟನೇ ಶ್ಲೋಕ. ಮಗುವು ತಾಯಿಯ ಉದರದಲ್ಲಿ ಬೆಳೆಯುವ ಹಂತದಲ್ಲಿ ತಂದೆ ತಾಯಿಗಳಾಗುವವರು ಆದರ್ಶ ಭಾವ ನಡೆಯವರಾಗಿರಲಿ. ಎಂಥ ಗೊಬ್ಬರ ನೀರನ್ನು ಹಾಕುವೆವೋ ಅಂಥ ಬೆಳೆ. ಬೆಳವಣಿಗೆ ಎಂದರೆ ಕೇವಲ ಭೌತಿಕ ಸ್ಥೂಲ ದೇಹದ ಬೆಳವಣಿಗೆ ಮಾತ್ರವಲ್ಲ. ಸೂಕ್ಷ್ಮ ಚೈತನ್ಯದ ಬೆಳವಣಿಗೆಯೂ ಮುಖ್ಯ. ತಂದೆ ತಾಯಿಯರ ಸದ್ಭಾವ ಭ್ರೂಣಾವಸ್ಥೆಯಲ್ಲಿಯೇ ಮಗುವಿಗೆ ಸಂಕ್ರಮಣವಾಗುವುದು. ಸುಜಾತಾಳ ಗರ್ಭದಲ್ಲಿದ್ದ ಅಷ್ಟಾವಕ್ರ ತಂದೆ ಕಹೋಡ ಮಾಡುತ್ತಿದ್ದ ವೇದಪಾರಾಯಣ ಕೇಳಿ ಕೇಳಿ ಕಂಠಸ್ಥ ಮಾಡಿಕೊಂಡಿದ್ದನಂತೆ. ಒಮ್ಮೆ ಆಕಸ್ಮಿಕವಾಗಿ ಕಹೋಡ ತಪ್ಪಾಗಿ ಉಚ್ಚರಿಸಿದಾಗ ಗರ್ಭಸ್ಥ ಶಿಶು ಗಹಗಹಿಸಿ ನಕ್ಕಿತಂತೆ! ಆದ್ದರಿಂದ ತಂದೆ ತಾಯಿಗಳು ಸದಾ ವ್ರತದಲ್ಲಿರಬೇಕು. ಸ್ವಾಧ್ಯಯನ ಪೂಜೆ ಪುನಸ್ಕಾರ ಹೋಮ ಹವನ ದಾನ ಧರ್ಮ ಪುರಾಣ ಪ್ರವಚನ ಪುಣ್ಯಕಥಾಶ್ರವಣ ಮುಂತಾದವುಗಳಿಂದ ಶುದ್ಧ ಭಾವ ನಡೆಯಲ್ಲಿರಬೇಕು. ಇಂಥವರು ಮಗು ಹುಟ್ಟಿದ ಬಳಿಕವೂ ಮಗುವಿಗೆ ಉತ್ತಮ ಸಂಸ್ಕಾರ ನೀಡಲು ಸಾಧ್ಯ. ಹೊಟ್ಟೆ ಹೊರೆಯಲು ನಗಿಸುವ ಮನರಂಜಿಸುವ ಪವಿತ್ರ ಸಂಬಂಧಗಳಿಗೆ ಬೆಂಕಿ ಹಚ್ಚುವ ಧಾರಾವಾಹಿ ಮೊಬೈಲ್ ಗಳಲ್ಲಿ ಕಾಲ ಕಳೆಯುವ ತಾಯಿ ತಂದೆಯರಿಂದ ಮಕ್ಕಳು ಸುಸಂಸ್ಕೃತರಾಗುವುದು ಕನಸಿನ ಮಾತು.

ಬಸನಗೌಡ ಪಾಟೀಲ್ ಯತ್ನಾಳ್‌ಗೆ ಕ್ರಮ ಆಗುತ್ತಾ, ಬಿವೈವಿ ಹೇಳಿದ್ದೇನು

• **ಉದಯವಾಹಿನಿ, ಬೆಂಗಳೂರು,**

ಬಸನಗೌಡ ಪಾಟೀಲ್ ಯತ್ನಾಳ್‌ಗೆ ನೋಟಿಸ್ ನೀಡಿದ ವಿಚಾರವಾಗಿ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಪ್ರತಿಕ್ರಿಯಿಸಿದ್ದಾರೆ. ಕಳೆದ ಒಂದು ವಾರದಿಂದ ಬಹಿರಂಗ ಹೇಳಿಕೆಗಳು ಕಡಿಮೆಯಾಗಿದೆ, ಕೇಂದ್ರ ಶಿಸ್ತು ಸಮಿತಿ ನೋಟಿಸ್ ಕೊಟ್ಟಿದೆ ಎಂದು ಹೇಳಿದರು. ಬೆಂಗಳೂರಲ್ಲಿ ಮಾತನಾಡಿದ ಅವರು, ಕರ್ನಾಟಕ ಬಿಜೆಪಿಯಲ್ಲಿನ ಆಂತರಿಕ ಸಮಸ್ಯೆ ವರಿಷ್ಠರ ಗಮನಕ್ಕೆ ಬಂದಿದೆ. ಬಹಿರಂಗವಾಗಿ ಮಾತನಾಡುವವರಿಗೆ ಕೇಂದ್ರ ಶಿಸ್ತು ಸಮಿತಿ ನೋಟಿಸ್ ಅನ್ನ ಕೊಟ್ಟಿದೆ. ನೋಟಿಸ್‌ಗೆ ಯಾರು ಉತ್ತರವನ್ನು ನೀಡಬೇಕು ನೀಡಿದ್ದಾರೆ. ಕ್ರಮ ಏನಾಗಬೇಕು ಅದರ ಬಗ್ಗೆ ಹೈಕಮಾಂಡ್ ತೀರ್ಮಾನ ಮಾಡುತ್ತೆ ಎಂದು ಹೇಳಿದರು. ನಮ್ಮ ಮುಂದೆ ದೊಡ್ಡ ಸವಾಲ್ ಇದೆ, ಭ್ರಷ್ಟ ಸರ್ಕಾರದ ವಿರುದ್ಧ ಎಲ್ಲರೂ ಒಗ್ಗಟ್ಟಾಗಿ ಹೋರಾಡಬೇಕಿದೆ, ಇನ್ನೂ ಹೆಚ್ಚಿನ ಹೋರಾಟ ಮಾಡುತ್ತೇವೆ, ಪಕ್ಷ ಕಟ್ಟುವ ಕೆಲಸವನ್ನು ಮಾಡಬೇಕಿದೆ ಎಂದು ಹೇಳಿದರು.

ಆಟವಾಡುತ್ತಿದ್ದ ಮಗು ಮೇಲೆ ಹರಿದ ಜೆಸಿಬಿ

• **ಉದಯವಾಹಿನಿ, ಬೆಂಗಳೂರು,**

ಜೆಸಿಬಿ ಹರಿದು ಆಟವಾಡುತ್ತಿದ್ದ 2 ವರ್ಷದ ಮಗು ದುರ್ಮರಣ ಹೊಂದಿರುವಂತಹ ಘಟನೆ ಬೆಂಗಳೂರಿನ ಕಾಡುಗೋಡಿ ಬಳಿಯ ಸಿಟಿ ಲೇಔಟ್‌ನಲ್ಲಿ ನಡೆದಿದೆ. ಧನವ್ ರೆಡ್ಡಿ ಮೃತ ಮಗು. ಜೆಸಿಬಿ ಚಾಲಕನ ಅತಿವೇಗ, ಅಜಾಗರೂಕತೆಯಿಂದ ಘಟನೆ ಸಂಭವಿಸಿದೆ. ಮಹದೇವಪುರ ಸಂಚಾರಿ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಾಗಿದ್ದು, ತಲೆ ಮರೆಸಿಕೊಂಡಿರುವ ಜೆಸಿಬಿ ಚಾಲಕನಿಗಾಗಿ ಪೊಲೀಸರು ಶೋಧ ನಡೆಸಿದ್ದಾರೆ. ಮನೆ ಮುಂದೆ ಧನವ್ ರೆಡ್ಡಿ ಆಟವಾಡುತ್ತಿದ್ದ. ಈ ವೇಳೆ ಆತನ ಮೇಲೆ ಜೆಸಿಬಿ ಹರಿದಿದೆ. ಘಟನೆಯಲ್ಲಿ ಗಾಯಗೊಂಡಿದ್ದ ಮಗುವನ್ನು ವೈದೇಹಿ ಆಸ್ಪತ್ರೆಗೆ ಪೋಷಕರು ಕರೆದುಕೊಂಡು ಹೋಗಿದ್ದು, ಆದರೆ ಮಾರ್ಗಮಧ್ಯೆಯೇ ಮಗು ಮೃತಪಟ್ಟಿರುವುದಾಗಿ ವೈದ್ಯರು ತಿಳಿಸಿದ್ದಾರೆ. ವೈದೇಹಿ ಆಸ್ಪತ್ರೆಯಲ್ಲಿ ಧನವ್ ರೆಡ್ಡಿ(2) ಮರಣೋತ್ತರ ಪರೀಕ್ಷೆ ಮಾಡಲಾಗಿದೆ.

ವೈದ್ಯರೋರ್ವರಿಗೆ ಬೆಂಗಳೂರು ಸೊಸೆ ಮಾಡಿದ ಮೆಸೇಜ್ ವೈರಲ್!

• **ಉದಯವಾಹಿನಿ, ಬೆಂಗಳೂರು,**

ಅತ್ತೆಯನ್ನು ಸಾಯಿಸೋದಕ್ಕೆ ಮಾತ್ರೆ ಬರೆದುಕೊಡಿ ಡಾಕ್ಟ್ರೇ.. ಹೀಗೊಂದು ಮೆಸೇಜ್ ವಾಟ್ಸಾಪ್‌ನಲ್ಲಿ ಬಂದಾಕ್ಷಣ ಬೆಂಗಳೂರಿನ ವೈದ್ಯರಾಗಿರುವ ಡಾ ಸುನೀಲ್ ಕುಮಾರ್ ಗಲಿಬಿಲಿಗೊಂಡಿದ್ದಾರೆ. ಹೌದು ಅತ್ತೆ ಸೊಸೆ ಜಗಳ ಬಹುತೇಕ ಕಡೆ ಇದೆ. ಆದರೆ ಹಿರಿಯರೆನ್ನುವ ಗೌರವ ಕೊಟ್ಟು, ಹಲವು ಕಡೆ ಹೊಂದಾಣಿಕೆ ಮಾಡಿಕೊಂಡು ಸಂಸಾರದ ದೋಣಿ ಸಾಗುತ್ತಿರುತ್ತದೆ. ಇನ್ನು ಕೆಲವಡೆ ಜಗಳ ಅತಿರೇಕಕ್ಕೆ ಹೊಗಿ, ಹೊಡೆದಾಟ, ಬಡಿದಾಟಗಳ ವಿಡಿಯೋ ಕೂಡಾ ವೈರಲ್ ಆಗಿದ್ದನ್ನು ನೋಡಿದ್ದೇವೆ. ಆದರೆ ಇಲ್ಲೊಂದು ವಿಚಿತ್ರ ಪ್ರಕರಣ ಅತ್ತೆಯನ್ನು ಸಾಯಿಸುವ ನಿರ್ಧಾರಕ್ಕೆ ಬಂದು ಬಿಟ್ಟಿದ್ದಾಳೆ ಓರ್ವ ಸೊಸೆ. ಅತ್ತೆ ಕಾಟ ತುಂಬಾ ಜಾಸ್ತಿಯಾಗಿದೆ, ಹೇಗಾದ್ರು ಮಾಡಿ ಸಾಯಿಸಬೇಕಿತ್ತು, ಮಾತ್ರೆ ಹೇಳಿ ಅಂತ ಬೆಂಗಳೂರು ವೈದ್ಯ ಸುನಿಲ್ ಕುಮಾರ್ ಅವರಿಗೆ ಮಾಡಿದ ಮೆಸೇಜ್ ಈಗ ವೈರಲ್ ಆಗಿದೆ. ಆದ್ರೆ ಇದನ್ನು ಅಲ್ಲಿಗೇ ಬಿಡದ ವೈದ್ಯರು, ಇಂತಹ ಪ್ರಕರಣಗಳು ಆಗುತ್ತಲೇ ಇರುತ್ತವೆ, ಇದನ್ನು ನೆಗ್ಲೆಕ್ಟ್ ಮಾಡ್ಬಾರ್ದು ಅಂತ ಸಂಜಯ ನಗರ ಠಾಣೆಯಲ್ಲಿ ದೂರು ಕೊಟ್ಟಿದ್ದೇನೆ.

ಜಮೀನು ಖರೀದಿಯಲ್ಲಿ ಅಕ್ರಮ ನಡೆದಿಲ್ಲ

ನಾನು ಸಿಎಂ ನವರ ತರ ಸರ್ಕಾರ ಜಮೀನು ಲೂಟಿ ಮಾಡಿಲ್ಲ ಆಕ್ರೋಶ

• **ಉದಯವಾಹಿನಿ, ಬೆಂಗಳೂರು,**

ರಾಮನಗರ ಜಿಲ್ಲೆ ಬಿಡದಿ ಹೋಬಳಿಯ ಕೇತಗಾನಹಳ್ಳಿಯಲ್ಲಿ ತಮಗೆ ಸೇರಿದ ಜಮೀನನ್ನು ನಾನು 40 ವರ್ಷದ ಹಿಂದೆಯೇ ಖರೀದಿ ಮಾಡಿದ್ದೇನೆ. ಈ ಹಿಂದೆಯೇ ಹತ್ತಾರು ಬಾರಿ ಸರ್ವೆ, ತನಿಖೆ ಎಲ್ಲವೂ ನಡೆದಿದೆ. ಈಗ ಮತ್ತೆ ನಿನ್ನೆ ಸರ್ವೇ ಕಾರ್ಯ ನಡೆಸಿದ್ದಾರೆ. ತನಿಖೆ ಮಾಡುವುದಕ್ಕೆ ನಾನು ಮುಕ್ತವಾಗಿದ್ದೇನೆ. ಯಾವುದೇ ಅಕ್ರಮ ಆಗಿಲ್ಲ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಹೇಳಿದರು. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನನ್ನನ್ನು ಟಾರ್ಗೆಟ್ ಮಾಡಿ ಸರ್ವೇ ಮಾಡಿಸುತ್ತಿದ್ದಾರೆ. ಇದರಲ್ಲಿ ಸಂಶಯವೇ ಬೇಡ. ಯಾವುದೇ ತನಿಖೆ ಮಾಡಲಿ, ನಾನು ಮುಕ್ತವಾಗಿದ್ದೇನೆ. ನಾನು ಮುಖ್ಯಮಂತ್ರಿ ಸಿದ್ದರಾಮಯ್ಯನವರ ತರ ಸರ್ಕಾರ ಜಮೀನು ಲೂಟಿ ಮಾಡಿಲ್ಲ ಎಂದು ಆಕ್ರೋಶ ಹೊರ ಹಾಕಿದರು. ಕೇತಗಾನಹಳ್ಳಿಯ ತಮ್ಮ ಜಮೀನಿಗೆ ಸಂಬಂಧಿಸಿದಂತೆ ನಿನ್ನೆ ಕಾಂಗ್ರೇಸ್‌ನ ಕೆಲ ಪುಡಾರಿಗಳು ದೂರುದಾರನನ್ನು ಕರೆಸಿ ಮಾತನಾಡಿಸಿದ್ದಾರೆ. 40 ವರ್ಷ ಇಲ್ಲದ ದೂರುದಾರರು ಈಗ ಹೇಗೆ ಉದ್ಭವವಾದರು ಎಂದು ಪ್ರಶ್ನಿಸಿದ ಅವರು, ತನಿಖೆ ನಡೆಸಲಿ, ನನ್ನದೇನೂ ತಕರಾರಿಲ್ಲ. ಸರ್ವೆ ನಡೆಸುವಂತೆ ಡಿಸಿಯವರಿಗೂ ಹೇಳಿದ್ದೇನೆ ಎಂದರು. 40 ವರ್ಷಗಳಿಂದ ನನ್ನನ್ನು ಗುರಿಯಾಗಿಸಿ ಈ ರೀತಿಯ ತನಿಖೆಗಳನ್ನು ನಡೆಸುತ್ತಿದ್ದಾರೆ. 1986-87 ರಲ್ಲಿ ಮಾಜಿ ಶಾಸಕ ಸಿ.ಎಂ. ಲಿಂಗಪ್ಪ, ಜಿ.ಪಂ. ಮಾಜಿ ಸದಸ್ಯ ರಾಮಚಂದ್ರ ಎನ್ನುವವರು ಅಂದಿನ ಮುಖ್ಯಮಂತ್ರಿ, ಪ್ರಧಾನಿ, ಗೃಹ ಸಚಿವರಿಗೆ ದೂರು ನೀಡಿ ಕಾನೂನು ಬಾಹಿರ ಭೂಮಿ ಖರೀದಿ ಮಾಡಿದ್ದಾರೆ ಎಂದೆಲ್ಲಾ ಹೇಳಿದ್ದರು. ಎಲ್ಲಾ ದಾಖಲೆಗಳು ನನ್ನ ಬಳಿ ಇದೆ. ನನ್ನನ್ನು ಟಾರ್ಗೆಟ್ ಮಾಡಿ ಎಷ್ಟು ಬಾರಿ ತನಿಖೆ ನಡೆಸುತ್ತೀರಿ, 2023ರ ಮಾರ್ಚ್‌ನಲ್ಲಿ ಲೋಕಾಯುಕ್ತ ವರದಿ ಕೊಟ್ಟಿದೆ. ಸಿದ್ದರಾಮಯ್ಯ ಅವರು ಏನೇನು ಸಭೆ ಮಾಡಿಸಿದ್ದಾರೆ, ಯಾರನ್ನು ಕರೆಸಿಕೊಂಡು ಮೀಟಿಂಗ್ ಮಾಡಿದ್ದಾರೆ ಎಲ್ಲವೂ ಗೊತ್ತಿದೆ ಎಂದರು. ನನ್ನ ಜಮೀನಿನ ತನಿಖೆಗೆ 5 ಜನರ ಎಸ್‌ಐಟಿ ತಂಡ ಮಾಡಿದ್ದಾರೆ. ಪೊಲೀಸ್ ಇಲಾಖೆ ಎಸ್‌ಐಟಿ ಆಯ್ತು, ಈಗ ಐಎಎಸ್ ಅಧಿಕಾರಿಗಳ ಎಸ್‌ಐಟಿ ತಂಡವನ್ನು ಸಿದ್ದರಾಮಯ್ಯ ರಚನೆ ಮಾಡಿದ್ದಾರೆ. ನಾನು ಎಲ್ಲದಕ್ಕೂ ಮುಕ್ತ ಇದ್ದೇನೆ ಎಂದರು. ಮುಖ್ಯಮಂತ್ರಿ ಸಿದ್ದರಾಮಯ್ಯನವರ ರೀತಿ ಸರ್ಕಾರಿ ಭೂಮಿಯನ್ನು ಸುಳ್ಳು ದಾಖಲೆ ಸೃಷ್ಟಿ ಮಾಡಿ ಪಡೆದಿಲ್ಲ. ಅವರಿಗೆ ಅಧಿಕಾರ ಇದೆ, ಏನು ಬೇಕಾದರೂ ಮಾಡುತ್ತಾರೆ. ಎಲ್ಲದಕ್ಕೂ ಕಾಲವೇ ಉತ್ತರ ಕೊಡುತ್ತದೆ ಎಂದು ಅವರು ಹೇಳಿದರು. ಅನ್ನಭಾಗ್ಯ ಮತ್ತು ಗೃಹಲಕ್ಷ್ಮಿ ಯೋಜನೆಯ ಹಣ ಪಾವತಿಯಾಗದ ಬಗ್ಗೆ ಪ್ರತಿಕ್ರಿಯಿಸಿದ ಕುಮಾರಸ್ವಾಮಿ ಅವರು, ರಾಜ್ಯದ ಜನರ ಸಮಸ್ಯೆಗಳ ಬಗ್ಗೆ ಮಾಧ್ಯಮಗಳು ಸುದ್ದಿ ಮಾಡಿದರೆ ಅವುಗಳಿಗೆ ಕೆಲಸ ಇಲ್ಲ ಎಂದು ಹೇಳುತ್ತಾರೆ. ನಮಗೂ ರಾಜ್ಯಗಳ ವಿಚಾರಗಳ ಬಗ್ಗೆ ನಮ್ಮದೇ ಆದ ಬದ್ಧತೆ ಇದೆ. ಎಲ್ಲದರ ಬಗ್ಗೆಯೂ ಇನ್ನೊಂದು ವಾರ ಕಳೆಯಲಿ, ಮಾತನಾಡುತ್ತೇನೆ ಎಂದರು. ಮುಡಾ ಪ್ರಕರಣದಲ್ಲಿ ಲೋಕಾಯುಕ್ತ ತನಿಖೆ ವರದಿಯನ್ನು ಯಾರಾದರೂ ತನಿಖೆ ಎನ್ನುತ್ತಾರಾ, ಸಿದ್ದರಾಮಯ್ಯ ಅವರ ಕೆಳಗೆ ಕೆಲಸ ಮಾಡುವ ಅಧಿಕಾರಿಗಳು ಮುಖ್ಯಮಂತ್ರಿಗಳ ವಿರುದ್ಧ ವರದಿ ಕೊಡುತ್ತಾರಾ, ತನಿಖೆ ಹೇಗೆ ಆಗಿದೆ ಎಂಬುದು ನಮಗೂ ಗೊತ್ತಿದೆ. ತನಿಖಾಧಿಕಾರಿ ವರದಿ ಸಲ್ಲಿಸುವ ಮೊದಲು ಮೇಲಾಧಿಕಾರಿಗಳಿಗೆ ವರದಿ ನೀಡಿ ಅವರಿಂದ ಅನುಮೋದನೆ ಪಡೆದು ಲೋಕಾಯುಕ್ತರಿಗೆ ವರದಿ ಕೊಡುತ್ತಾರಂತೆ.

ತನಿಖೆಗೆ ಮುಕ್ತ

ಡಿಕೆಶಿ ಅವರು ಮಾಜಿ ಪ್ರಧಾನಿ ದೇವೇಗೌಡರ ಬಗ್ಗೆ ಲಘುವಾಗಿ ಮಾತನಾಡಿರುವುದನ್ನು ಗಮನಿಸಿದ್ದೇನೆ. ಡಿ.ಕೆ. ಶಿವಕುಮಾರ್ ಕೊಡುಗೆ ರಾಜ್ಯಕ್ಕೆ ಏನಿದೆ, ದುಡ್ಡು ಹೊಡೆದಿರುವುದೇ ಅವರ ಕೊಡುಗೆ ಎಂದು ವ್ಯಂಗ್ಯವಾಡಿದರು. ಇನ್ನೊಂದು ವಾರ ನೋಡೋಣ, ಈ ಸರ್ಕಾರ ಏನೇನು ಮಾಡುತ್ತೆ, ಎಲ್ಲದರ ಬಗ್ಗೆಯೂ ಮಾತನಾಡುತ್ತೇನೆ. ರಾಜ್ಯದಲ್ಲಿ ಜನರ ಸಮಸ್ಯೆ ಬಗ್ಗೆ ಚರ್ಚೆ ಮಾಡುತ್ತಿಲ್ಲ ಎಂದು ಅವರು ಹೇಳಿದರು.

ನೀರಾವರಿ ವಿಚಾರದಲ್ಲಿ ಮಾಜಿ ಪ್ರಧಾನಿ ದೇವೇಗೌಡರು ಪ್ರಧಾನಿ ಮೋದಿಯವರ ಫಿಯರ್ ಲೀಡರ್ ಆಗುವುದು ಬೇಡ ಎಂಬ ಸಿದ್ದರಾಮಯ್ಯ ಹೇಳಿಕೆಗೂ ಕಿಡಿಕಾರಿದ ಅವರು, ಸಿದ್ದರಾಮಯ್ಯನವರಿಂದ ದೇವೇಗೌಡರು ನೀರಾವರಿ ವಿಚಾರದಲ್ಲಿ ರಾಜ್ಯದ ಹಿತರಕ್ಷಣೆ ಮಾಡಲಿಕ್ಕೆ ಪಾಠ ಹೇಳಿಸಿಕೊಳ್ಳುವ ಅಗತ್ಯವಿಲ್ಲ. ರಾಜ್ಯದ ನೆಲ, ಜಲ, ಭಾಷೆಯ ವಿಚಾರದಲ್ಲಿ ಸಿದ್ದರಾಮಯ್ಯನವರ ಕೊಡುಗೆ ಏನಿದೆ, ಎಂದಾದರೂ ಅವರು ನೀರಾವರಿ ಬಗ್ಗೆ ವಿಧಾನಸಭೆಯಲ್ಲಿ ಮಾತನಾಡಿದ್ದಾರಾ ಎಂದು ವಾಗ್ದಾಳಿ ನಡೆಸಿದರು.

ಫೆ. 20ರಂದು ನೀರು ಪೂರೈಕೆ ಸ್ಥಗಿತ

• **ಉದಯವಾಹಿನಿ, ಬೆಂಗಳೂರು,**

ನಾಲ್ಕನೇ ಹಂತದ ಕಾವೇರಿ ನೀರು ಪೂರೈಕೆ ಯೋಜನೆ ಕಾಮಗಾರಿಯ ಕಾರಣ ಫೆಬ್ರವರಿ 20ರ ಗುರುವಾರ ಬೆಂಗಳೂರಿನ ವಿವಿಧ ಪ್ರದೇಶಗಳಲ್ಲಿ ನೀರು ಪೂರೈಕೆ ಸ್ಥಗಿತವಾಗಲಿದೆ. ಈ ಬಗ್ಗೆ ಬೆಂಗಳೂರು ಜಲ ಮಂಡಳಿ ಮಾಹಿತಿ ನೀಡಿದೆ. ಮಾರತ್ತಹಳ್ಳಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳ ನಿವಾಸಿಗಳಿಗೆ ನೀರು ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ.

ಮಾರತ್ತಹಳ್ಳಿಯ ಜೀವಿಕಾ ಆಸ್ಪತ್ರೆ ಬಳಿ ಕಾಮಗಾರಿ ಕೈಗೊಂಡಿರುವ ಹಿನ್ನೆಲೆಯಲ್ಲಿ ಫೆಬ್ರವರಿ 20 ರಂದು ನಗರದ ವಿವಿಧ ಪ್ರದೇಶಗಳಲ್ಲಿ ನೀರು ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ ಎಂದು ಬೆಂಗಳೂರು ಜಲಮಂಡಳಿ ಪ್ರಕಟಣೆ ತಿಳಿಸಿದೆ. ಎಷ್ಟು ಗಂಟೆಯ ವರಗೆ ನೀರು ಪೂರೈಕೆ ಇರಲ್ಲ?

ನಾಲ್ಕನೇ ಹಂತದ ಕಾವೇರಿ ನೀರಿನ ಪೂರೈಕೆ ಯೋಜನೆಯ ಕಾಮಗಾರಿ ಗುರುವಾರ ಬೆಳಗ್ಗೆ 9 ರಿಂದ ರಾತ್ರಿ 9 ರ ವರೆಗೆ ನಡೆಯಲಿದೆ. ಇದರಿಂದಾಗಿ ಈ ಅವಧಿಯಲ್ಲಿ ನೀರು ಪೂರೈಕೆ ಸ್ಥಗಿತವಾಗಲಿದೆ. ಏತನ್ಮಧ್ಯೆ, ನೀರಿನ ಬಿಕ್ಕಟ್ಟು ತಡೆಯುವ ನಿಟ್ಟಿನಲ್ಲಿ ಈ ಬಾರಿ ಬೇಸಿಗೆ ಆರಂಭಕ್ಕೂ ಮುನ್ನವೇ ಜಲಮಂಡಳಿ ಕಟ್ಟುನಿಟ್ಟಿನ ಕ್ರಮಕ್ಕೆ ಮುಂದಾಗಿದೆ. ನೀರಿನ ಸಮಸ್ಯೆ ಆರಂಭವಾಗುವ ಲಕ್ಷಣಗಳು ಗೋಚರಿಸಿರುವ ಕಾರಣ, ಕಳೆದ ಬಾರಿ ಬೇಸಿಗೆಯಲ್ಲಿ ಹೊರಡಿಸಿದ್ದ ಆದೇಶ ಮರು ಜಾರಿ ಮಾಡಲು ಜಲಮಂಡಳಿ ಮುಂದಾಗಿದೆ. ಅನಗತ್ಯವಾಗಿ ನೀರು ವ್ಯರ್ಥ ಮಾಡಿದವರಿಗೆ ಹಾಗೂ ಕುಡಿಯುವ ನೀರನ್ನು ಅನ್ಯ ಉದ್ದೇಶಗಳಿಗೆ ಬಳಸಿದರೆ ದಂಡ ವಿಧಿಸುವುದಾಗಿ ಹೇಳಿದೆ.



ಜಲಮಂಡಳಿಯ ಅಧ್ಯಕ್ಷರು ಮನವಿ

ಎಲ್ಲೆಲ್ಲಿ ನೀರು ಪೂರೈಕೆ ಸ್ಥಗಿತ?

ಮಾರತ್ತಹಳ್ಳಿ, ದೊಡ್ಡಾನೆಕುಂದಿ, ಮುನ್ನೆಕೊಳಲು, ಓಎಂಬಿಆರ್ ಲೇಔಟ್, ಎಚ್‌ಆರ್‌ಬಿಆರ್ ಲೇಔಟ್, ಸಿಗೇಹಳ್ಳಿ, ಬಟ್ಟರ ಹಳ್ಳಿ, ಮೇಡೆಹಳ್ಳಿ, ಟಿ.ಸಿ.ಪಾಳ್ಯ, ವಿಜಿನಪುರ, ಬೆಳ್ಳಂದೂರು, ಯಮಲೂರು, ಮುರುಗೇಶ್ ಪಾಳ್ಯ, ಕೋಣೆನ ಅಗ್ರಹಾರ, ಸಿ.ವಿ.ರಾಮನ್ ನಗರ, ಇಂದ್ರನಗರ, ತಿಪ್ಪಸಂದ್ರ, ಜೀವನ್ ಭೀಮಾನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ನೀರು ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ. ಸಾರ್ವಜನಿಕರು ಅಗತ್ಯವಿರುವ ನೀರನ್ನು ಮೊದಲೇ ಸಂಗ್ರಹಿಸಿಟ್ಟುಕೊಂಡು ಸಹಕರಿಸುವಂತೆ ಜಲಮಂಡಳಿಯ ಅಧ್ಯಕ್ಷರು ಮನವಿ ಮಾಡಿದ್ದಾರೆ.

ನಂದಿನಿ ಹಾಲಿನ ದರ 5 ರೂ. ಏರಿಕೆಗೆ ಪ್ರಸ್ತಾವ ಸಲ್ಲಿಕೆ

• **ಉದಯವಾಹಿನಿ, ಬೆಂಗಳೂರು,**

ಬೆಲೆ ಏರಿಕೆಯಿಂದ ತತ್ತರಿಸಿರುವ ರಾಜ್ಯದ ಜನರಿಗೆ ಮತ್ತೊಂದು ಶಾಕ್ ಎದುರಾಗಿದೆ. ನಂದಿನಿ ಹಾಲಿನ ದರ ಏರಿಕೆಗೆ ಕೆಎಂಎಫ್ ಪ್ರಸ್ತಾವನೆ ಸಲ್ಲಿಸಿದ್ದು, ಪ್ರತಿ ಲೀಟರ್ ಹಾಲಿಗೆ 5 ರೂ ಏರಿಕೆ ಮಾಡುವಂತೆ ಬೆಲೆ ಏರಿಕೆಯ ಅಂತಿಮ ನಿರ್ಧಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಂಗಳದಲ್ಲಿದೆ.

ಈಗಾಗಲೇ ಕೆಎಸ್‌ಆರ್‌ಟಿಸಿ, ಬಿಎಂಟಿಸಿ ಬಸ್ ದರ ಹೆಚ್ಚಳ, ಬೆಂಗಳೂರು ಮೆಟ್ರೋ ಟಿಕೆಟ್ ದರ ಏರಿಕೆಯ ಬರೆ ಕಾಯುತ್ತಿರುವ ಸಂದರ್ಭದಲ್ಲೇ ಹಾಲಿನ ದರ ಏರಿಕೆ ಹೆಚ್ಚಳಕ್ಕೆ ಮುಂದಾಗಿದೆ. ಕರ್ನಾಟಕ ಹಾಲು ಉತ್ಪಾದಕರ ಮಹಾಮಂಡಳ ಹಾಲಿನ ದರ ಲೀಟರ್‌ಗೆ 5 ರೂಪಾಯಿ ಏರಿಸುವುದಕ್ಕೆ ಸಿದ್ಧತೆ ನಡೆಸಿದೆ ಎಂದು ಕೆಎಂಎಫ್ ಮೂಲಗಳು ತಿಳಿಸಿವೆ. ಜೂನ್ 2024ರಲ್ಲಿ ಪ್ರತಿ ಪ್ಯಾಕೇಟ್‌ಗೆ 50 ಮಿಲಿ ಲೀ. ಹಾಲು ಹೆಚ್ಚುವರಿಯಾಗಿ ಕೊಟ್ಟು ಮತ್ತೆ 2 ರು.ಏರಿಕೆ ಮಾಡಲಾಗಿತ್ತು. ಇದೀಗ ರಾಜ್ಯದ 16 ಹಾಲು ಒಕ್ಕೂಟಗಳಿಂದ ಹಾಲಿನ ದರವನ್ನು ಪ್ರತಿ ಲೀಟರ್‌ಗೆ 5 ರು.ನಂತೆ ಏರಿಕೆ ಮಾಡಲು ಒತ್ತಡ ಹೆಚ್ಚುತ್ತಿದೆ. ಹೀಗಾಗಿ ಹಾಲು ದರ ಏರಿಕೆಗೆ ಅನುಮತಿ ನೀಡುವಂತೆ ಕೆಎಂಎಫ್ ರಾಜ್ಯಸರ್ಕಾರಕ್ಕೆ ಕಳೆದ ವರ್ಷವೇ ಪ್ರಸ್ತಾವನೆ ಸಲ್ಲಿಸಿದೆ. ಈ ಪ್ರಸ್ತಾವನೆ ಕುರಿತು ಕಳೆದ ತಿಂಗಳು ರಾಜ್ಯದ ಎಲ್ಲಾ ಹಾಲು ಒಕ್ಕೂಟಗಳ ಅಧ್ಯಕ್ಷರು, ನಿರ್ದೇಶಕರು ಮತ್ತು ವ್ಯವಸ್ಥಾಪಕ ನಿರ್ದೇಶಕರೊಂದಿಗೆ ಪಶುಸಂಗೋಪನಾ ಸಚಿವ ಕೆ.ವೆಂಕಟೇಶ್ ಸಭೆ ನಡೆಸಿದ್ದಾರೆ. ರೈತರು ಜಾನುವಾರುಗಳಿಗೆ ನೀಡುತ್ತಿರುವ ಆಹಾರ ಪದಾರ್ಥಗಳ ಬೆಲೆ ಏರಿಕೆಯಾಗಿದ್ದು, ಈ ಹಿನ್ನೆಲೆಯಲ್ಲಿ ಹಾಲಿನ ದರ ಲೀಟರ್‌ಗೆ 5 ರು.ಏರಿಕ

ಜಲಾಶಯ ಭರ್ತಿಯಾಗಿದ್ದರೂ ರೈತರಿಗಿಲ್ಲ ಹೇಮೆ ನೀರು

• ಉದಯವಾಹಿನಿ, ಕೆ.ಆರ್.ಪೇಟೆ

ಕಳೆದ ವರ್ಷ ಮುಂಗಾರಿನಲ್ಲಿ ಅತ್ಯುತ್ತಮ ಮಳೆಯಾಗಿದ್ದು ಕೆ.ಆರ್.ಎಸ್, ಹೇಮಾವತಿ ಅಣೆಕಟ್ಟೆ ಸೇರಿದಂತೆ ಕಾವೇರಿ ಜಲಾನಯನ ಪ್ರದೇಶದ ಎಲ್ಲಾ ಅಣೆಕಟ್ಟೆಗಳು ತುಂಬಿ ತುಳುಕಾಡಿದ್ದರೂ ಕೆ.ಆರ್.ಪೇಟೆ, ಪಾಂಡವಪುರ, ನಾಗಮಂಗಲ ತಾಲ್ಲೂಕಿನ ರೈತರು ಹೇಮೆಯ ನೀರಿಗಾಗಿ ಪರಿತಪಿಸುವಂತಾಗಿದೆ.

ಅತ್ಯುತ್ತಮ ಮಳೆಗಾಲದಿಂದಾಗಿ ಹಾಸನ ಜಿಲ್ಲೆ ಗೊರೂರಿನ ಹೇಮಾವತಿ ಜಲಾಶಯ ಭರ್ತಿಯಾಗಿದ್ದು ಇಂದಿನ ಬೇಸಿಗೆ ದಿನದಲ್ಲೂ ಜಲಾಶಯದಲ್ಲಿ ಸಂವೃದ್ಧವಾದ ಜಲರಾಶಿಯಿದೆ. ರಾಜ್ಯ ಸರ್ಕಾರದ ಇಚ್ಛಾಶಕ್ತಿಯ ಕೊರತೆಯಿಂದ ಅಣೆಕಟ್ಟೆಯಲ್ಲಿ ನೀರಿದ್ದರೂ ಅದು ರೈತರ ಹೊಲಗದ್ದೆಗಳಿಗೆ ಬರುತ್ತಿಲ್ಲ. ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ನೇತೃತ್ವದಲ್ಲಿ ಈಗಾಗಲೇ ಕೆ.ಆರ್.ಎಸ್ ಜಲಾಶಯ ವ್ಯಾಪ್ತಿಯ ನೀರಾವರಿ ಸಲಹಾ ಸಮಿತಿಯ ಸಭೆ ನಡೆದು ಕೆ.ಆರ್.ಎಸ್ ಜಲಾಶಯದಿಂದ ಕಟ್ಟು ನೀರು ಪದ್ಧತಿಯಡಿ ವಿಶ್ವೇಶರಯ್ಯ ನಾಲೆಯಲ್ಲಿ ನೀರು ಹರಿಸಲಾಗುತ್ತಿದೆ. ಆದರೆ ಹೇಮೆಯಲ್ಲಿ ನೀರಿದ್ದರೂ ಇದುವರೆಗೂ ಹೇಮೆಯ ನಾಲೆಗಳಿಗೆ ನೀರು ಹರಿಸುವ ಸಂಬಂಧ ಒಂದೇ ಒಂದು ನೀರಾವರಿ ಸಲಹಾ ಸಮಿತಿ ಸಭೆ ನಡೆದು ನೀರು ಬಿಡುವ ಬಗ್ಗೆ ಕನಿಷ್ಠ ಮಾಹಿತಿ ನೀಡುವ ಗೋಜಿಗೂ ನೀರಾವರಿ ಇಲಾಖೆ ಮುಂದಾಗಿಲ್ಲ. ಜಲಾಶಯದಲ್ಲಿ ನೀರಿರುವುದರಿಂದ ನೀರು ಬಿಡುವ ಆಶಾ ಕಿರಣದಿಂದ ರೈತರು ತಮ್ಮ ತಮ್ಮ ಹೊಲಗದ್ದೆಗಳನ್ನು ಭಿತ್ತನೆಗೆ ಸಜ್ಜುಗೊಳಿಸಿಕೊಂಡು ಕಾಯುತ್ತಿದ್ದಾರೆ.

ಹೇಮಾವತಿ ಜಲಾಶಯದ ಮುಖ್ಯ ನಾಲೆ ಕೆ.ಆರ್.ಪೇಟೆ ತಾಲ್ಲೂಕು ವ್ಯಾಪ್ತಿಯಲ್ಲಿ ಒಟ್ಟು 17 ವಿತರಣಾ ನಾಲೆಗಳಿದ್ದು ಒಟ್ಟು 54088 ಎಕರೆ ಪ್ರದೇಶ ಅರೆ ನೀರಾವರಿಗೆ ಒಳಪಟ್ಟಿದೆ. ಹೇಮಾವತಿ ಜಲಾಶಯ ಯೋಜನಾ ವ್ಯಾಪ್ತಿಗೆ ಸೇರಿದ 106 ಕೆರೆಗಳು, ಸಣ್ಣ ನೀರಾವರಿ ಇಲಾಖೆಗೆ 08 ಕೆರೆಗಳು ಮತ್ತು ಜಿಲ್ಲಾ ಪಂಚಾಯತಿ ವ್ಯಾಪ್ತಿಗೆ ಸೇರಿದ 121 ಕೆರೆಗಳು ಸೇರಿ ತಾಲ್ಲೂಕಿನ ಒಟ್ಟು 235 ಕೆರೆಗಳು ಹೇಮೆಯ ನೀರನ್ನೆ ಆಶ್ರಯಿಸಿ ತಮ್ಮ ಒಡಲು ತುಂಬಿಸಕೊಂಡು ಜನ ಜಾನುವಾರುಗಳ ಉಪಯೋಗಕ್ಕೆ ಬಳಕೆಯಾಗುತ್ತಿವೆ. ಇದರ ಜೊತೆಗೆ ಹೇಮಾವತಿ ನದಿ ಅಣೆಕಟ್ಟೆ ನಾಲೆಗಳಾದ ಮಂದಗೆರೆ ಬಲ ಮತ್ತು ಎಡದಂಡೆ ನಾಲೆ ಮತ್ತು ಹೇಮಗಿರಿ ನಾಲಾ ವ್ಯಾಪ್ತಿಯ 16556 ಎಕರೆ ಕೃಷಿ ಭೂಮಿ ಹೇಮೆಯ ನೀರನ್ನು ಆಶ್ರಯಿಸಿ ನಿಂತಿವೆ. ರಾಜ್ಯದ ಆಹಾರ ಉತ್ಪಾದನಾ ಕ್ಷೇತ್ರಕ್ಕೆ ಹೇಮೆಯ ಬಯಲಿನ ಪಾತ್ರವೂ ದೊಡ್ಡದಿದೆ. ನದಿ ಅಣೆಕಟ್ಟೆ ನಾಲಾ ವ್ಯಾಪ್ತಿಯಲ್ಲಿ ರೈತರು ಭತ್ತ ಮತ್ತು ಕಬ್ಬು, ತೆಂಗು, ಅಡಿಕೆ, ಶುಂಠಿ ಪ್ರಮುಖವಾಗಿ ಬೆಳೆದರೆ ಅರೆ ನೀರಾವರಿಗೆ ಸೇರಿದ ಹೇಮಾವತಿ ಜಲಾಶಯದ ಎಡದಂಡೆ ನಾಲೆ ಮತ್ತು ಕೆರೆ ಬಯಲಿನಲ್ಲಿ ಭತ್ತ ಮತ್ತು ಕಬ್ಬಿನ ಜೊತೆಗೆ ರಾಗಿ. ಜೋಳ, ಹಲಸಂದೆ, ಹುರುಳಿ, ತೆಂಗು, ಅಡಿಕೆ ಮುಂತಾದ ಬೆಳೆಗಳನ್ನು ರೈತರು ಬೆಳೆಯುತ್ತಿದ್ದಾರೆ. ಆದರೆ ರಾಜ್ಯ ಸರ್ಕಾರ ಇದುವೆರಗೂ ಹೇಮಾವತಿ ಎಡದಂಡೆ ನಾಲೆಗಳು ಮತ್ತು ನದಿ ಅಣೆಕಟ್ಟೆ ನಾಲೆಗಳಲ್ಲಿ ಬೇಸಿಗೆ ಬೆಳೆಗೆ ನೀರು ಹರಿಸುವ ಸಂಬಂಧ ಯಾವುದೇ ಜಲನೀತಿ ಪ್ರಕಟಿಸದಿರುವುದು ರೈತರ ಆತಂಕಕ್ಕೆ ಕಾರಣವಾಗಿದೆ.

ನೀರು ಬಿಡಲು ಆಗ್ರಹ

ಕೆ.ಆರ್.ಎಸ್ ಜಲಾಶಯ ವ್ಯಾಪ್ತಿಯ ರೈತರಿಗೊಂದು ಹೇಮಾವತಿ ಜಲಾಶಯ ವ್ಯಾಪ್ತಿಯ ರೈತರಿಗೊಂದು ನೀರಾವರಿ ನೀತಿ ಅನುಸರಿಸಿ ರಾಜ್ಯ ಸರ್ಕಾರ ಹೇಮೆಯ ರೈತರ ಬಗ್ಗೆ ಮಲತಾಯಿ ಧೋರಣೆ ಪ್ರದರ್ಶಿಸುತ್ತಿದೆ. ಹೇಮಾವತಿ ಜಲಾಶಯದಿಂದ ಹಾಸನ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎನ್. ರಾಜಣ್ಣ ತುಮಕೂರು ಭಾಗಕ್ಕೆ ನೀರು ತೆಗೆದುಕೊಂಡು ಹೋಗುತ್ತಿದ್ದಾರೆ. ಹೇಮೆಯ ನೀರು ತುಮಕೂರು ಭಾಗಕ್ಕೆ ಹರಿದು ಹೋಗುತ್ತಿದ್ದರೂ ಮಂಡ್ಯ ಜಿಲ್ಲೆಯ ರಾಜಕಾರಣಿಗಳು ಧ್ವನಿ ಎತ್ತಿ ತಮ್ಮ ಭಾಗದ ರೈತರಿಗೆ ಆಗುತ್ತಿರುವ ಅನ್ಯಾಯವನ್ನು ತಪ್ಪಿಸಲು ಮುಂದಾಗುತ್ತಿಲ್ಲ. ಜಿಲ್ಲಾ ಉಸ್ತುವಾರಿ ಸಚಿವರಾದ ಎನ್.ಚಲುವರಾಯಸ್ವಾಮಿ ಅವರ ಸ್ವಕ್ಷೇತ್ರ ನಾಗಮಂಗಲವೂ ಹೇಮೆಯ ನೀರಿನಿಂದ ವಂಚಿತವಾಗಿದ್ದರೂ ತಕ್ಷಣವೇ ನೀರಾವರಿ ಸಲಹಾ ಸಮಿತಿಯ ಸಭೆ ಕರೆಸಿ ಮಂಡ್ಯ ಜಿಲ್ಲೆಯ ರೈತರ ಹೊಲಗದ್ದೆಗಳಿಗೆ ನಿಯಮಾನುಸಾರ ನೀರು ಹರಿಸುವ ಪ್ರಯತ್ನಕ್ಕೆ ಸಚಿವ ಚಲುವರಾಯಸ್ವಾಮಿ ಮುಂದಾಗದಿರುವುದು ಖಂಡನೀಯ ಎಂದಿರುವ ತಾಲ್ಲೂಕು ರೈತಸಂಘದ ಅಧ್ಯಕ್ಷ ಕಾರಿಗನಹಳ್ಳಿ ಪುಟ್ಟೇಗೌಡ ತಕ್ಷಣವೇ ಹೇಮಾವತಿ ಜಲಾಶಯದ ಎಡದಂಡೆ ನಾಲೆಗೆ ನೀರು ಹರಿಸಬೇಕು. ನದಿ ಅಣೆಕಟ್ಟೆ ನಾಲೆಗಳಾದ ಮಂದಗೆರೆ ಎಡ ಮತ್ತು ಬಲದಂಡೆ ನಾಲೆಗಳು ಹಾಗೂ ಹೇಮಗಿರಿ ನಾಲೆಗಳಿಗೆ ಭತ್ತದ ಬೆಳೆಗೆ ಖಾಯಂ ನೀರು ಹರಿಸಬೇಕು. ಇಲ್ಲದಿದ್ದರೆ ರಾಜ್ಯ ರೈತಸಂಘ ನೀರಿಗಾಗಿ ಬೃಹತ್ ಹೋರಾಟ ಆರಂಬಿಸಲಿದೆ ಎಂದು ಎಚ್ಚರಿಸಿದ್ದಾರೆ.

ಸಾರ್ವಜನಿಕರೊಂದಿಗೆ ಹೇಗೆ ವರ್ತಿಸಬೇಕೆಂಬುದನ್ನು ಅರಿಯಿರಿ

• ಉದಯವಾಹಿನಿ, ಮೈಸೂರು

ಉದಯವಾಹಿನಿ ಚಿತ್ರ

ಸಾರ್ವಜನಿಕರ ಜೊತೆ ಹೇಗೆ ವರ್ತನೆ ಮಾಡುತ್ತೇವೆ ಎಂಬುದು ಮುಖ್ಯವಾಗುತ್ತದೆ. ಅವರಿಗೆ ಹೇಗೆ ನಾವು ಸೇವೆ ಒದಗಿಸಿ ಕೊಡಬೇಕು ಎಂಬ ವಿಶ್ವಾಸಾರ್ಹತೆ ನಮ್ಮಲ್ಲಿ ಬರಬೇಕು ಎಂದು ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಅಲೋಕ್ ಕುಮಾರ್ ಹೇಳಿದರು. ಕರ್ನಾಟಕ ಪೊಲೀಸ್ ಅಕಾಡೆಮಿ ವತಿಯಿಂದ 46ನೇ ತಂಡದ ಪೊಲೀಸ್ ಸಬ್ -ಇನ್ಸ್‌ಪೆಕ್ಟರ್ ಪ್ರಶಿಕ್ಷಣಾರ್ಥಿಗಳ ಬುನಾದಿ ತರಬೇತಿಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನಮಗೆ ಸಾರ್ವಜನಿಕರ ಜತೆಗೆ ವರ್ತನೆ ಮಾಡುವುದರ ಬಗ್ಗೆ ತಿಳುವಳಿಕೆ ಇರಬೇಕು. ಸಾರ್ವಜನಿಕರ ಜೊತೆ ನಾವು ಉತ್ತಮವಾಗಿ ವರ್ತಿಸಿದರೆ ಅವರು ಸಹ ನಮಗೆ ಗೌರವ ನೀಡುತ್ತಾರೆ. ವಿನಮ್ರತೆ ಎಂಬುದು ಬಹಳ ಮುಖ್ಯವಾಗುವುದರ ಜತೆಗೆ ಶಿಸ್ತು ಬೆಳೆಸಿಕೊಳ್ಳಬೇಕು ಎಂದು ಹೇಳಿದರು. ನಾವು ಏಕೆ ಈ ಫೀಲ್ಡ್ ಆಯ್ಕೆ ಮಾಡಿಕೊಳ್ಳಬೇಕು ಎಂಬುದು ಮುಖ್ಯವಾಗುತ್ತದೆ. ಪೊಲೀಸ್ ಇಮೇಜ್ ಎಂಬುದು ಬಹಳ ಮುಖ್ಯವಾಗಿರುವುದರಿಂದ ತರಬೇತಿಯಲ್ಲಿ ಇದ್ದಂತಹ ಹಳೆಯ ವಿಷಯ ತೆಗೆದು ಈ ಫೀಲ್ಡ್‌ಗೆ ಯಾವುದು ಮುಖ್ಯ ಅಂತಹ ವಿಷಯಗಳನ್ನು ಪ್ರಸ್ತುತವಾಗಿ ಜಾರಿಗೆ ತಂದಿದ್ದೇವೆ ಎಂದು ತಿಳಿಸಿದರು. ಪ್ರಾಯೋಗಿಕವಾಗಿ ಉಪಯೋಗವಾಗುತ್ತಿರು ವಂತಹ ಅಂದರೆ ಆರ್ಟಿಫಿಷಿಯಲ್ ಇಂಟಲಿಜೆನ್ಸ್ ಅಲ್ಲಿ ಏನೆಲ್ಲಾ ಹೊಸ ಹೊಸ ವಿಷಯಗಳು ಬರುತ್ತವೆಯೋ ಅವುಗಳನ್ನು ನಾವು ಅಳವಡಿಸಿಕೊಳ್ಳಬೇಕು. ನಾವು ಕಲಿಯುವ ವಿಷಯಗಳಲ್ಲಿ ಬದಲಾವಣೆಯನ್ನು ಮಾಡಿಕೊಂಡು ಪ್ರಸ್ತುತ ನವೀಕರಿಸಿದ ಅಂಶಗಳನ್ನು ಅಳವಡಿಸಿಕೊಳ್ಳಬೇಕು ಎಂದರು. ಏಕಾಗ್ರತೆಯಿಂದ ಮನಸಿಟ್ಟು ಕೆಲಸವನ್ನು ಮಾಡಬೇಕು. ಜೊತೆಗೆ ಮಾನಸಿಕ ಮತ್ತು ದೈಹಿಕ ಆರೋಗ್ಯ ಎಂಬುದು ಮುಖ್ಯವಾಗಿರುವುದರಿಂದ ಫಿಟ್ನೆಸ್ ಎಂಬುದು ಬಹಳ ಮುಖ್ಯವಾಗುತ್ತದೆ. ಆದುದರಿಂದ ತರಬೇತಿಯಲ್ಲಿ ಇರುವಂತಹ ಎಲ್ಲಾ ಸೌಲಭ್ಯ ಬಳಸಿಕೊಳ್ಳಿ. ನಿಮಗೆ ಏನಾದರೂ ತೊಂದರೆ ಬಂದಲ್ಲಿ ನಮಗೆ ತಿಳಿಸಿ ನಿಮ್ಮ ಜತೆಗೆ ನಾವು ಯಾವಾಗಲೂ ಇರುತ್ತೇವೆ ಎಂದು ಹೇಳಿದರು.

ಫಿಟ್ನೆಸ್ ಎಂಬುದು ಬಹಳ ಮುಖ್ಯ

ಲೇಸರ್ ಪ್ಲಾನ್, ಕಾಂನ್ಫಿಡೆನ್ಸ್, ವೃತ್ತಿ ತರಬೇತಿ ಕೌಶಲ್ಯ ಬೆಳೆಸಿಕೊಳ್ಳಬೇಕು. ಸಾರ್ವಜನಿಕರೊಂದಿಗೆ ಸಂವಹನ ನಡೆಸಬೇಕು ನಾವು ಹೇಗೆ ಸಾರ್ವಜನಿಕರ ಜೊತೆ ಮಾತನಾಡುತ್ತೇವೆ ಎಂಬುದು ಮುಖ್ಯವಾಗುತ್ತದೆ ಎಂದು ತಿಳಿಸಿದರು. ಯಾವುದೇ ತರಬೇತಿಯಾದರೂ ಉದ್ದೇಶಪೂರ್ವಕವಾಗಿ ಇರಬೇಕು. ನಮ್ಮ ದೇಶದಲ್ಲಿ ತರಬೇತಿ ಉತ್ತಮವಾಗಿ ಇರುವುದರ ಜತೆಗೆ ವಿಧಾನ ಶಾಸ್ತ್ರ ಚೆನ್ನಾಗಿರಬೇಕು. ನಮ್ಮ ಕೆಲಸದ ಬಗ್ಗೆ ನಮಗೆ ಮನವರಿಕೆಯಾಗಬೇಕು. ನಾವು ಪ್ರತಿಯೊಂದು ವಿಷಯದ ಬಗ್ಗೆ ಹೆಚ್ಚು ಗಮನ ನೀಡಬೇಕು ಎಂದು ಹೇಳಿದರು.

ಪ್ರಿಯಕರನ ಜೊತೆ ಸೇರಿ ಪತಿ ಕೊಲೆ

• ಉದಯವಾಹಿನಿ, ಮಂಡ್ಯ

ಉದಯವಾಹಿನಿ ಚಿತ್ರ

ಪ್ರಿಯಕರನೊಂದಿಗೆ ಸೇರಿ ಪತಿಯನ್ನೇ ಕೊಲೆ ಮಾಡಿದ್ದ ಪತ್ನಿ, ಆಕೆಯ ಪ್ರಿಯತಮನಿಗೆ ಜೀವಾವಧಿ ಶಿಕ್ಷೆ ವಿಧಿಸಿ ಶ್ರೀರಂಗಪಟ್ಟಣದ 3ನೇ ಅಧಿಕ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ತೀರ್ಪು ಪ್ರಕಟಿಸಿದೆ.

ಕೆ.ಆರ್ ಪೇಟೆ ತಾಲ್ಲೂಕು ಅಕ್ಕಿಹೆಬ್ಬಾಳು ಗ್ರಾಮದ ನಾಸಿರ್ ಪಾಷಾನನ್ನು ಆತನ ಹೆಂಡತಿ ಅಂಜುಮ್ ಆರಾ ಹಾಗೂ ಆಕೆಯ ಪ್ರಿಯಕರ ರಹೀಂಖಾನ್‌ನನ್ನು ಕೊಲೆ ಮಾಡಿದ್ದರು. ಈ ಬಗ್ಗೆ 2021 ನವೆಂಬರ್ 26 ರಂದು ಕೆ.ಆರ್.ಪೇಟೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಠಾಣಾಯ ಇನ್ಸ್‌ಪೆಕ್ಟರ್ ಕೆ.ಎಸ್ ನಿರಂಜನ್ ಅವರು ಈ ಸಂಬಂಧ ತನಿಖೆ ಕೈಗೊಂಡು ಆರೋಪಿಗಳನ್ನು ಬಂಧಿಸಿದ್ದರು. ವಿಚಾರಣೆ ಮುಗಿದ ಬಳಿಕ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಿದ್ದರು. ಪ್ರಕರಣ ವಿಚಾರಣೆ ನಡೆಸಿದ ಕೋರ್ಟ್ ಆರೋಪ ಸಾಬೀತಾದ ಹಿನ್ನೆಲೆ ನ್ಯಾಯಾಧೀಶರಾದ ಗೋಪಾಲಕೃಷ್ಣರೈ ಅವರಿದ್ದ ಪೀಠ ಜೀವಾವಧಿ ಶಿಕ್ಷೆ ವಿಧಿಸಿ ತೀರ್ಪು ನೀಡಿದೆ.

ಅಲ್ಲದೇ ಮೊದಲ ಆರೋಪಿ ಅಂಜುಮ್ ಆರಾಗೆ 10,000 ರೂ. ದಂಡ ಹಾಗೂ 3ನೇ ಆರೋಪಿ ರಹೀಂ ಖಾನ್ ಗೆ 15,000 ದಂಡ ವಿಧಿಸಿದೆ. ಈ ಪ್ರಕರಣದಲ್ಲಿ ಅಂಜುಮ್ ಆರಾಳ ಪ್ರಿಯತಮನಾಗಿರುವ 2ನೇ ಆರೋಪಿ ತಲೆಮರೆಸಿಕೊಂಡಿದ್ದಾನೆಂದು ತಿಳಿದು ಬಂದಿದೆ. ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕರಾದ ಪ್ರಫುಲ್ಲ ಎಂ.ಕೆ ವಾದ ಮಂಡಿಸಿದ್ದರು. ಕೆ.ಆರ್.ಪೇಟೆ ಗ್ರಾಮಾಂತರ ಪೊಲೀಸ್ ಠಾಣಾ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಯ ಈ ಕಾರ್ಯವನ್ನು ಮಂಡ್ಯ ಜಿಲ್ಲಾ ಪೊಲೀಸ್ ಅಧೀಕ್ಷಕರು ಶ್ಲಾಘಿಸಿದ್ದಾರೆ.

ಇಬ್ಬರಿಗೆ ಜೀವಾವಧಿ ಶಿಕ್ಷೆ

ಸಮರ್ಪಕ ನಿರ್ವಹಣೆಗೆ ಜಿ.ಪಂ. ಇಒ ಮೋನಾ ರೋತ್ ಸೂಚನೆ

• ಉದಯವಾಹಿನಿ, ಚಾಮರಾಜನಗರ,

ಉದಯವಾಹಿನಿ ಚಿತ್ರ

ಜಿಲ್ಲೆಯಲ್ಲಿ ಮಾರ್ಚ್ ತಿಂಗಳಲ್ಲಿ ನಡೆಯಲಿರುವ 2024-25ನೇ ಸಾಲಿನ ಎಸ್.ಎಸ್.ಎಲ್.ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷಾ ಕಾರ್ಯವನ್ನು ಸಕಲ ಸಿದ್ಧತೆಗಳೊಂದಿಗೆ ಸಮರ್ಪಕವಾಗಿ ನಿರ್ವಹಿಸುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಸೂಚನೆ ನೀಡಿದರು. ನಗರದ ಜಿಲ್ಲಾಡಳಿತ ಭವನದಲ್ಲಿರುವ ಹಳೇ ಕೆಡಿಪಿ ಸಭಾಂಗಣದಲ್ಲಿಂದು ಎಸ್.ಎಸ್.ಎಲ್.ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆ ಸಂಬಂಧ ನಡೆದ ಪ್ರೌಢಶಾಲೆಗಳ ಮುಖ್ಯ ಶಿಕ್ಷಕರು, ಪಿಯು ಕಾಲೇಜುಗಳ ಪ್ರಾಂಶಪಾಲರು, ಪರೀಕ್ಷಾ ಕಾರ್ಯಕ್ಕೆ ನಿಯೋಜಿತರಾದ ವಿವಿಧ ಇಲಾಖೆಗಳ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷೆಗಳಿಗೆ ಈಗಾಗಲೇ ವೇಳಾಪಟ್ಟಿ ಬಿಡುಗಡೆ ಮಾಡಲಾಗಿದೆ. ಪರೀಕ್ಷಾ ಕಾರ್ಯವನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಪರೀಕ್ಷಾ ಸಂಬಂಧ ನೀಡಲಾಗಿರುವ ಸೂಚನೆ, ಮಾರ್ಗದರ್ಶನದ ಪ್ರಕಾರ ಕಟ್ಟುನಿಟ್ಟಾಗಿ ಪರೀಕ್ಷೆ ಕೆಲಸ ಮಾಡಬೇಕು ಎಂದರು. ಶಾಲಾ-ಕಾಲೇಜುಗಳಲ್ಲಿ ಉಳಿದಿರುವ ಸಮಯದಲ್ಲಿ ವಿದ್ಯಾರ್ಥಿಗಳಿಗೆ ಶ್ರಮವಹಿಸಿ ಅಧ್ಯಯನ ಮಾಡಲು ಉತ್ತೇಜಿಸಬೇಕು. ಜಿಲ್ಲೆಗೆ ಉತ್ತಮ ಫಲಿತಾಂಶ ಹಾಗೂ ಉನ್ನತ ಸ್ಥಾನ ಏರಲು ಪೂರಕವಾಗಿರುವಂತೆ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡಬೇಕು. ವಿಶೇಷ ತರಗತಿಗಳ ಮೂಲಕ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ಸಜ್ಜುಗೊಳಿಸಬೇಕು ಎಂದು ತಿಳಿಸಿದರು. ಪರೀಕ್ಷಾ ದಿನಾಂಕಗಳು ಹತ್ತಿರವಾಗುತ್ತಿರುವ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯಿತಿಯಲ್ಲಿರುವ ಗ್ರಂಥಾಲಯಗಳನ್ನು ಬೆಳಗಿನ ವೇಳೆ ಬೇಗನೆ ತೆರೆಯುವ ಅವಶ್ಯವಿದ್ದಲ್ಲಿ ಸೂಕ್ತ ನಿರ್ದೇಶನ ನೀಡಲಾಗುವುದು. ಪೋಷಕರೊಂದಿಗೆ ಸಂಪರ್ಕದಲ್ಲಿದ್ದು ವಿದ್ಯಾರ್ಥಿಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ತಿಳಿಸಿದರು.

ವಿವಿಧ ಇಲಾಖೆಗಳ ಅಧಿಕಾರಿಗಳ ಸಭೆ

ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಅವರು ಮಾತನಾಡಿ ಎಸ್‌ಎಸ್‌ಎಲ್‌ಸಿ, ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಜಿಲ್ಲೆ ಗಣನೀಯವಾಗಿ ಸುಧಾರಣೆಯಾಗಬೇಕು. ಎಲ್ಲಾ ವಿದ್ಯಾರ್ಥಿಗಳು ಮೊದಲ ಪ್ರಯತ್ನದಲ್ಲಿಯೇ ಉತ್ತಮ ಅಂಕಗಳೊಂದಿಗೆ ತೇರ್ಗಡೆಯಾಗಲು ಶಿಕ್ಷಕರು ವಿಶೇಷ ಕಾಳಜಿ ತೆಗೆದುಕೊಂಡು ವಿದ್ಯಾರ್ಥಿಗಳನ್ನು ಪರೀಕ್ಷೆಗೆ ಅಣಿಗೊಳಿಸಬೇಕು ಎಂದರು. ಪರೀಕ್ಷಾ ಕಾರ್ಯಗಳಿಗೆ ಈಗಾಗಲೇ ಎಲ್ಲಾ ಅಗತ್ಯ ತಂಡಗಳನ್ನು ನಿಯೋಜಿಸಲಾಗಿದೆ. ಪಾರದರ್ಶಕ ವಾಗಿ ಪರೀಕ್ಷಾ ಕಾರ್ಯ ನಿರ್ವಹಣೆಯಾಗಲಿದೆ. ಪರೀಕ್ಷಾ ಕೇಂದ್ರಗಳಲ್ಲಿ ಎಲ್ಲಾ ಮೂಲ ಸೌಕರ್ಯಗಳು ಇರಬೇಕು. ಯಾವುದೇ ಸಮಸ್ಯೆಗಳಿದ್ದರೆ ಕೂಡಲೇ ಗಮನಕ್ಕೆ ತರಬೇಕು ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಅವರು ತಿಳಿಸಿದರು.

ಗಾಂಜಾ ಸಾಗಿಸುತ್ತಿದ್ದ ತಂದೆ, ಮಗಳು, ಮೊಮ್ಮಗ ಸೇರಿ ಐವರ ಬಂಧನ

• ಉದಯವಾಹಿನಿ, ಚಿಕ್ಕಬಳ್ಳಾಪುರ,

ಉದಯವಾಹಿನಿ ಚಿತ್ರ

ಅವರು ಒಂದೇ ಕುಟುಂಬದವರು. ತಂದೆ, ಮಗಳು, ಮೊಮ್ಮಗ ಎಲ್ಲರೂ ಅಕ್ರಮವಾಗಿ ಮಾದಕವಸ್ತು ಗಾಂಜಾ ಸರಬರಾಜು ಸಾಗಾಟ ಮಾಡುತ್ತಿದ್ದರು. ಆದರೆ ಹೆಚ್ಚು ದಿನ ಅವರ ಕಳ್ಳಾಟ ನಡೆಯಲಿಲ್ಲ. ಚಿಕ್ಕಬಳ್ಳಾಪುರ ಸೈಬರ್ ಠಾಣೆ ಪೊಲೀಸರು ಕೊನೆಗೆ ಅವರನ್ನು ಬಂಧಿಸಿರುವಂತಹ ಘಟನೆ ಘಟನೆ ಜಿಲ್ಲೆಯಲ್ಲಿ ನಡೆದಿದೆ.

ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ತಾಲ್ಲೂಕಿನ ಗರಿಗೆರೆಡ್ಡಿಪಾಳ್ಯಾ ನಿವಾಸಿಗಳಾಗಿರುವ ಮಾರಪ್ಪ, ಮಾರಪ್ಪನ ಮಗಳು ದೇವಮ್ಮ, ದೇವಮ್ಮನ ಮಗ ಆಂಜಿಯನ್ನು ಸದ್ಯ ಪೊಲೀಸರು ಬಂಧಿಸಿದ್ದಾರೆ.

ನ್ಯಾಯಯುತವಾಗಿ ದುಡಿದು ತಿನ್ನುವುದರ ಬದಲು, ರಾತ್ರೋರಾತ್ರಿ ಶ್ರೀಮಂತರಾಗುವ ಕನಸ್ಸು ಕಂಡು ಅಕ್ರಮವಾಗಿ ಮಾದಕವಸ್ತು ಗಾಂಜಾವನ್ನು ಮಾರಾಟ ಮಾಡುತ್ತಿದ್ದರು.

ಆದರೆ ನಿನ್ನೆ ಜಿಲ್ಲೆಯ ಚಿಂತಾಮಣಿ ನಗರದ ಮಾಡಿಕೆರೆ ಕ್ರಾಸ್ ಬಳಿ ಮಹಿಂದ್ರಾ ಎಕ್ಸ್ ಯುವಿ 500 ಕಾರಿನಲ್ಲಿ 17 ಲಕ್ಷದ 50 ಸಾವಿರ ರೂ. ಮೌಲ್ಯದ 35 ಕೆಜಿ ಗಾಂಜಾವನ್ನ ಸಾಗಾಟ ಮಾಡುತ್ತಿದ್ದಾಗ ಚಿಕ್ಕಬಳ್ಳಾಪುರ ಸೈಬರ್ ಠಾಣೆ ಪೊಲೀಸರ ಅತಿಥಿಗಳಾಗಿದ್ದಾರೆ.

ಇನ್ನೂ ಬಂಧಿತ ಮಾರಪ್ಪ, ದೇವಮ್ಮ, ಆಂಜಿ ಜೊತೆ ಅವರ ಕಾರಿನಲ್ಲಿದ್ದ ಆದಿನಾರಾಯಣ, ವೆಂಕಟರಮಣನನ್ನು ಬಂಧಿಸಲಾಗಿದೆ. ತಂದೆ, ಮಗಳು, ಮೊಮ

ಅಂತರಾಳದಿಂದ... EDITORIAL

ರೈಲು ನಿಲ್ದಾಣದಲ್ಲಿ ಕಾಲ್ತುಳಿತ ವ್ಯವಸ್ಥೆಯ ಲೋಪಕ್ಕೆ ಕೈಗನ್ನಡಿ

ಉದಯವಾಹಿನಿ ಚಿತ್ರ

ನವದೆಹಲಿಯ ರೈಲು ನಿಲ್ದಾಣದಲ್ಲಿ ಶನಿವಾರ ಸಂಭವಿಸಿದ ಕಾಲ್ತುಳಿತಕ್ಕೆ ಕಾರಣಗಳು ಏನು ಎಂಬ ವಿಚಾರದಲ್ಲಿ ಹಲವು ವಿವರಣೆಗಳಿವೆ. ಮಹಾ ಕುಂಭಮೇಳದಲ್ಲಿ ಭಾಗಿಯಾಗಲು ಪ್ರಯಾಗರಾಜ್‌ಗೆ ತೆರಳುವ ಪ್ರಯಾಣಿಕರು ರೈಲು ನಿಲ್ದಾಣದಲ್ಲಿ ಭಾರಿ ಸಂಖ್ಯೆಯಲ್ಲಿ ಇದ್ದಾಗ ಉಂಟಾದ ಕಾಲ್ತುಳಿತಕ್ಕೆ ಕನಿಷ್ಠ 18 ಮಂದಿ ಬಲಿಯಾಗಿದ್ದಾರೆ. ಈ ದುರ್ಘಟನೆಗೆ ನೀಡಿರುವ ಹಲವು ವಿವರಣೆಗಳ ಪೈಕಿ ಸತ್ಯವು ಯಾವುದೋ ಒಂದು ವಿವರಣೆಯಲ್ಲಿ ಇದ್ದಿರಬಹುದು. ಅಧಿಕಾರಿಗಳು ತೋರಿದ ನಿರ್ಲಕ್ಷ್ಯ ಮತ್ತು ಜನಜಂಗುಳಿಯನ್ನು ನಿಭಾಯಿಸುವಲ್ಲಿ ಆದ ವೈಫಲ್ಯವು ಪರಿಸ್ಥಿತಿ ವಿಷಮಗೊಳ್ಳುವಂತೆ ಮಾಡಿತು ಎಂಬುದಂತೂ ನಿಜ. ಮೌನಿ ಅಮಾವಾಸ್ಯೆಯ ದಿನ ಪ್ರಯಾಗರಾಜ್‌ನಲ್ಲಿ ಸಂಭವಿಸಿದ ದುರಂತಕ್ಕೆ ಅಲ್ಲಿ ಜನಜಂಗುಳಿಯನ್ನು ನಿಯಂತ್ರಿಸುತ್ತಿದ್ದವರ ವೈಫಲ್ಯವು ಹೇಗೆ ಕಾರಣವೋ ಅದೇ ರೀತಿಯಲ್ಲಿ ರೈಲು ನಿಲ್ದಾಣದಲ್ಲಿ ಜನ ಜೀವ ಕಳೆದುಕೊಂಡಿದ್ದಕ್ಕೆ ಅಲ್ಲಿನ ಅಧಿಕಾರಿಗಳು ಹೊಣೆ ಆಗಬೇಕಾಗುತ್ತದೆ. ಪ್ರಯಾಣಿಕರಿಗಾಗಿ ನಿರ್ಮಿಸಿರುವ ಮೇಲೇತುವೆಯಿಂದ ಕೆಳಕ್ಕೆ ಇಳಿಯುತ್ತಿದ್ದ ಕೆಲವರು ಮುಂದೆ ಇದ್ದವರ ಮೇಲೆ ಬಿದ್ದ ಪರಿಣಾಮವಾಗಿ ಕಾಲ್ತುಳಿತ ಉಂಟಾಯಿತು ಎಂದು ರೈಲ್ವೆ ಅಧಿಕಾರಿಗಳು ಹೇಳಿದ್ದಾರೆ. ಆದರೆ ಈ ವಿವರಣೆಯು ಎಲ್ಲಾವೂ ದುರದೃಷ್ಟವಶಾತ್ ಆಗಿಹೋದವು ಎಂದು ಹೇಳುತ್ತದೆ. ಇದು ಪೂರ್ಣ ಸತ್ಯವನ್ನು ಹೇಳುತ್ತಿಲ್ಲ. ಅಂದು ರೈಲು ನಿಲ್ದಾಣದಲ್ಲಿ ರೈಲುಗಳು ಹೊರಡುವುದು ವಿಳಂಬವಾಗಿತ್ತು, ಟಿಕೆಟ್ ಮಾರಾಟ ಪ್ರಮಾಣವು ಹೆಚ್ಚಳ ಕಂಡಿತ್ತು, ರೈಲ್ವೆ ಪ್ಲಾಟ್‌ಫಾರ್ಮ್ ಬದಲಾವಣೆ ವಿಚಾರವಾಗಿ ಕೊನೆಯ ಕ್ಷಣದಲ್ಲಿ ಒಂದಿಷ್ಟು ಘೋಷಣೆಗಳನ್ನು ಮಾಡಲಾಗಿತ್ತು ಎಂಬ ವರದಿಗಳಿವೆ. ಜನ ಹೆಚ್ಚಿನ ಸಂಖ್ಯೆಯಲ್ಲಿ ನಿಲ್ದಾಣಕ್ಕೆ ಬರುತ್ತಾರೆ ಎಂಬುದನ್ನು ಅಧಿಕಾರಿಗಳು ಮೊದಲೇ ಅಂದಾಜಿಸಬೇಕಿತ್ತು, ಬದಲಿ ವ್ಯವಸ್ಥೆ ಮಾಡಿಕೊಳ್ಳಬೇಕಿತ್ತು ಮತ್ತು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕಿತ್ತು.

ದುರ್ಘಟನೆಗೆ ಕಾರಣ ಪತ್ತೆ ಮಾಡಲು ತನಿಖೆಗೆ ಆದೇಶಿಸಲಾಗಿದೆ. ಈ ತನಿಖೆಯು ಪಾರದರ್ಶಕವಾಗಿ ನಡೆಯಬೇಕು, ಲೋಪಗಳಿಗೆ ಹೊಣೆಗಾರರು ಯಾರು ಎಂಬುದನ್ನು ಅದು ಪತ್ತೆ ಮಾಡಬೇಕು. ಆದರೆ ಇಲ್ಲಿ ಕೆಲವು ಪ್ರಶ್ನೆಗಳಿಗೆ ಉತ್ತರ ಸಿಕ್ಕಿಲ್ಲ.

ರೈಲುಗಳ ಸಾಮರ್ಥ್ಯ ಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಟಿಕೆಟ್ ಮಾರಾಟ ಮಾಡಿದ್ದು ಏಕೆ ರೈಲು ಹೊರಡುವುದರಲ್ಲಿ ವಿಳಂಬ ಆಗಿತ್ತೇ ರೈಲು ಇನ್ನೇನು ಹೊರಡಲಿದೆ ಎಂಬ ಹೊತ್ತಿನಲ್ಲಿ ಪ್ಲಾಟ್‌ಫಾರ್ಮ್ ಬದಲಾವಣೆ ಬಗ್ಗೆ ಘೋಷಣೆ ಮಾಡಿ ಪ್ರಯಾಣಿಕರಲ್ಲಿ ಗೊಂದಲ ಮೂಡಿಸಲಾಯಿತೇ? ರೈಲು ನಿಲ್ದಾಣ ಹಾಗೂ ಬಸ್ ನಿಲ್ದಾಣಗಳಲ್ಲಿ ಜನದಟ್ಟಣೆಯನ್ನು ನಿರ್ವಹಿಸುವಾಗ ಪಾಲಿಸಬೇಕಿರುವ ನಿಯಮಗಳು ಇವೆ. ಹಬ್ಬ, ಧಾರ್ಮಿಕ ಕಾರ್ಯಕ್ರಮಗಳಿಗೆ ತೆರಳುವ ಜನರನ್ನು ನಿರ್ವಹಿಸುವುದು ಹೇಗೆ ಎಂಬುದೂ ಈ ನಿಯಮಗಳ ಭಾಗ. ಈ ನಿಯಮಗಳು ದುರ್ಘಟನೆಯ ಸಾಧ್ಯತೆಗಳನ್ನು ವಿವರಿಸಿವೆ. ನಿಯಮಗಳನ್ನು ಸರಿಯಾಗಿ ಪಾಲನೆ ಮಾಡಿದಲ್ಲಿ ಬಹುತೇಕ ದುರ್ಘಟನೆಗಳನ್ನು ತಡೆಯಬಹುದು. ಕುಂಭಮೇಳ ನಡೆಯುತ್ತಿದ್ದ ಸ್ಥಳದಲ್ಲಿ ತಂತ್ರಜ್ಞಾನವನ್ನು ವ್ಯಾಪಕವಾಗಿ ಬಳಕೆ ಮಾಡಲಾಗಿದೆ. ಕುಂಭಮೇಳಕ್ಕೆ ಸಂಬಂಧಿಸಿದ ಇತರ ಕಡೆಗಳಲ್ಲಿಯೂ ಅದರ ಬಳಕೆ ಹೆಚ್ಚಬೇಕು. ಕುಂಭಮೇಳದ ಸ್ಥಳದಲ್ಲಿ ವ್ಯವಸ್ಥೆಯ ಲೋಪದಿಂದಾಗಿ ಕಾಲ್ತುಳಿತ ಉಂಟಾದ ರೀತಿಯಲ್ಲೇ ರೈಲು ನಿಲ್ದಾಣದಲ್ಲಿಯೂ ಆಗಿದೆ.

ಕಾಲ್ತುಳಿತದಂತಹ ದುರ್ಘಟನೆಗಳು ನಡೆದಾಗ ಆರಂಭದಲ್ಲಿ ಅದನ್ನು ನಿರಾಕರಿಸುವ, ನಂತರ ವಿವರಗಳನ್ನು ತಪ್ಪಾಗಿ ನೀಡುವ ಅಧಿಕೃತ ನೀತಿಯೊಂದು ಜಾರಿಯಲ್ಲಿ ಇರುವಂತೆ ಕಾಣುತ್ತಿದೆ. ಇದು ತೀರಾ ದುರದೃಷ್ಟಕರ. ಸಾವಿನ ಸಂಖ್ಯೆಯನ್ನು ತಿಳಿಸುವಾಗ ಸಾಮಾನ್ಯವಾಗಿ ವಾಸ್ತವಕ್ಕಿಂತ ಕಡಿಮೆ ಸಂಖ್ಯೆಯನ್ನು ಹೇಳುವುದಿದೆ. ದುರ್ಘಟನೆಗೆ ಕಾರಣವಾದ ಸಂದರ್ಭವನ್ನು ಸರಿಯಾಗಿ ತಿಳಿಸುತ್ತಿಲ್ಲ. ಇದರಿಂದಾಗಿ ಪರಿಸ್ಥಿತಿಯ ಸೂಕ್ತ ವಿಶ್ಲೇಷಣೆ ಸಾಧ್ಯವಾಗುತ್ತಿಲ್ಲ, ತಪ್ಪು ಮಾಡಿದವರು ಹೊಣೆಯಿಂದ ತಪ್ಪಿಸಿಕೊಳ್ಳುತ್ತಿದ್ದಾರೆ, ಭವಿಷ್ಯದಲ್ಲಿ ಇಂತಹ ದುರ್ಘಟನೆಗಳನ್ನು ತಡೆಯುವ ಸಾಧ್ಯತೆ ಕ್ಷೀಣವಾಗುತ್ತದೆ. ಕುಂಭಮೇಳದಲ್ಲಿ ಕಳೆದ ತಿಂಗಳು ಸಂಭವಿಸಿದ ಕಾಲ್ತುಳಿತದಲ್ಲಿ ಮೃತಪಟ್ಟವರ ನಿಖರ ಸಂಖ್ಯೆ ಈಗಲೂ ಗೊತ್ತಾಗಿಲ್ಲ. ಆ ಪ್ರಕರಣಕ್ಕೆ ಸಂಬಂಧಿಸಿದಂತೆ ಏನನ್ನೋ ಮುಚ್ಚಿಡುವ ಯತ್ನ ನಡೆದಿರುವಂತಿದೆ, ತನಿಖಾಧಿಕಾರಿಗಳು ನಿರ್ಣಯಕ್ಕೆ ಬರುವ ಮುನ್ನವೇ ಊಹಾಪೋಹಗಳಿಗೆ ರೆಕ್ಕೆ ಬಂದಿರುವಂತಿದೆ. ಶನಿವಾರ ನಡೆದ ದುರ್ಘಟನೆಯ ವಿಚಾರದಲ್ಲಿ ದೆಹಲಿಯ ಲೆಫ್ಟಿನೆಂಟ್ ಗವರ್ನರ್ ತಮ್ಮ ಹೇಳಿಕೆಯನ್ನು ಕೆಲವೇ ಕ್ಷಣಗಳಲ್ಲಿ ಬದಲಾಯಿಸಿದರು, 'ಕಾಲ್ತುಳಿತ' ಎಂಬ ಪದವನ್ನೇ ಕೈಬಿಟ್ಟರು. ಕುಂಭಮೇಳವು ಕೊನೆಗೊಳ್ಳಲು ಇನ್ನೂ ಕೆಲವು ದಿನಗಳು ಬಾಕಿ ಇವೆ, ದೆಹಲಿಯ ಕಾಲ್ತುಳಿತ ಪ್ರಕರಣವು ಕಟ್ಟೆಚ್ಚರದ ಅಗತ್ಯವನ್ನು ಮತ್ತೊಮ್ಮೆ ಹೇಳುವಂತಿದೆ.

ರಾಮಾಯಣ

ದಶರಥ ಕೈಕೇಯಿಯಾದೇವಿಯರ ಸಂವಾದ

• ಹಿಂದಿನ ಸಂಚಿಕೆಯಿಂದ

78ನೆಯ ಅಧ್ಯಾಯ

ಶ್ರೀರಾಮನಿಗೆ ಪಟ್ಟಾಭಿಷೇಕವನ್ನು ಮಾಡಲು ಯತ್ನಮಾಡಿ ನಿಲ್ಲಿಸಿದರೆ, ಬಹುಗುಣವೃದ್ಧರಾದ ಅರಸರು ಶ್ರೀರುಮನಲ್ಲ ಅವಗುಣವಿರುವುದಾಗಿಯೂ ಅದರಿಂದ ಆತನಿಗೆ ಪಟ್ಟಾಭಿಷೇಕವನ್ನು ನಿಲ್ಲಿಸಿ ಭರತನಿಗೆ ರಾಜ್ಯಾಧಿಪತ್ಯವನ್ನು ಮಾಡಿದಹಾಗೆಯೂ ತಿಳಿದು ಕೊಳ್ಳುತ್ತಾರೆ. ಅವರು ಈ ವಿಷಯವನ್ನು ಕೇಳಿದರೆ ಅವರಿಗೆ ನಾನು ಏನು ಉತ್ತರವನ್ನು ಕೊಡಲಿ ನಿನ್ನ ಬಾಧೆಯನ್ನು ಸಹಿಸಲಾರದೆ ಆತನನ್ನು ವನವಾಸಕ್ಕೆ ಕಳುಹಿಸಿದೆನೆಂದರೆ ಇದು ಸತ್ಯವಾದರೂ ಅಸತ್ಯವೆಂದೇ ಅವರು ತಿಳಿಯುತ್ತಾರೆ. ಆತನು ವನವಾಸಕ್ಕೆ ಹೋದರೆ ಕೌಸಲ್ಯೆಯು ಏನೆಂದು ನುಡಿಯುವಳು ಕೌಸಲ್ಯಾದೇವಿಗೆ ದ್ರೋಹವನ್ನೆಣಿಸುವಂಥ ನಿನ್ನನ್ನು ಏನು ಮಾಡಬೇಕು ಆ ದೇವಿಗೆ ನಾನು ಏನು ಪ್ರತ್ಯುತ್ತರವನ್ನು ಕೊಡಲಿ ಕೌಸಲ್ಯಾದೇವಿಯು ನನಗೆ ಸಾಧಾರಣ ಪ್ರಾಣಕಾಂತೆ ಮಾತ್ರವಲ್ಲದೆ ಕಾಲೋಚಿತವಾದ ಸತ್ಕಾರಗಳನ್ನು ಮಾಡತಕ್ಕವಳು. ಸೇವೆಮಾಡುವಲ್ಲಿ ದಾಸಿಯಂತೆಯೂ ಇಷ್ಟಾಲಾಪಗಳಲ್ಲಿ ಸಖಿಯಂತೆಯೂ ಹಿತವನ್ನು ಬಯಸುವಲ್ಲಿ ಒಡಹುಟ್ಟಿದ ವಳಂತೆಯೂ ಶರೀರಪೋಷಣೆ ಮಾಡುವಲ್ಲಿ ತಾಯಿಯಂತೆಯೂ ಇರುವವಳು. ಯಾವಾಗಲೂ ಪ್ರಿಯೋಕ್ತಿಗಳನ್ನೇ ನುಡಿಯುವವಳು. ನನಗೆ ಬಹುಪ್ರಿಯಳು. ಶ್ರೀರಾಮನಲ್ಲಿಯೂ ಬಹು ಪ್ರೀತಿಯುಳ್ಳವಳು. ಅಂಥವಳನ್ನು ನಾನು ನಿನಗೆ ಅಂಜಿಕೊಂಡು ಸತ್ಕರಿಸಲಿಲ್ಲ. ನಾನು ಜನ್ಮಾಂತರ ದಲ್ಲಿ ಮಾಡಿದ ಕರ್ಮವಿಶೇಷದಿಂದ ನಿಸ್ನಂಥ ಸ್ತ್ರೀಯನ್ನು ಪಡೆದು ಅಪಥ್ಯಾಹಾರವನ್ನು ಹಿತವೆಂದು ತೆಗೆದುಕೊಂಡ ವ್ಯಾಧಿಗ್ರಸ್ತನಂತೆ ಆದೆನು. ಶ್ರೀರಾಮನನ್ನು ವನವಾಸಕ್ಕೆ ಕಳುಹಿಸಬೇಕೆಂಬ ದುರ್ವಾರ್ತೆಯನ್ನು ಕೇಳಿದರೆ ಸುಮಿತ್ರೆಯು ನನ್ನಲ್ಲಿ ಹೇಗೆ ವಿಶ್ವಾಸವಿಡುವಳು ಅತ್ಯಂತ ಸಾತ್ತ್ವಿಕಗುಣಸಂಪನ್ನೆಯಾದ ಸೀತಾದೇವಿಯು ತನ್ನ ಪತಿಯ ವನವಾಸವಾರ್ತೆಯನ್ನು ಕೇಳಿದಾಗಲೇ ತನ್ನೆ ಪ್ರಾಣಗಳನ್ನು ಬಿಡುವಳು. ಶ್ರೀರಾಮನು ವನವಾಸಕ್ಕೆ ತೆರಳಿದನಾದರೆ ಆ ದೇವಿಯು ಕಿನ್ನರ ನಿಂದ ಅಗಲಿದ ಕಿನ್ನರಿಯೆ ಹಾಗೆ ದುಃಖಪಡುವಳು. ವನವಾಸಕ್ಕೆ ತೆರಳುವ ತನ್ನ ಪತಿಯನ್ನು ಕಂಡು ದುಃಖಿಸುವ ಸೀತಾದೇವಿಯನ್ನು ನೋಡಿ ನಾನು ಜೀವವನ್ನು ಧರಿಸಲಾರೆನು. ನೀನು ವಿಧವೆಯಾಗಿ ಮಗನನ್ನು ಕೂಡಿಕೊಂಡು ರಾಜ್ಯವನ್ನಾಳಬೇಕಾಗುತ್ತದೆ. ಶ್ರೀರಾಮನು ವನವಾಸಕ್ಕೆ ತೆರಳಿದರೆ ನಾನು ಎಂದಿಗೂ ಜೀವಿಸಲಾರೆನು. ನಿನ್ನನ್ನು ದುಷ್ಟ ಸ್ತ್ರೀಯೆಂದರಿಯದೆ ಇಲ್ಲಿಯವರೆಗೆ ಅಂತರಂಗಶುದ್ಧಳಾದವಳೆಂದು ತಿಳಿದುಕೊಂಡಿದ್ದೆನು. ವಿಷದೊಡನೆ ಕೂಡಿದ ಸುಧೆಯನ್ನು ಸೇವಿಸಿ ದವನಂತೆ ನಿನ್ನ ದುಷ್ಟ ಸ್ವಭಾವವನ್ನು ಅರಿಯದೆಹೋದೆನು. ನೀನು ಮೃದುನುಡಿಗಳಿಂದ ನನ್ನನ್ನು ಇದುವರೆಗೆ ವಶವರ್ತಿಯಾಗಿ ಮಾಡಿಕೊಂಡು, ಬೇಟೆಗಾರನು ಮನೋಹರವಾದ ನಾದದಿಂದ ಮೃಗಗಳನ್ನು ವಶಮಾಡಿಕೊಂಡು ಕೊಲ್ಲುವಂತೆ, ಕಪಟಸ್ನೇಹದಿಂದ ನನ್ನನ್ನು ಮೋಸಗೊಳಿಸಿದೆ. ನಾನು ನಿನ್ನ ಮಾತನ್ನು ಕೇಳಿ ಶ್ರೀರಾಮನನ್ನು ವನವಾಸಕ್ಕೆ ಕಳುಹಿಸಿದರೆ ಮಹಾತ್ಮರಾದ ಪುಣ್ಯಪುರುಷರು ಹೆಂಗಸಿನ ಮಾತನ್ನು ಕೇಳಿ ಅನೇಕ ಗುಣಸಂಪನ್ನನಾಗಿ ಜ್ಯೇಷ್ಠಪುತ್ರನಾದ ಶ್ರೀರಾಮನನ್ನು ವನವಾಸಕ್ಕೆ ಕಳುಹಿಸಿದನೆಂದು ಸುರಾಪಾನವನ್ನು ಮಾಡಿದ ಬ್ರಾಹ್ಮಣನನ್ನು ನಿಂದಿಸುವಂತೆ ದಾರಿಗಳಲ್ಲಿ ನನ್ನನ್ನು ನಿಂದಿಸುವರು. ಕೇರಿಕೇರಿಯಲ್ಲಿಯೂ ನನ್ನ ನಿಂದೆಯನ್ನು ಕೇಳುವಂಥ ದುಃಖವು ಏಕೆ ಬರಬೇಕು ಇದು ನಾನು ಪೂರ್ವಜನ್ಮದಲ್ಲಿ ಮಾಡಿದ ದುಷ್ಕರ್ಮಫಲವಲ್ಲದೆ ಮತ್ತೊಂದಲ್ಲ. ನಾನು ಇಷ್ಟರವರೆಗೆ ನಿನ್ನನ್ನು ನನ್ನ ಪ್ರಾಣಗಳಿಗೆ ಸಮನಾದ ಸ್ತ್ರೀಯೆಂದು ಪರಿಪಾಲಿಸಿಕೊಂಡಿದ್ದು ಅಜ್ಞಾನದಿಂದ ಬಲೆಗೆ ಸಿಕ್ಕಿದ ಮೃಗದಂತೆ ಕೆಟ್ಟೆನು. ಇಷ್ಟು ದಿವಸಗಳು ನನ್ನ ಸಂಗಡ ಕ್ರೀಡಿಸಿ ಕೊಂಡಿದ್ದ ನಿನ್ನನ್ನು ಮೃತ್ಯು ಸ್ವರೂಪಳೆಂದು ತಿಳಿಯದೆ ಬಾಲಕನು ಏಕಾಂತದಲ್ಲಿ ಕೃಷ್ಣಸರ್ಪವನ್ನು ಕೈಯಿಂದ ತುಡುಕಿ ಕಚ್ಚಿಸಿಕೊಂಡಂತೆ ಆದೆನು. ಶ್ರೀರಾಮನನ್ನು ವನವಾಸಕ್ಕೆ ಕಳುಹಿಸಿದೆನಾದರೆ ಪುತ್ರವಿಯೋಗದ ದುಃಖದಿಂದ ನಾನು ಜೀವಿಸಲಾರೆನು.

ಮುಂದುವರಿಯುವುದು...

ನಾಟ್ಯ ವಿಶಾರದೆ ಕು. ದೀಪರಾಣಿ ಭರತನಾಟ್ಯ ರಂಗಪ್ರವೇಶ

• ಉದಯವಾಹಿನಿ, ಬೆಂಗಳೂರು

ನೃತ್ಯ ದಿಶಾ ಟ್ರಸ್ಟ್ ರೂವಾರಿ 'ಕಲಾಭೂಷಿಣಿ ಗುರು ಶ್ರೀಮತಿ ಡಾ. ದರ್ಶಿನಿ ಮಂಜುನಾಥ್ ಅವರ ಶಿಷ್ಯೆ ಕು. ದೀಪರಾಣಿ ಭರತನಾಟ್ಯ ರಂಗ ಪ್ರವೇಶಕ್ಕೆ ಆಣೆಯಾಗಿದ್ದಾರೆ. ಇದೇ ಫೆ. 21, ಶುಕ್ರವಾರ ಸಂಜೆ 5:00 ಗಂಟೆಗೆ ನಗರದ ಜೆ.ಸಿ. ರಸ್ತೆಯಲ್ಲಿರುವ ರವೀಂದ್ರ ಕಲಾಕ್ಷೇತ್ರದಲ್ಲಿ ಆಯೋಜಿಸಲಾಗಿದೆ.

ಭರವಸೆಯ ಪ್ರತಿಭೆ: ನಾಟ್ಯ ವಿಶಾರದೆ ಕು. ದೀಪರಾಣಿ ಕಳೆದ 15 ವರ್ಷಗಳಿಂದ ನೃತ್ಯ ಅಭ್ಯಸಿಸುತ್ತಿದ್ದು, ಕರ್ನಾಟಕ ಪ್ರೌಢ ಶಿಕ್ಷಣ ಮಂಡಳಿ ಜೂನಿಯರ್, ಸೀನಿಯರ್, ವಿದ್ವತ್ ಹಾಗೂ ಗಂಧರ್ವ ಪರೀಕ್ಷೆ ವಿಶಾರದ ಪೂರ್ಣಗಳನ್ನು ಉತ್ತಮ ದರ್ಜೆಯಲ್ಲಿ ಮುಗಿಸಿದ್ದಾರೆ. ಪ್ರಸ್ತುತ ವಿದ್ವತ್ ಅಂತ್ಯ ತಯಾರಿಯಲ್ಲಿರುವ ದೀಪ ಭರವಸೆಯ ನೃತ್ಯ ಕಲಾವಿದೆ.

15 ವರ್ಷಗಳಿಂದ ನೃತ್ಯ ಅಭ್ಯಸ

ನೃತ್ಯ ದಿಶಾ ಸಂಸ್ಥೆಯ ಅಡಿಯಲ್ಲಿ ಅನೇಕ ಕಾರ್ಯಕ್ರಮಗಳನ್ನು ನೀಡಿರುವ ದೀಪ ಸಂಸ್ಥೆಯ ನೃತ್ಯ ಸಂಭ್ರಮ ಒಳಗೊಂಡು ಹಂಪಿ ಉತ್ಸವ, ದಸರಾ ಉತ್ಸವ, ದುಬೈನಲ್ಲಿ ನಡೆದ ರಾಜ್ಯೋತ್ಸವ ಕಾರ್ಯಕ್ರಮ, ಉ20 ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದಾರೆ. ಇವರ ರಂಗಪ್ರವೇಶಕ್ಕೆ ಮುಖ್ಯ ಅತಿಥಿಗಳಾಗಿ ಡಾ.ಎಂ. ಸೂರ್ಯಪ್ರಸಾದ್, ಕಲಾಮಂಡಲಂ ಗುರು ಉಷಾ ದಾತಾರ್ ಹಾಗೂ ಶ್ರೀ ಮಂಜುನಾಥ್ ಡಿ.ಕೆ. ಆಗಮಿಸಲಿದ್ದಾರೆ. ದೀಪ ರಂಗ ಪ್ರವೇಶ ಪ್ರಸ್ತುತಿಗೆ ಗುರು ಶ್ರೀಮತಿ ಡಾ. ದರ್ಶನಿ ಮಂಜುನಾಥ್ (ನಟ್ಟುವಾಂಗ), ವಿದುಷಿ ಶ್ರೀಮತಿ ಭಾರತಿ ವೇಣುಗೋಪಾಲ್ (ಗಾಯನ), ವಿದ್ವಾನ್ ಎಸ್.ವಿ. ಗಿರಿಧರ್ (ಮೃದಂಗ), ವಿದ್ವಾನ್ ಎಚ್.ಎಸ್. ವೇಣುಗೋಪಾಲ್ (ಕೊಳಲು), ವಿದ್ವಾನ್ ಕಾರ್ತಿಕ ವೈಧಾತ್ರಿ (ರಿದಂ ಪ್ಯಾಡ್) ಹಾಗೂ ಮಾಸ್ಟರ್ ಅಚ್ಯುತ್ ಜಗದೀಶ್ (ವೀಣೆ) ಸಹಕರಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಕಲಾ ಪ್ರೋತ್ಸಾಹಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯುವ ಕಲಾವಿದೆಯನ್ನು ಆಶೀರ್ವದಿಸಬೇಕೆಂದು ಸಂಸ್ಥೆಯ ಮುಖ್ಯಸ್ಥರಾದ ಶ್ರೀ ಮಂಜುನಾಥ್ ರವರು ವಿನಂತಿಸಿದ್ದಾರೆ .

ನೀ ಬಿಟ್ಟು ಹೋದ ಲೇಖನಿ

ವಿಶ್ವಾಸ್.ಡಿ.ಗೌಡ

• ಉದಯವಾಹಿನಿ, ವಿಶೇಷ

ಮನುಷ್ಯ ಎಷ್ಟೇ! ಸಿರಿವಂತನಾದರೂ ಗುಣಕ್ಕೆ ಬೆಲೆ ಜಾಸ್ತಿ. ಹೆಸರಿನಿಂದ ವ್ಯಕ್ತಿತ್ವ ಅರಳುವುದಿಲ್ಲ, ವ್ಯಕ್ತಿತ್ವದಿಂದ ಹೆಸರು ಅರಳುತ್ತದೆ.. ಅಕ್ಷರಗಳ ಅಕ್ಷಯ ಪಾತ್ರೆಯಲ್ಲಿ ಕವಿತೆ ಕಟ್ಟುವ ಕಲೆ ಶ್ರೀಗಂಧದಂತೆ ಇರಬೇಕು ಹೂ ತುಂಡಾದರು ಸುಗಂಧ ಮಾತ್ರ ತುಂಡಾಗದ ರೀತಿ, ಪ್ರತಿ ಕಾಲಘಟ್ಟದಲ್ಲೂ ನೆನಪಿಸಿಕೊಳ್ಳಬೇಕಾದ ಚುಟುಕಗಳು ಇಲ್ಲಿ ಪ್ರಸ್ತಾಪಗೊಂಡಿವೆ..ನೀ ಬಿಟ್ಟುಹೋದ ಲೇಖನಿ ಕವಯತ್ರಿ, ಸುಧಾಕೃಷ್ಣ ಅವರಿಗೆ ಮುಸ್ಸಂಜೆಯ ತಂಪಾದ ತಂಗಾಳಿಯಲ್ಲಿ ಮನಸ್ಸಿನಲ್ಲಿ ಮೂಡಿ ಬರುವ ಭಾವನೆಗಳಿಗೆ ಅಕ್ಷರಗಳ ರೂಪದಲ್ಲಿ ಬಿದ್ದ ಹನಿಗಳು. ಮಳೆ ನಿಂತರೂ ಮರದ ಹನಿ ನಿಲ್ಲದ ಹಾಗೆ ಸದಾ ಹಸಿರಾಗಿದ್ದು ಹೃದಯ ಮತ್ತು ಮನಸ್ಸಿನಲ್ಲಿ ತೊಟ್ಟಿಕ್ಕುವ ಭಾವನೆಗಳು ಸದಾ ಜೀವಂತ ನಿದರ್ಶನ ಎಂಬುದನ್ನ ಇಲ್ಲಿ ಅನೇಕ ಚುಟುಕುಗಳು ನಿರೂಪಿಸುತ್ತವೆ. ಉದಾಹರಣೆಗೆ

★ ಪ್ರೀತಿಯ ಅಂಬಿಗೆ
★ ನೀರೆರೆಯಲಿಲ್ಲ ನೀ ನೀರುಣಿಸಿತು
★ ನೀ ಕೊಟ್ಟ ಕಂಬನಿ
★ ನನ್ನ ನಗುವ ನುಂಗಿದೆ ನೀ
★ ನನ್ನ ನೋವ ನುಂಗಿ ತೇಗಿದೆ
★ ನೀ ಬಿಟ್ಟು ಹೋದ ಲೇಖನಿ

ಹಾಗಾಗಿ ಹನಿ ಹನಿ ಗೂಡಿ ದರೆ ಹಳ್ಳ ತೆನೆ ತೆನೆ ಗೂಡಿದರೆ ಬಳ್ಳ ಎಂಬಂತೆ ಒಂದೊಂದು ಚುಟುಕುಗಳಿಂದ ತುಂಬಿ ತುಳುಕಿ ಬಳುಕುತ್ತಿವೆ ನಳನಳಿಸುತ್ತಿವೆ ನೀ ಬಿಟ್ಟು ಹೋದ ಲೇಖನಿ.



ಉದಯವಾಹಿನಿ ಚಿತ್ರ

ವೃತ್ತಿಯಲ್ಲಿ ಶಿಕ್ಷಕಿಯಾಗಿ, ಪ್ರವೃತ್ತಿಯಲ್ಲಿ ಲೇಖಕಿಯಾಗಿ ಕವಿ ಮನಸ್ಸು ಹೃದಯದ ತುಂಬೆಲ್ಲ ಹರಡಿ ಅಕ್ಷರಗಳ ಅರಳಿಸುವ ಕವಯತ್ರಿ, ಸುಜಾತ ಕೃಷ್ಣ ಅವರ ಬರವಣಿಗೆಯ ಶೈಲಿ ಅವುಗಳ ದಾಟಿ ಪ್ರಸಂಶನೀಯ ಸುಮಾರು 250 ಚುಟುಕುಗಳ ತಮ್ಮ 'ನೀ ಬಿಟ್ಟು ಹೋದ ಲೇಖನಿಯಲ್ಲಿ ಅಂತರಾಳದ ಅನುಭವ ಅಧ್ಯಯನಶೀಲರಾಗಿ ಚುಟುಕುಗಳ ರೂಪದಲ್ಲಿ ಎದೆದವ ತಟ್ಟುವ ಓದುಗರ ಮನ ಮುಟ್ಟುವ ನಿಟ್ಟಿನಲ್ಲಿ ಹೊರಹೊಮ್ಮಿವೆ ಅಕ್ಷರಗಳ ರೂಪದಲ್ಲಿ ಚಿಮ್ಮಿವೆ. ಬದುಕಿನ ಏನೆಲ್ಲ ಭಾವನೆ ಕಲ್ಪನೆ ಮನಸ್ಸು ಹೃದಯಗಳ ವೇದನೆ ಸಂವೇದನೆ ವ್ಯವಸ್ಥೆ, ಹಬ್ಬ ಹರಿದಿನಗಳು, ಸಾವು ನೋವುಗಳು, ಹಸಿರು ನಿಟ್ಟುಸಿರು, ಬದುಕು ಬವಣೆ. ಸೋಲು ಗೆಲುವು, ವಸುಂಧರೆ, ಪರಿಚಯ, ಪ್ರತಿಭೆ ಫಸಲುಗಳ ಒಟ್ಟು ಸಂಕಲನದ ಅನಾವರಣವೇ ಈ ನೀ ಬಿಟ್ಟುಹೋದ ಲೇಖನಿ ಒಂದೊಂದು ಚುಟುಕಿನಲ್ಲೂ ಒಂದೊಂದು ಸಂದೇಶ ವಿದೆ ಇಲ್ಲಿ ವ್ಯವಸ್ಥೆಯ ಕುಟುಕಿವೆ, ಕೆದಕಿ ಕೆಣಕಿ ಕೆರಳಿಸಿವೆ ಪ್ರೀತಿ ಪ್ರೇಮ ವಾತ್ಸಲ್ಯವ ಅರಳಿಸಿವೆ. ಬಾಳಿನ ಸಾರ ಸಂಗ್ರಹ ಭಟ್ಟಿಇಳಿಸಿ ನಮಗೆಲ್ಲ ಉಣ ಬಡಿಸಿರುವ ಸುಜಾತ ಕೃಷ್ಣ ಅವರಿಗೆ ಅಭಿನಂದನೆಗಳು ಒಟ್ಟಾರೆ ನೀ ಬ

ಸ್ವಾಸ್ತ್ಯ ಸಂಕಲ್ಪ ಕಾರ್ಯಕ್ರಮ ಉದ್ಘಾಟನೆ

• ಉದಯವಾಹಿನಿ,ಚಿಂಚೋಳಿ

ಉದಯವಾಹಿನಿ ಚಿತ್ರ

ತಾಲ್ಲೂಕಿನ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್ ಆಶ್ರಯದಲ್ಲಿ ವೀರೇಂದ್ರ ಪಾಟೀಲ್ ಶಿಕ್ಷಣ ಸಂಸ್ಥೆಯ ಕಾಲೇಜಿನಲ್ಲಿ ಸ್ವಾಸ್ತ್ಯ ಸಂಕಲ್ಪ ಕಾರ್ಯಕ್ರಮವನ್ನು ವೀರೇಂದ್ರ ಪಾಟೀಲ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷ ಬಸವ ರಾಜ ಮಾಲಿ ಉದ್ಘಾಟನೆ ಮಾಡಿದರು.

ಧರ್ಮಸ್ಥಳ ಸಂಸ್ಥೆಯ ಕೃಷಿ ಮೇಲ್ವಿಚಾರಕ ಸತೀಶ್ ಕೆ ಎಚ್ ಪ್ರಸ್ತಾವಿಕವಾಗಿ ಮಾತನಾಡಿದರು, ಸಂಪನ್ಮೂಲ ವ್ಯಕ್ತಿಗಳಾಗಿ ಜನಜಾಗೃತಿ ವೇದಿಕೆ ಯೋಜನಾಧಿಕಾರಿ ರಾಜೇಶ ವಿದ್ಯಾರ್ಥಿಗಳನ್ನು ಉದ್ದೇಶಿಸಿ ದುಶ್ಚಟಗಳಿಂದ ಆಗುವ ತೊಂದರೆಗಳು ಬಗ್ಗೆ ಸ್ವವಿಸ್ತಾರವಾಗಿ ಮಾತನಾಡಿದರು. ಜನಜಾಗೃತಿ ವೇದಿಕೆ ಜಿಲ್ಲಾ ಉಪಾಧ್ಯಕ್ಷೆ ನರಸಮ್ಮ ಲಕ್ಷ್ಮಣ ಆವುಂಟಿ,ಸುರೇಶ ದೇಶಪಾಂಡೆ, ಶಾಲೆಯ ಮುಖ್ಯ ಗುರುಗಳು ಜ್ಯೋತಿ ರೆಡ್ಡಿ,ಕನ್ನಡ ಮಾಧ್ಯಮ ಶಾಲೆಯ ಮುಖ್ಯ ಗುರುಗಳು ವಿಶ್ವನಾಥ ಸೇರಿದಂತೆ ಶಾಲೆಯ ಸಿಬ್ಬಂದಿಗಳು,ವಿದ್ಯಾರ್ಥಿಗಳು ಹಾಗೂ ಸೇವಾಪ್ರತಿನಿಧಿ ಇದ್ದರು.

ರಸ್ತೆ ಸುರಕ್ಷತೆಯ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ: ಡಾ. ಗೋಪಾಲ

• ಉದಯವಾಹಿನಿ ಧಾರವಾಡ

ಉದಯವಾಹಿನಿ ಚಿತ್ರ

ಸಾರ್ವಜನಿಕರು ರಸ್ತೆಯಲ್ಲಿ ವಾಹನ ಚಾಲನೆ ಮಾಡುವಾಗ ರಸ್ತೆ ಸುರಕ್ಷತೆಯ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿದ್ದಲ್ಲಿ ರಸ್ತೆ ಅಪಘಾತಗಳನ್ನು ತಡೆಗಟ್ಟಬಹುದಾಗಿದೆ. ಚಾಲಕರು ತಮ್ಮ ಹಾಗೂ ತಮ್ಮ ಸಂಗಡಿಗ ಸವಾರರ ಸುರಕ್ಷಿತೆ ಬಗ್ಗೆ ಕಾಳಜಿ ವಹಿಸಿ, ವಾಹನ ಚಲಾಯಿಸಬೇಕು.

ಜಾಗೃತಿ ಮೂಡಿಸಲು ಪೊಲೀಸ್ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆಗಳಿಂದ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಎಂ. ಬ್ಯಾಕೋಡ ಅವರು ಹೇಳಿದರು. ಅವರು ಜಿಲ್ಲಾಡಳಿತ, ಸಾರಿಗೆ ಇಲಾಖೆ, ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ (ಹುಬ್ಬಳ್ಳಿ-ಧಾರವಾಡ), ಮೋಟಾರು ಡ್ರೈವಿಂಗ್ ಅಸೋಸಿಯೇಷನ್, ಧಾರವಾಡ ಜಿಲ್ಲೆಯ ವಾಹನಗಳ ಅಧಿಕೃತ ಮಾರಾಟಗಾರರು ಹಾಗೂ ಕರ್ನಾಟಕ ವಿಶ್ವವಿದ್ಯಾಲಯ, ಎನ್.ಎಸ್.ಎಸ್. ಕೋಶ, ಶಿಕ್ಷಣ ಮಹಾವಿದ್ಯಾಲಯದ ಎನ್.ಎಸ್.ಎಸ್. ಘಟಕ ಮತ್ತು ಸರ್. ಸಿದ್ದಪ್ಪ ಕಂಬಳಿ ಕಾನೂನು ಮಹಾವಿದ್ಯಾಲಯದ ಸಹಯೋಗದಲ್ಲಿ ಕೆ.ಸಿ.ಡಿ ವೃತ್ತದಿಂದ ಜುಬಲಿ ಸರ್ಕಲ್‌ದವರೆಗೆ ಆಯೋಜಿಸಿದ್ದ ಕಾಲ್ನಡಿಗೆ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಮಾತನಾಡಿದರು. ನಗರದಲ್ಲಿ ಬೇರೆ ರೀತಿಯಾದ ಸನ್ನಿವೇಶ ಹಾಗೂ ಬೇರೆ ಬೇರೆಯಾದ ಪ್ರಕರಣಗಳಲ್ಲಿ ಸಂಭವಿಸುವ ಸಾವಿನ ಸಂಖ್ಯೆಗಳಿಗಿಂತ ಅಪಘಾತದಿಂದ ಮರಣ ಹೊಂದಿರುವವರ ಸಂಖ್ಯೆಯು ಹೆಚ್ಚಾಗಿರುತ್ತದೆ. ಆದ್ದರಿಂದ ರಸ್ತೆಯಲ್ಲಿ ವಾಹನ ಸಂಚಾರ ಮಾಡುವಾಗ ರಸ್ತೆ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ, ಅಪಘಾತಗಳನ್ನು ತಪ್ಪಿಸುವಲ್ಲಿ ಇಲಾಖೆಗಳೊಂದಿಗೆ ಸಾರ್ವಜನಿಕರು ಕೈಜೊಡಿಸಬೇಕೆಂದು ತಿಳಿಸಿದರು.

ಸಂಚಾರಿ ನಿಯಮಗಳನ್ನು ಪಾಲಿಸುವದರಿಂದ ಜೀವ ರಕ್ಷಣೆ ಆಗುತ್ತದೆ. ಮತ್ತು ಇತರರನ್ನು ಅಪಘಾತದಿಂದ ತಪ್ಪಿಸಬಹುದಾಗಿದೆ. ಅಪ್ರಾಪ್ತರಿಗೆ ಪಾಲಕರು ವಾಹನಗಳನ್ನು ಚಲಾಯಿಸಲು ನೀಡಬಾರದು. ಹೆಲ್ಮೆಟ್, ಸೀಟ್ ಬೇಲ್ಟ್ ಧಾರಣೆ ಸೇರಿದಂತೆ ಅಗತ್ಯ ಸುರಕ್ಷಾ ಕ್ರಮಗಳನ್ನು ಅನುಸರಿಸಬೇಕೆಂದು ಅವರು ಹೇಳಿದರು.

ಮಿನಿ ನ್ಯೂಸ್

ಸೇತುವೆ ಕಾಮಗಾರಿ ಪರಿಶೀಲಿಸಿದ ಸಚಿವ ಸತೀಶ್ ಜಾರಕಿಹೊಳಿ

• ಉದಯವಾಹಿನಿ ಬಂಟ್ವಾಳ

ಲೋಕೋಪಯೋಗಿ ಇಲಾಖಾ ಸಚಿವರಾದ ಸತೀಶ್ ಜಾರಕಿಹೊಳಿ ಅವರು ದುರಸ್ಥಿ ಕಾರ್ಯ ಪ್ರಗತಿಯಲ್ಲಿರುವ ಪೊಳಲಿ- ಅಡ್ಡೂರು ಸೇತುವೆಗೆ ಭೇಟಿ ನೀಡಿ ಕಾಮಗಾರಿಯನ್ನು ಪರಿಶೀಲಿಸಿ ಇಲಾಖಾ ಇಂಜಿನಿಯರ್‌ಗಳಿಂದ ಮಾಹಿತಿ ಪಡೆದರು.

ಬಂಟ್ವಾಳ ಶಾಸಕ ರಾಜೇಶ್ ನಾಯ್ಕ್ ಉಳಿಪಾಡಿಗುತ್ತು ಈ ಸಂದರ್ಭದಲ್ಲಿ ಹಾಜರಿದ್ದು,ಇತಿಹಾಸ ಪ್ರಸಿದ್ದ ಪೊಳಲಿ ಕ್ಷೇತ್ರದಲ್ಲಿ ಮುಂದಿನ ತಿಂಗಳು ನಡೆಯುವ ಶತಚಂಡಿಕಾಯಾಗ ಬಳಿಕ ಒಂದು ತಿಂಗಳ ಪರ್ಯಂತ ನಡೆಯಲಿರುವ ವಾರ್ಷಿಕ ಜಾತ್ರಾ ಮಹೋತ್ಸವದ ಹಿನ್ನಲೆಯಲ್ಲಿ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಿ ಕ್ಷೇತ್ರಕ್ಕಾಗಮಿಸುವ ಭಕ್ತರಿಗೆ ಅನುಕೂಲ ಮಾಡಿಕೊಡುವಂತೆ ಮನವಿ ಮಾಡಿದರು. ಇದಕ್ಕೆ ಸ್ಪಂದಿಸಿದ ಸಚಿವರು ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸೇತುವೆಯ ಸಾಮರ್ಥ್ಯವನ್ನು ವೃದ್ಧಿಸುವ ನಿಟ್ಟಿನಲ್ಲಿ ಯಂತ್ರದ ಮೂಲಕ ಸೇತುವೆಯನ್ನು ಮೇಲಕ್ಕೆತ್ತಿ ಅದರ ಅಡಿ ಭಾಗದಲ್ಲಿ ಬೇರಿಂಗ್ ಅಳವಡಿಸುವ ಕೆಲಸ ಆಗಬೇಕಾಗಿದ್ದು,ಇದಕ್ಕೆ ಹತ್ತರಿಂದ ಹದಿನೈದು ದಿನಗಳ ಕಾಲಾವಕಾಶ ಬೇಕಾಗುತ್ತದೆ ಎಂದು ಇಂಜಿನಿಯರ್ ಗಳು ಸಚಿವರ ಗಮನಕ್ಕೆ ತಂದರು.

ಪೊಳಲಿ ಕ್ಷೇತ್ರದ ಕಾರ್ಯಕ್ರಮದ ಹಿನ್ನಲೆಯಲ್ಲಿ ಈ ಕೂಡಲೇ ಸೇತುವೆಯಲ್ಲಿ ಎಲ್ಲಾ ವಾಹನ ಸಂಚಾರ ಸ್ಥಗಿತಗೊಳಿಸಿ ಬೇರಿಂಗ್ ಅಳವಡಿಸುವ ಕಾರ್ಯವನ್ನು ಅದ್ಯತೆಯ ನೆಲೆಯಲ್ಲಿ ಮೊದಲಿಗೆ ಮುಗಿಸಿದ ಬಳಿಕ ಲಘು ವಾಹನಗಳ ಸಂಚಾರ ಅನುಕೂಲ ಮಾಡಿ ಕ್ಷೇತ್ರದ ಜಾತ್ರೆ ಮುನ್ನ ಎಲ್ಲಾ ಕಾಮಗಾರಿ ಪೂರ್ಣಗೊಳಿಸುವಂತೆ ಸಚಿವ ಸತೀಶ್ ಜಾರಕಿಹೊಳಿ ಇಂಜಿನಿಯರ್ ಅವರಿಗೆ ಸೂಚಿಸಿದರು. ಕೆಡಿಪಿ ಸಭೆಯಲ್ಲಿ ಶಾಸಕ ರಾಜೇಶ್ ನಾಯ್ಕ್ ಅವರು ಈ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರ ಗಮನಸೆಳೆದು ಜಿಲ್ಲಾ ಪ್ರವಾಸದಲ್ಲಿರುವ ಲೋಕೋಪಯೋಗಿ ಇಲಾಖಾ ಸಚಿವರು ಪೊಳಲಿ- ಅಡ್ಡೂರು ಸೇತುವೆ ಕಾಮಗಾರಿಯ ಪರಿಶೀಲನೆ ನಡೆಸುವಂತೆ ಮನವಿ ಮಾಡಿದ್ದರು.

● ತಾಲ್ಲೂಕಿನ ಕಿಷ್ಣಾಪೂರ ತಾಂಡಾದ ಸುತ್ತಮುತ್ತ ಗಣಿಗಾರಿಕೆ, ನಿವಾಸಿಗಳಿಗೆ ಧೂಳು

ಶುದ್ಧ ಗಾಳಿಯಿಲ್ಲ ,ಮನೆಗಳಲ್ಲಿ ಬಿರುಕು: ಭಯದಲ್ಲಿ ಜೀವನ

• ಉದಯವಾಹಿನಿ,ಚಿಂಚೋಳಿ


ಉದಯವಾಹಿನಿ ಚಿತ್ರ


ಉದಯವಾಹಿನಿ ಚಿತ್ರ

ತಾಲ್ಲೂಕಿನ ಕಿಷ್ಣಾಪೂರ ತಾಂಡಾದ ಸುತ್ತಮುತ್ತಲಿನ ಪ್ರದೇಶದಲ್ಲಿ ಕಲ್ಲು ಗಣಿಗಾರಿಕೆ ನಡೆಸುತ್ತಿರುವುದು ಮತ್ತು ಗಣಿಯಲ್ಲಿ ಬ್ಲಾಸ್ಟಿಂಗ್ ಮಾಡುವುದು ಮತ್ತು ಗಣಿ ಸುತ್ತಲ್ಲಿನ ಪ್ರದೇಶದಲ್ಲಿ ಎತ್ತರ ಮಟ್ಟಿಗೆ ಕಲ್ಲಿನ ಚಿಲಪಾಗಳು ರಾಶಿ ಹಾಕುತ್ತಿರುವುದರಿಂದ ತಾಂಡಾ ನಿವಾಸಿಗಳಿಗೆ ಶುದ್ಧ ಗಾಳಿ ಕೊರತೆ, ಬಿಸಿಲಿನ ಕೊರತೆ, ಧೂಳಿನಿಂದ ರೋಗರುಜಿನಗಳು ಬರುವ ಸಾಧ್ಯತೆ ಹೀಗೆ ಹತ್ತಾರು ಸಮಸ್ಯೆಗಳಿಂದ ತಾಂಡಾದ ನಿವಾಸಿಗಳು ಭಯದಲ್ಲಿ ಜೀವನ ಕಳೆಯುತ್ತಿದ್ದಾರೆ ಎಂದು ಗ್ರಾಪಂ ಮಾಜಿ ಸದಸ್ಯೆ ರೇಣುಕಾ ರಾಠೋಡ್ ಆರೋಪಿಸಿದ್ದಾರೆ.

ಮನೆಗಳ ಗೋಡೆಗಳಲ್ಲಿ ಬಿರುಕು

ತಾಲ್ಲೂಕಿನ ಮಿರಿಯಾಣ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಕಿಷ್ಣಾಪೂರ ತಾಂಡಾವು ಅಂದಾಜು 1200 ಜನಸಂಖ್ಯೆವುಳ್ಳ ತಾಂಡಾವಾಗಿದ್ದು ನಿವಾಸಿಗಳು ಸುದ್ದಿಗಾರರೊಂದಿಗೆ ಮಾತನಾಡಿದ ಅವರು,ತಾಂಡಾದ ಸುತ್ತಮುತ್ತಲಿನ ಪ್ರದೇಶವು ಗಣಿಗಾರಿಕೆಯ ಪ್ರದೇಶವಾಗಿದ್ದು ಕೆಲವೊಂದು ಗಣಿಗಾರಿಕೆಯಲ್ಲಿ ಬ್ಲಾಸ್ಟಿಂಗ್ ಮಾಡುತ್ತಿರುವುದರಿಂದ ಮನೆಗಳ ಗೋಡೆಗಳಲ್ಲಿ ಬಿರುಕು ಬಿಟ್ಟು ಮನೆಗಳು ಕುಸಿದು ಬಿಳುವ ಸ್ಥಿತಿ ನಿರ್ಮಾಣವಾಗಿದೆ. ತಾಂಡಾ ಸುತ್ತಮುತ್ತಲಿನ ಪ್ರದೇಶ ಗಣಿಗಾರಿಕೆ ನಡೆಸುತ್ತಿರುವುದರಿಂದ ಸಂಪೂರ್ಣ ತಾಂಡಾವು ಧೂಳಿನಿಂದ ಕೂಡಿದೆ ನಿವಾಸಿಗಳಿಗೆ ರೋಗರುಜಿನಗಳು ಬರುತ್ತಿವೆ ಆರೋಗ್ಯ ಇಲಾಖೆಯವರು ವಾರಕ್ಕೊಮ್ಮೆ ತಾಂಡಾಕ್ಕೆ ಆಗಮಿಸಿ ಉಚಿತ ಆರೋಗ್ಯ ತಪಾಸಣೆ ನಡೆಸಬೇಕು,ತಾಂಡಾದ ಅಕ್ಕಪಕ್ಕ ಪ್ರದೇಶದಲ್ಲಿ ಗಣಿಗಾರಿಕೆ ನಡೆಸಿ ತೆಗ್ಗುಗುಂಡಿಗಳು ಹಾಕಿ ಹಾಗೆಯೇ ಬಿಟ್ಟಿದ್ದು ಇದರಿಂದ ನಮ್ಮ ಜಾನುವಾರುಗಳಿಗೆ ಮಕ್ಕಳಿಗೆ ಅಪಾಯವಿದೆ,ತೆಗ್ಗುಗುಂಡಿಗಳು ಭರ್ತಿ ಗೊಳಿಸಬೇಕು,ಮತ್ತು ಅತಿಎತ್ತರ ಮಟ್ಟಿಗೆ ಕಲ್ಲಿನ ರಾಶಿಯೇ ಹಾಕಿರುವುದರಿಂದ ತಾಂಡಾ ನಿವಾಸಿಗಳಿಗೆ ಶುದ್ಧ ಗಾಳಿ,ಬಿಸಿಲು ಮೊಬೈಲ್ ನೆಟ್ವರ್ಕ್ ಸಿಗದೆ ಜನರು ಪರದಾಟ ನಡೆಸುತ್ತಿದ್ದಾರೆ.

ತಾಂಡಾ ಸುತ್ತಮುತ್ತಲಿನ ಪ್ರದೇಶದಲ್ಲಿ ಪಟ್ಟಾ ಜಮೀನು ಜೋತೆ ಕೆಲವೊಂದು ಜಮೀನು ಗೌಟಾನಾ ಕೂಡವಿದೆ ಕಂದಾಯ ಇಲಾಖೆಯ ಅಧಿಕಾರಿಗಳು ಆಗಮಿಸಿ ತಾಂಡಾದ ಜಮೀನು ಗಣಿಗಾರಿಕೆ ಜಮೀನು ಅದನ್ನು ಸೂಕ್ಷ್ಮವಾಗಿ ಸರ್ವೆ ನಡೆಸಿ ಹಂಚಿಕೆ ಮಾಡಿಕೊಟ್ಟು ತಾಂಡಾ ನಿವಾಸಿಗಳಿಗೆ ಸುಗಮ ಜೀವನ ನಡೆಸಲು ಅನುಕೂಲ ಕಲ್ಪಿಸಿಕೊಡಬೇಕು ಮತ್ತು ತಾಂಡಾದಲ್ಲಿ ಅನೇಕ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಗಬೇಕು ಎಂದು ಗ್ರಾಪಂ ಸದಸ್ಯ ಶಿವಾಜಿ ರಾಠೋಡ್ ಹೇಳಿದರು.

ಈ ಸಂದರ್ಭದಲ್ಲಿ ಕಾರಬಾರಿ ಹೀರೂ ಚವ್ಹಾಣ, ಗೋರ್ ಸೇನಾ ಅಧ್ಯಕ್ಷ ಸಿಕಿಂದರ್ ರಾಠೋಡ್,ಜಿತೇಂದ್ರ ರಾಠೋಡ್,ಧರ್ಮನಾಯಕ,ಶಾರುಬಾಯಿ ಪವ್ಹಾರ,ಲಕ್ಷ್ಮಿಭಾಯಿ,ಮೀರಿಬಾಯಿ,ಲಾಲಿಬಾಯಿ,ಅರುಣಾಬಾಯಿ,ಹೇಮ್ಲಿಬಾಯಿ,ಸಮಿತಾ ಬಾಯಿ,ಹುಮ್ಲಾನಾಯಕ ರಾಠೋಡ್ ಪೂಜಾರಿ,ಆಕಾಶ ರಾಠೋಡ್,ಅರವೀಂದ,ಅನೇಕರಿದ್ದರು.

ಧೂಳಿನಿಂದ ನರಕಯಾತನೆ

ಗಣಿಗಾರಿಕೆಯಲ್ಲಿ ರಾತ್ರಿ ವೇಳೆಯಲ್ಲಿ ಬ್ಲಾಸ್ಟಿಂಗ್ ಮಾಡುತ್ತಿರುವುದರಿಂದ ಮಕ್ಕಳು, ವೃದ್ಧರು, ಗರ್ಭಿಣಿಯರು ಭಯಭೀತರಾಗುತ್ತಿದ್ದಾರೆ, ಸಂಬಂಧಪಟ್ಟ ಅಧಿಕಾರಿಗಳು ಆಗಮಿಸಿ ಪರಿಶೀಲಿಸಿ ಬ್ಲಾಸ್ಟಿಂಗ್ ಮಾಡುವುದು ತಡೆಗಟ್ಟಬೇಕು,ತಾಂಡಾಕ್ಕೆ ಹೋಗಲು ಬರಲು ಸರ್ಕಾರದ ಅನುದಾನದಲ್ಲಿ ನಿರ್ಮಿಸಿದ ಸಿಸಿರಸ್ತೆಯು ಗಣಿಗಾರಿಕೆಗೆ ಉಪಯೋಗ ಮಾಡುತ್ತಿರುವುದರಿಂದ ಮಕ್ಕಳಿಗೆ ವೃದ್ಧರಿಗೆ ರಸ್ತೆ ಸಮಸ್ಯೆ ಆಗುತ್ತಿದ್ದು ಧೂಳಿನಿಂದ ಜನರು ನರಕಯಾತನೆ ಅನುಭವಿಸುತ್ತಿದ್ದಾರೆ.

ಬಯಲು ಶೌಚಾಲಯಕ್ಕೆ ಕಷ್ಟ

ಮತ್ತೊಂದೆಡೆ ಗಣಿಗಾರಿಕೆ ನಡೆಸಲು ತಾಂಡಾದ ಮನೆಗಳ ಗೋಡೆಯ ಪಕ್ಕದಲ್ಲಿಯೇ ಕಬ್ಬಿಣದ ಕಂಬಗಳು ಹಾಕಿ ಗಣಿಗಾರಿಕೆಗೆ ಬೇಲಿ ಹಾಕುತ್ತಿದ್ದು ಇದ ರಿಂದ ತಾಂಡಾದ ಬಡ ಕುಟುಂಬದ ಮಹಿಳೆಯರು ಬಯಲು ಶೌಚಾಲಯಕ್ಕೆ ಹೋಗಲು ಬಹಳಷ್ಟು ಕಷ್ಟಪಡಬೇಕಾಗುತ್ತದೆ ಅದಕ್ಕಾಗಿ ಸಂಬಂಧಪಟ್ಟ ಅಧಿಕಾರಿಗಳು ಏಚ್ಚೇತುಕೊಂಡು ಸಾರ್ವಜನಿಕ ಶೌಚಾಲಯ ನಿರ್ಮಾಣ ಮಾಡಿ ಕೊಡಬೇಕು.

ಜಿಲ್ಲೆಯನ್ನು ಗುಡಿಸಲು ಮುಕ್ತ ಮಾಡುವುದೇ ನಮ್ಮ ಗುರಿ: ಸಂಸದ ಸಾಗರ ಖಂಡ್ರೆ

• ಉದಯವಾಹಿನಿ ಬೀದರ್


ಉದಯವಾಹಿನಿ ಚಿತ್ರ

ಜಿಲ್ಲೆಯನ್ನು ಗುಡಿಸಲು ಮುಕ್ತ ಮಾಡುವುದು ನಮ್ಮ ಗುರಿ ಹಿನ್ನಲೆಯಲ್ಲಿ ಮುತುವರ್ಜಿವಹಿಸಿ ಈ ಬಾರಿ 50 ಸಾವಿರ ಮನೆ ಮಂಜೂರು ಮಾಡಿಸಿದ್ದೇನೆ. ಇನ್ನು ಹೆಚ್ಚಿನ ಮನೆಗಳನ್ನು ಒದಗಿಸುವಂತೆ ಕೇಂದ್ರ ವಸತಿ ಸಚಿವ ಶಿವರಾಜ್ ಸಿಂಗ್ ಅವರಿಗೆ ಪತ್ರ ಬರೆದಿದ್ದೇನೆ. ಈ ಹಿಂದೆ ಭಾಲ್ಕಿಯನ್ನು ಗುಡಿಸಲು ಮುಕ್ತ ಮಾಡಲು ತಂದೆಯವರಾದ ಈಶ್ವರ್ ಖಂಡ್ರೆ ಅವರು 25 ಸಾವಿರ ಮನೆ ಮಂಜೂರು ಮಾಡಿಸಿದ್ದರು ಎಂದು ಬೀದರ ಲೋಕಸಭಾ ಸಂಸದರಾದ ಸಾಗರ ಈಶ್ವರ ಖಂಡ್ರೆ ಹೇಳಿದರು. ಅವರು ಭಾಲ್ಕಿ ತಾಲ್ಲೂಕಿನ ಲಂಜವಾಡ ಗ್ರಾಮದಲ್ಲಿ ರಾಜೀವ ಗಾಂಧಿ ವಸತಿ ನಿಗಮ (ನಿ) ಬೆಂಗಳೂರು ಜಿಲ್ಲಾಡಳಿತ ಮತ್ತ ಜಿಲ್ಲಾ ಪಂಚಾಯತ ಬೀದರ ''ಆವಾಸ್ ಪ್ಲಸ್ 2024 ಆ್ಯಪ್ ಮೂಲಕ ವಸತಿ, ನಿವೇಶನ ರಹಿತರ ಸಮೀಕ್ಷೆಗೆ ಚಾಲನೆ'' ಹಾಗೂ ವಸತಿ ''ನಿವೇಶನ ಸೌಲಭ್ಯ ಪಡೆಯುವ ಸುವರ್ಣಾವಕಾಶ'' ಮತ್ತು ಡಾ. ಬಿ.ಆರ್. ಅಂಬೇಡ್ಕರ ಬಸವ ವಸತಿ ಯೋಜನೆ ಫಲಾನುಭವಿಗಳಿಗೆ ತಿಳುವಳಿ ಪತ್ರ ವಿತರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಡಾ. ಬಿ.ಆರ್. ಅಂಬೇಡ್ಕರ ಬಸವ ವಸತಿ ಯೋಜನೆಯಡಿ ಆಯ್ಕೆಯಾದ 91 ಫಲಾನುಭವಿಗಳಿಗೆ ತಿಳುವಳಿಕೆ ಪತ್ರ ವಿತರಣೆ ಮಾಡಲಾಯಿತು. ಹಾಗೂ ಆವಾಸ್ ಪ್ಲಸ್ ಆ್ಯಪ್ 2024 ಪೊಸ್ಟರ್ ಬಿಡುಗಡೆಗೊಳಿಸಲಾಯಿತು.

ನಿವೇಶನ ಸೌಲಭ್ಯ ಪಡೆಯುವ ಸುವರ್ಣಾವಕಾಶ

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ರಾಧಿಕಾ ಶುಕ್ರಚಾರ್ಯ, ಗ್ಯಾರೆಂಟಿ ಯೋಜನೆ ಅನುಷ್ಠಾನ ಸಮಿತಿ ಭಾಲ್ಕಿ ತಾಲೂಕಾ ಅಧ್ಯಕ್ಷ ಹಣಮಂತ ಚೌವ್ಹಾಣ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಜಗನ್ನಾಥ ಮೂರ್ತಿ, ಭಾಲ್ಕಿ ತಾಲ್ಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ್, ಭಾಲ್ಕಿ ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೆರೆ, ಭಾಲ್ಕಿ ಕೃಷಿ ಇಲಾಖೆಥಿಯ ಸಹಾಯಕ ನಿರ್ದೇಶಕ ಪಿ. ಎಂ ಮಲ್ಲಿಕಾರ್ಜುನ, ಭಾಲ್ಕಿ ಪಶುಪಾಲನೆ ಇಲಾಖೆ ಸಹಾಯಕ ನಿರ್ದೇಶಕ ಡಾ. ಕಾಮರಾಯ ಜಗ್ಗಿನವರ, ಕಾರ್ಮಿಕ ನಿರೀಕ್ಷಕ ಮಂಜುನಾಥ ಹದಗುಂಡಿ, ಮೈನಾರಟಿ ಅಧಿಕಾರಿ, ತೋಟಗಾರಿಕೆ ಎಸ್.ಡಿ.ಎಚ್ ಮಾರುತಿ ಲಂಜವಾಡ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ವಿಶ್ವದೀಪ, ಲಂಜವಾಡ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯಗುರುಗಳಾದ ಸೂರ್ಯಕಾಂತ್ ಅಹ್ಮದಾಬಾದೆ, ರಾಜಕುಮಾರ, ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

ಯಾವುದೇ ಮಧ್ಯವರ್ತಿಗಳ ಹಾವಳಿ ಇಲ್ಲದೆ ವಸತಿ ರಹಿತರಿಗೆ ವಸತಿ ಒದಗಿಸುವ ಉದ್ದೇಶದಿಂದ ಪ್ರಧಾನಮಂತ್ರಿ ಅವಾಸ್ ವಸತಿ ಯೋಜನೆ ಗ್ರಾಮೀಣ ಅಡಿಯಲ್ಲಿ ಆವಾಸ್ ಪ್ಲಸ್ 2024 ಯ್ಯಾಪ್ ಜಾರಿಗೆ ತರಲಾಗಿದೆ. ಮುಂದಿನ ದಿನಗಳಲ್ಲಿ ಈ ಯ್ಯಾಪ್ ಮೂಲಕ ಸಮೀಕ್ಷೆ ನಡೆಸಿ ಫಲಾನುಭವಿಗಳ ಆಯ್ಕೆ ನಡೆಯಲಿದೆ. ಯಾರಿಗೆ ಮನೆ ಇಲ್ಲವೋ ಅವರು ಈ ಯ್ಯಾಪ್‌ನಲ್ಲಿ ತಮ್ಮ ಮಾಹಿತಿ ಒದಗಿಸಬೇಕು. ಈಗಾಗಲೇ ಲಂಜವಾಡ ಗ್ರಾಮ ಪಂಚಾಯತಿಯ ಸೋಂಪುರ್ ಗ್ರಾಮದ ಫಲಾನುಭವಿಯಾದ ಗಾಯಬಾಯಿ ಆನಂದಗೀರಿಯವರ ಮಾಹಿತಿಯನ್ನು ಆವಾಸ್ ಪ್ಲಸ್ ಯ್ಯಾಪ್‌ನಲ್ಲಿ ಸೇರಿಸಲಾಗಿದೆ ಇವರು ಈ ಆವಾಸ್ ಪ್ಲಸ್ ಯ್ಯಾಪ್‌ನಲ್ಲಿ ಸೇರಿಸಲಾದ ಜಿಲ್ಲೆಯ ಮೊದಲ ಫಲಾನುಭವಿಯಾಗಿದ್ದಾರೆ. ಮುಂದಿನ ದಿನಗಳಲ್ಲಿ ಲಂಜವಾಡ ಗ್ರಾಮದ ಅಭಿವೃದ್ಧಿಗೆ ಸಂಪೂರ್ಣ ಸಹಕಾರ ನೀಡಲಾಗುವುದು -ಸಾಗರ ಈಶ್ವರ ಖಂಡ್ರೆ, ಬೀದರ ಲೋಕಸಭಾ ಸಂಸದರಾದ

**ನೆಚ್ಚಿನ ಸಂಸದರಾದ ಸಾಗರ ಖಂಡ್ರೆ ಅವರು ಹೆಚ್ಚು ಮುತ್ತುವರ್ಜಿ ವಹಿಸಿ ಈ ಬಾರಿ 40 ಸಾವಿರಕ್ಕೂ ಹೆಚ್ಚಿನ ಮನೆಗಳನ್ನು ಮಂಜುರು ಮಾಡಿಸಿದ್ದಾರೆ. ಅದೇ ರೀತಿ ಬಸವ ವಸತಿ ಯೋಜನೆಯಡಿ 758 ಹಾಗೂ ಡಾ.ಬಿ. ಆರ್. ಅಂಬೇಡ್ಕರ್ ವಸತಿ ಯೋಜನೆ ಅಡಿಯಲ್ಲಿ 1000 ಸಾವಿರ ಮನೆಗಳು ಮಂಜೂರು ಆಗಿವೆ. ಈ ಹಿಂದೆ ಫಲಾನುಭವಿಗಳ ಆ

ದಿನ ಭವಿಷ್ಯ

ರಾಹುಕಾಲ	ಮಧ್ಯಾಹ್ನ	01:30 ರಿಂದ 03:00
ಗುಳಿಕ ಕಾಲ	ಬೆಳಿಗ್ಗೆ	09:00 ರಿಂದ 10:30
ಯಮಗಂಡ ಕಾಲ	ಬೆಳಿಗ್ಗೆ	06:00 ರಿಂದ 07:30

ಮೇಷ ತುಂಬಾ ಚಿಂತೆ ಮತ್ತು ಒತ್ತಡ ರಕ್ತದೊತ್ತಡವನ್ನು ಉಂಟುಮಾಡ ಬಹುದು. ಬಾಕಿಯಿರುವ ಸಾಲಗಳನ್ನು ಸಂಗ್ರಹಿಸಬಹುದು ಅಥವಾ ಹೊಸ ಯೋಜನೆಗಳಿಗೆ ಕೆಲಸ ಮಾಡಲು ಹಣ ಕೇಳಬಹುದು.

ವೃಷಭ ಹೆದರಿಕೆ ನಿಮ್ಮ ಸಂತೋಷವನ್ನು ಹಾಳುಗೆಡವಬಹುದು. ನೀವು ಇದು ನಮ್ಮ ಆಲೋಚನೆಗಳು ಮತ್ತು ಕಲ್ಪನೆಯ ಪ್ರಭಾವವೆಂದು ಅರ್ಥಮಾಡಿಕೊಳ್ಳಬೇಕು. ಇದು ಸ್ವಾಭಾವಿಕತೆಯನ್ನು ಕೊಲ್ಲುತ್ತದೆ.

ಮಿಥುನ ನಿಮ್ಮ ಮೇಲೆ ಬಹಳಷ್ಟು ಅವಲಂಬಿಸಿರುತ್ತದೆ ಮತ್ತು ನಿರ್ಣಯಗಳನ್ನು ತೆಗೆದುಕೊಳ್ಳಲು ಮಾನಸಿಕ ಸ್ಪಷ್ಟತೆ ಅಗತ್ಯವಾಗಿರುತ್ತದೆ. ಕೆಲವು ಪ್ರಮುಖ ಯೋಜನೆಗಳನ್ನು ಕಾರ್ಯಗತಗೊಳಿಸಲಾಗುತ್ತದೆ.

ಕರ್ಕಾಟಕ ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ. ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಥ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ.

ಸಿಂಹ ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ.

ಕನ್ಯಾ ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ.

ತುಲಾ ಸಂತೃಪ್ತಿಯ ಜೀವನಕ್ಕಾಗಿ ನಿಮ್ಮ ಮಾನಸಿಕ ದೃಢತೆಯನ್ನು ಸುಧಾರಿಸಿ. ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ. ಧಾರ್ಮಿಕ ಸ್ಥಳಕ್ಕೆ ಅಥವಾ ಸಂಬಂಧಿಗಳ ಭೇಟಿ ಸಾಧ್ಯವಿದೆ.

ವೃಶ್ಚಿಕ ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ಕೆಲಸದ ನಡುವೆ ಸಾಧ್ಯವಾದಷ್ಟೂ ವಿಶ್ರಾಂತಿ ಪಡೆಯಲು ಪ್ರಯತ್ನಿಸಿ. ಜೀವನದ ವಾಹನವನ್ನು ಚೆನ್ನಾಗಿ ಚಲಾಯಿಸಲು ಬಯಸುತ್ತಿದ್ದರೆ, ಹಣದ ಬಗ್ಗೆ ವಿಶೇಷ ಗಮನ ಹರಿಸಬೇಕು.

ಧನಸ್ಸು ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ ಹಾಗೂ ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ಧಿ ಜೀವನದ ಹೆಚ್ಚಾಗಿಲಾಗಿದೆ.

ಮಕರ ಆರೋಗ್ಯದ ಆರೈಕೆ ಮಾಡಿಕೊಳ್ಳಬೇಕು. ಇಂದು ನೀವು ನಿಮ್ಮ ಮನೆಯ ಸದಸ್ಯರನ್ನು ಎಲ್ಲಿಗಾದರೂ ಸುತ್ತಾಡಲು ಕರೆದುಕೊಂಡು ಹೋಗ ಬಹುದು ಮತ್ತು ನಿಮ್ಮ ಸಾಕಷ್ಟು ಹಣವು ಖರ್ಚಾಗಬಹುದು.

ಕುಂಭ ನೀವು ಕೇವಲ ನಿಮ್ಮ ಸುತ್ತ ಏನು ನಡೆಯುತ್ತಿದೆ ಎಂಬುದನ್ನು ತಿಳಿದಿದ್ದರೆ ಸಾಕು. ನಿಮ್ಮ ನಡೆಯಲ್ಲಿ ಪ್ರಾಮಾಣಿಕವಾಗಿರಿ – ನಿಮ್ಮ ಬದ್ಧತೆಯನ್ನು ಹಾಗೂ ನಿಮ್ಮ ಕೌಶಲ್ಯಗಳನ್ನು ಗುರುತಿಸಲಾಗುತ್ತದೆ.

ಮೀನ ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬ ಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು.

ಕೆಡಿಪಿ ಸಭೆಯಲ್ಲಿ ಅಧಿಕಾರಿಗಳ ವಾಕ್ಸಮರ: ಆರೋಪ ಪ್ರತ್ಯಾರೋಪಕ್ಕೆ ದಂಗಾದ ಸಚಿವರು

• ಉದಯವಾಹಿನಿ ಮಂಗಳೂರು

ಸಚಿವ ದಿನೇಶ್ ಗುಂಡೂರಾವ್ ನೇತೃತ್ವದಲ್ಲಿ ನಡೆದ ಕೆಡಿಪಿ ಸಭೆಯಲ್ಲಿ ಅಧಿಕಾರಿಗಳ ವಾಕ್ಸಮರ ಕಂಡು ಸಚಿವರೇ ದಂಗಾಗಿ ಹೋಗಿದ್ದಾರೆ.

ಅಕ್ರಮ ಮರಳುಗಾರಿಕೆ ವಿಚಾರವಾಗಿ ಕೆಡಿಪಿ ಸಭೆ ನಡೆದಿದ್ದು ಸಭೆಯಲ್ಲಿ ಅಕ್ರಮ ಮರಳುಗಾರಿಕೆಯ ಹೊಣೆಯನ್ನು ಒಬ್ಬರ ಮೇಲೊಬ್ಬರು ಹಾಕಿಕೊಂಡು ಅಧಿಕಾರಿಗಳು ಆರೋಪ ಪ್ರತ್ಯಾರೋಪ ಮಾಡಿದ್ದಾರೆ. ಸಭೆಯಲ್ಲಿ ಗಣಿ ಮತ್ತು ಭೂ ವಿಜ್ಞಾನ ಅಧಿಕಾರಿ ಕೃಷ್ಣವೇಣಿಯನ್ನು ಸಚಿವರು ತರಾಟೆಗೆ ತೆಗೆ ದುಕೊಂಡಾಗ ನಮಗೆ ಪೊಲೀಸ್ ಸಪೋರ್ಟ್ ಇಲ್ಲ, ಕಾಲ್ ಮಾಡಿದ್ರೆ ರಿಸೀವ್ ಮಾಡಲ್ಲ ಅಂದ ಕೃಷ್ಣವೇಣಿ ಮಂಗಳೂರು ಪೊಲೀಸ್ ಆಯುಕ್ತ ಅನುಪಮ್ ಅಗರ್ವಾಲ್ ಮೇಲೆ ಆರೋಪ ಮಾಡಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿದ ಪೊಲೀಸ್ ಆಯುಕ್ತರು ನನ್ನ ಮೊಬೈಲ್ ನೋಡಿ, ಒಂದೇ ಕಾಲ್ ಬಂದಿಲ್ಲ, ಪರ್ಸನಲ್ ನಂಬರ್ ಕೊಟ್ಟಿದ್ದೇನೆ ಎಂದು ವಾದಿಸಿದರು.

ಈ ವೇಳೆ ಇಬ್ಬರ ನಡುವೆ ವಾಕ್ಸಮರ ಏರ್ಪಟ್ಟಿತ್ತು. ಜಿಲ್ಲಾಧಿಕಾರಿ ಮುಲ್ಲೈ ಮುಹಿಲನ್ ವಿರುದ್ಧವೂ ಕೃಷ್ಣವೇಣಿ ಆರೋಪಿಸಿದ್ದಾರೆ. ಕೃಷರ್, ಬಿಲ್ಡರ್, ಲಾರಿ ಮಾಲಕರ ಸಭೆ ಕರೆಯೋಣ ಅಂದ್ರೂ ಡಿಸಿ ಕೇಳಿಲ್ಲ ಕಾರಣ ಇಲ್ಲದೇ ಸಭೆಗಳನ್ನು ಡಿಸಿ ಸಭೆ ಮುಂದೂಡಿದ್ದಾರೆ ಎಂದು ಡಿಸಿ ವಿರುದ್ಧ ಕೃಷ್ಣವೇಣಿ ಕಿಡಿಕಾರಿದ್ದು, ಚೀಪ್ ಆಗಿ ಮಾತನಾಡಬೇಡಿ, ಈ ಸಭೆಯಲ್ಲಿ ಚರ್ಚೆ ಮಾಡಲು ಇಷ್ಟ ಇಲ್ಲ ಎಂದು ಡಿಸಿ ಗರಂ ಆದ ಘಟನೆಯೂ ನಡೆಯಿತು.

ಬಲವಂತದ ಸಾಲ ವಸೂಲಿಗೆ 5 ಲಕ್ಷ ದಂಡ,10 ವರ್ಷ ಜೈಲು: ಡಿಸಿ

• ಮೈಕ್ರೋ ಫೈನಾನ್ಸ್ ಸಂಸ್ಥೆಗಳು, ಸಾಲ ನೀಡಿಕೆ ಏಜೆನ್ಸಿ ಹಾಗೂ ಲೇವಾದೇವಿ ಸಂಸ್ಥೆಗಳ ಪ್ರತಿನಿಧಿಗಳ ಸಭೆ

• ಉದಯವಾಹಿನಿ ಕಲಬುರಗಿ

ಮೈಕ್ರೋ ಫೈನಾನ್ಸ್ ಸಿಬ್ಬಂದಿಗಳು ಸಾಲ ವಸೂಲಾತಿಗೆ ಬಡ ಜನರಿಗೆ ನೀಡುತ್ತಿರುವ ಕಿರುಕುಳವನ್ನು ತಪ್ಪಿಸಲೆಂದು ರಾಜ್ಯ ಸರ್ಕಾರ ಕರ್ನಾಟಕ ಕಿರು ಸಾಲ ಮತ್ತು ಸಣ್ಣ ಸಾಲ (ಬಲವಂತದ ಕ್ರಮಗಳ

ಉದಯವಾಹಿನಿ ಚಿತ್ರ

ಪ್ರತಿಬಂಧಕ) ಅಧ್ಯಾದೇಶ-2025 ಕಳೆದ ಫೆಬ್ರವರಿ 12 ರಿಂದ ಜಾರಿಗೆ ಬಂದಿದ್ದು, ಇದನ್ನು ಉಲ್ಲಂಘಿಸಿ ಸಾರ್ವಜನಿಕರಿಗೆ ಕಿರುಕುಳ ನೀಡಿ ಸಾಲ ವಸೂಲಾತಿ ಮಾಡಿದಲ್ಲಿ 5 ಲಕ್ಷ ರೂ. ದಂಡ ಹಾಗೂ 10 ವರ್ಷ ಕಾರಾಗೃಹ ಶಿಕ್ಷೆಗೆ ಕಾರಣವಾಗಬೇಕಾಗುತ್ತದೆ ಎಂದು ಡಿ.ಸಿ. ಬಿ.ಫೌಜಿಯಾ ತರನ್ನುಮ್ ಅವರು ಮೈಕ್ರೋ ಫೈನಾನ್ಸ್ ಮುಖ್ಯಸ್ಥರಿಗೆ ಎಚ್ಚರಿಕೆ ನೀಡಿದರು.

ಮೈಕ್ರೋ ಫೈನಾನ್ಸ್ ಸಂಸ್ಥೆಗಳ ನಿಯಂತ್ರಣ ಕುರಿತಂತೆ ಹೊರಡಿಸಲಾಗಿರುವ ಸುಗ್ರೀವಾಜ್ಞೆಯ ಅನುಷ್ಠಾನ ಕುರಿತಂತೆ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೈಕ್ರೋ ಫೈನಾನ್ಸ್ ಸಂಸ್ಥೆಗಳು, ಸಾಲ ನೀಡಿಕೆ ಏಜೆನ್ಸಿ ಹಾಗೂ ಲೇವಾದೇವಿ ಸಂಸ್ಥೆಗಳ ಪ್ರತಿನಿಧಿಗಳ ಸಭೆ ನಡೆಸಿದ ಅವರು, ಯಾವುದೇ ಕಾರಣಕ್ಕೂ ಅಧ್ಯಾದೇಶ ಉಲ್ಲಂಘಿಸದೆ ಅದನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಬಲವಂತದ ಸಾಲ ವಸೂಲಾತಿ ಮಾಡಬಾರದು ಎಂದರು. ಸಾರ್ವಜನಿಕರಿಗೆ ಕಿರುಕುಳ ತಪ್ಪಿಸಲು, ಲೇವಾದೇವಿದಾರರು ಕಾನೂನು ಬದ್ಧವಾಗಿ ವ್ಯವಹಾರ ನಡೆಸಲು ಈ ಸುಗ್ರಿವಾಜ್ಞೆ ಜಾರಿಗೆ ತಂದಿದ್ದು, ಈ ಬಗ್ಗೆ ಗ್ರಾಮ, ಹೋಬಳಿ, ತಾಲೂಕು ಮಟ್ಟದಲ್ಲಿ ವ್ಯಾಪಕವಾಗಿ ಅರಿವು ಮೂಡಿಸಬೇಕು. ವಿಶೇಷವಾಗಿ ಸಾಲ ವಸೂಲಿಗಾರರ ನಡವಳಿಕೆ ಮೇಲೆ ನಿಯಂತ್ರಣ ಸಾಧಿಸಬೇಕು ಎಂದ ಅವರು, ನಿಮ್ಮ ವ್ಯವಹಾರಗಳನ್ನು ಅಡ್ಡಿಪಡಿಸವುದು ನಮ್ಮ ಉದ್ದೇಶವಲ್ಲ, ಅದ ಕಾನುನು ಬದ್ಧವಾಗಿರಬೇಕು ಅಷ್ಟೆ ಎಂದರು.

ಫೈನಾನ್ಸ್ ಮುಖ್ಯಸ್ಥರಿಗೆ ಎಚ್ಚರಿಕೆ

ಸಹಕಾರ ಇಲಾಖೆಯ ಉಪನಿಬಂಧಕ ಈಶ್ವರ ಪಾಟೀಲ ಮತ್ತು ಜಿಲ್ಲಾ ಲೀಡ್ ಬ್ಯಾಂಕ್ ಮ್ಯಾನೇಜರ್ ಸಂತೋಷ ಪಾಟೀಲ ಅವರು ಕರ್ನಾಟಕ ಕಿರು ಸಾಲ ಮತ್ತು ಸಣ್ಣ ಸಾಲ (ಬಲವಂತದ ಕ್ರಮಗಳ ಪ್ರತಿಬಂಧಕ) ಅಧ್ಯಾದೇಶ-2025 ಕುರಿತು ವಿವರ ನೀಡಿದ ಅವರು, ನೊಂದ ವ್ಯಕ್ತಿ ಹತ್ತಿರದ ಪೊಲೀಸ್ ಠಾಣೆಗೆ ದೂರು ನೀಡಲು ಅವಕಾಶವಿದೆ. ಯಾವುದೇ ಅಡಮಾನವಿಲ್ಲದ ಸಾಲ ನೀಡಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಸೇರಿದಂತೆ ಜಿಲ್ಲೆಯ ಮೈಕ್ರೋ ಫೈನಾನ್ಸ್ ಮುಖ್ಯಸ್ಥರು ಭಾಗವಹಿಸಿದ್ದರು.

ಉದಯವಾಹಿನಿ ಚಿತ್ರ

ತೊಂದರೆ ಕೊಟ್ಟರೆ ಮುಲಾಜಿಲ್ಲದೆ ಕ್ರಮ

ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ ಮಾತನಾಡಿ, ನೂತನ ಅಧ್ಯಾಧ್ಯೇಶ ಉಲ್ಲಂಘಿಸಿ ಸಾಲ ವಸೂಲಾತಿಗೆ ಹೋದ ವ್ಯಕ್ತಿ ಸೇರಿದಂತೆ ಸಂಸ್ಥೆಯ ಎಲ್ಲರ ಮೇಲೆ ಮುಲಾಜಿಲ್ಲದೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದ ಅವರು, ಸಾಲಗಾರರಿಗೆ ಬಡ್ಡಿ ದರ, ಈಗಾಗಲೆ ಪಾವತಿಯಾಗಿರುವುದು, ಬಾಕಿ ಇರುವ ಬಗ್ಗೆ ಕನ್ನಡ ಭಾಷೆಯಲ್ಲಿ ಮಾಹಿತಿ ಇರುವ ಲೋನ್ ಕಾರ್ಡ್ ವಿತರಿಸಬೇಕೆಂದು ಸೂಚಿಸಿದರು.

ರಾತ್ರಿ ವಸೂಲಾತಿಗೆ ಹೋಗುವಂತಿಲ್ಲ

ಎಸ್.ಪಿ. ಅಡ್ಡೂರು ಶ್ರೀನಿವಾಸಲು ಮಾತನಾಡಿ, ಅಧ್ಯಾಧ್ಯೇಶದ ಪ್ರಕಾರ ಸಾಲ ವಸೂಲಿ ಮಾಡುವರು ಯಾವುದೇ ಕಾರಣಕ್ಕೂ ರಾತ್ರಿ ಹೊತ್ತಿನಲ್ಲಿ ಸಾರ್ವಜನಿಕರ ಮನೆಗಳಿಗೆ ಹೋಗುವಂತಿಲ್ಲ. ದಿನದ ಅವಧಿಯಲ್ಲಿ ಹೋಗಿ ವಸೂಲು ಮಾಡಬಹುದು. ಇನ್ನು ವಸೂಲಿ ಮಾಡುವರು ಉತ್ತಮ ನಡವಳಿಕೆ ಹೊಂದಿರಬೇಕು, ಸಮಾಜ ವಿರೋಧಿ ಚಟುವಟಿಕೆಯಲ್ಲಿ ತೊಡಗುವವರನ್ನು ಯಾವುದೇ ಕಾರಣಕ್ಕೂ ವಸೂಲಾತಿಗೆ ನೇಮಿಸಕೊಳ್ಳಬಾರದೆಂದು ಹಣಕಾಸು ಸಂಸ್ಥೆಗಳ ಮುಖ್ಯಸ್ಥರಿಗೆ ಸೂಚಿಸಿದ ಅವರು, ವಸೂಲಿ ಮಡಲು ಹೋಗುವಾಗ ಸಿಬ್ಬಂದಿಗಳು ಬಾಡಿ ಕ್ಯಾಮೆರಾ ಅಳವಡಿಸಿಕೊಂಡು ಹೋದಲ್ಲಿ ಅವರ ನಡವಳಿಕೆ ಪತ್ತೆ ಹಚ್ಚಬಹುದಾಗಿದೆ ಎಂದು ಸಲಹೆ ನೀಡಿದರು.

ಮಾರ್ಚ್ 12ರವರೆಗೆ ನೋಂದಣಿಗೆ ಅವಕಾಶ

ಅಧ್ಯಾಧ್ಯೇಶ ಜಾರಿಯಾದ ದಿನಾಂಕದಿಂದ 30 ದಿನದೊಳಗೆ ಮೈಕ್ರೋ ಫೈನಾನ್ಸ್ ಸಂಸ್ಥೆಗಳು, ಸಾಲ ನೀಡಿಕೆ ಏಜೆನ್ಸಿ ಹಾಗೂ ಲೇವಾದೇವಿ ಸಂಸ್ಥೆಗಳು ನೋಂದಣಿ ಮಾಡಬೇಕಿರುವುದರಿಂದ ಮಾರ್ಚ್ 12 ರೊಳಗಾಗಿ ಜಿಲ್ಲಾಧಿಕಾರಿಗಳ ಕಚೇರಿಗೆ ಸಾಲದ ಬಡ್ಡಿ ದರ, ವಸೂಲಾತಿ ವ್ಯವಸ್ಥೆ ಮತ್ತು ಸಾಲ ವಸೂಲಾತಿಗೆ ಅಧಿಕೃತಗೊಳಿಸಿದ ವ್ಯಕ್ತಿ ಸೇರಿದಂತೆ ಇನ್ನಿತರ ವಿವರ ನೀಡಿ ನೋಂದಣಿ ಮಾಡಿಸಿಕೊಳ್ಳಬೇಕೆಂದು ಸೂಚಿಸಿದ ಅವರು, ನೋಂದಣಿ ನಂತರ ಮಾಸಿಕ, ತ್ರೈಮಾಸಿಕ ವರದಿ ಸಹ ಸಲ್ಲಿಸಬೇಕಾಗುತ್ತದೆ ಎಂದರು.

ಕಾಂಗ್ರೇಸ್ ಮುಖಂಡನ ಕಾರು ಕಾಸರಗೋಡಿನಲ್ಲಿ ಅಪಘಾತ

• ಉದಯವಾಹಿನಿ ಸುಳ್ಯ

ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಟಿ.ಎಂ. ಶಹೀದ್ ತೆಕ್ಕಿಲ್ ಅವರ ಕಾರು ಕಾಸರಗೋಡಿನಲ್ಲಿ ಅಪಘಾತಕ್ಕೀಡಾಗಿದ್ದು ಕಾರಿನಲ್ಲಿದ್ದ ಶಹೀದ್ ಹಾಗೂ ಇತರರು ಅಪಾಯದಿಂದ ಪಾರಾಗಿದ್ದಾರೆ. ಕೆಪಿಸಿಸಿ ಅಧ್ಯಕ್ಷರಾದ ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಪೆರಿಯ ಕಲ್ಯೋಟ್‌ನಲ್ಲಿ ಕೃಪೆಲ್ ಮತ್ತು ಸಜಿತ್ಲಾಲ್ ಅವರ 6 ನೇ ಪುಣ್ಯ ಸ್ಮರಣೆ ಕಾರ್ಯಕ್ರಮಕ್ಕೆ ಆಗಮಿಸುತ್ತಿದ್ದ ವೇಳೆ ಅವರ ಕನ್ನಡ ಭಾಷಣವನ್ನು ಮಲಯಾಳಂ ಭಾಷೆಗೆ ಭಾಷಾಂತರಿಸಲು ಅವರ ವಾಹನದ ಬೆಂಗಾವಲು ವಾಹನದ ಜೊತೆಯಲ್ಲಿ ಪ್ರಯಾಣಿಸುವ ಸಂದರ್ಭದಲ್ಲಿ ಕಾಸರಗೋಡು ನಗರದ ಟ್ರಾಫಿಕ್ ಸಿಗ್ನಲ್‌ನಲ್ಲಿ ನಿಲ್ಲಿಸಿದ್ದ ಶಹೀದ್ ಅವರ ಕಾರಿಗೆ ಹಿಂಬದಿಯಿಂದ ಬಂದ ಇವರ ಸಂಬಂಧಿಕರ ಫೋರ್ಚೂನ್ ಕಾರು ಡಿಕ್ಕಿ ಹೊಡೆದಿದೆ.


ಉದಯವಾಹಿನಿ ಚಿತ್ರ

ಎರಡು ವಾಹನದಲ್ಲಿದ್ದ ಪ್ರಯಾಣಿಕರಿಗೆ ಯಾವುದೇ ಅಪಾಯವಾಗದೆ ಪಾರಾಗಿದ್ದಾರೆ. ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಹಾಗು ತೆಕ್ಕಿಲ್ ಪ್ರತಿಷ್ಠಾನದ ಸ್ಥಾಪಕಧ್ಯಕ್ಷರಾದ ಟಿ ಎಂ ಶಾಹಿದ್ ತೆಕ್ಕಿಲ್, ಕಾಂಗ್ರೇಸ್ ಮುಖಂಡರಾದ ಇಕ್ಬಾಲ್ ಎಲಿಮಲೆ ಮತ್ತು ಸುಳ್ಯ ನಗರ ಪಂಚಾಯತ್ ಸದಸ್ಯ ಸಿದ್ದಿಕ್ ಕೊಕೊ ಅವರು ಸಂಚರಿಸುತ್ತಿದ್ದ ಇನ್ನೋವ ಐಕ್ರಾಸ್ ಹಾಗೂ ಇನ್ನೊಂದು ಕಾರಿನಲ್ಲಿದ್ದವರು ಪಾರಾಗಿದ್ದಾರೆ. ಅಪಘಾತದ ರಭಸಕ್ಕೆ ವಾಹನಗಳಿಗೆ ಹಾನಿಯಾಗಿದೆ.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಪೂರ್ವ ಭಾವಿ ಸಭೆ

• ಉದಯವಾಹಿನಿ ಹುಣಸಗಿ

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರಾದ ಸಿ.ಎಸ್ ಷಡಕ್ಷರಿ ರವರ ಅಧ್ಯಕ್ಷತೆಯಲ್ಲಿ ಬೆಂಗಳೂರಿನಲ್ಲಿ ನಡೆಯುವ ಸಮಾವೇಶ ಹಾಗೂ ಕಾರ್ಯಗಾರಕ್ಕೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಹುಣಸಗಿ ತಾಲ್ಲೂಕು ಪದಾಧಿಕಾರಿಗಳು ಹಾಗೂ ನಿರ್ದೇಶಕರು ಭಾಗವಹಿಸಬೇಕು ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಹುಣಸಗಿ ತಾಲ್ಲೂಕು ಅಧ್ಯಕ್ಷ ಅಂಬ್ರೇಶ ಮಾಲಗತ್ತಿ ಹೇಳಿದರು. ಪಟ್ಟಣದ ಹಳೆಯ ತಹಶೀಲ್ದಾರ ಕಾರ್ಯಾಲಯದ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಂಡು ಮಾತನಾಡಿದ ಅವರು, ಕಾರ್ಯಕ್ರಮದ ಉದ್ಘಾಟಕರಾಗಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಹಾಗೂ ಮುಖ್ಯ ಅತಿಥಿಗಳಾಗಿ ಡಿ.ಕೆ.ಶಿವಕುಮಾರ ಉಪ ಮುಖ್ಯಮಂತ್ರಿಗಳು ಭಾಗವಹಿಸಲ್ಲಿದ್ದಾರೆ. ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಸುಮಾರು 10 ಸಾವಿರ ಪದಾಧಿಕಾರಿಗಳು ಹಾಗೂ ನಿರ್ದೇಶಕರು ಭಾಗವಹಿಸಲಿದ್ದಾರೆ ಎಂದರು.

ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಪರಶುರಾಮ ಚಲುವಾದಿ, ಭೀಮಣ್ಣ ವಾಲ್ಮೀಕಿ, ರಾಜ್ಯ ಪರಿಷತ್ ಸದಸ್ಯರಾದ ಹಸನಸಾಬ ಚೌದ್ರಿ , ಹುಲುಗಪ್ಪ ಹಡಗಿನಾಳ, ಶಿವಕುಮಾರ ಬಂಡೋಳಿ, ಶಿವಶರಣಪ್ಪ ಕಟ್ಟಿಮನಿ, ಭೀಮನಗೌಡ ಪಾಟೀಲ, ವಿಶ್ವನಾಥ ಬಿರಾದಾರ, ನಿಂಗಣ್ಣ ಬೇವಿನಕಟ್ಟಿ, ಸುಭಾಸ ಪವ್ಹಾರ ಇತರರು ಇದ್ದರು.

ನಮ್ಮ ಹೋರಾಟ ಹತ್ತಿಕ್ಕಲು ಯತ್ನಿಸಲಾಗುತ್ತಿದೆ

ಹೋರಾಟ 10ನೇ ದಿನಕ್ಕೆ ಕಾಲಿಟ್ಟರೂ ಸ್ಪಂದಿಸದ ಸರಕಾರ

• ಉದಯವಾಹಿನಿ ಮುದ್ದೇಬಿಹಾಳ

ಕಳೆದ ಹತ್ತು ದಿನಗಳಿಂದ ಗ್ರಾಮ ಆಡಳಿತಾಧಿಕಾರಿಗಳು ನ್ಯಾಯಯುತ ಬೇಡಿಕೆಗಳ ಈಡೇರಿಕೆಗೆ ಹೋರಾಟ ಮಾಡುತ್ತಿದ್ದರು ರಾಜ್ಯ ಸರಕಾರ ಯಾವುದೇ ರೀತಿಯಲ್ಲಿ ಸಕಾರಾತ್ಮಕವಾಗಿ ಸ್ಪಂದಿಸುತ್ತಿಲ್ಲ ಬದಲಾಗಿ ನಮ್ಮ ಹೋರಾಟ ಹತ್ತಿಕ್ಕಲು ಯತ್ನಿಸುತ್ತಿದೆ ಎಂದು ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಿಯಾಜ್ ನಾಯ್ಕೂಡಿ ಹೇಳಿದರು.

ಮುದ್ದೇಬಿಹಾಳ ಆಡಳಿತ ಸೌಧ ಎದರು ಕಳೆದ ಹತ್ತು ದಿನಗಳಿಂದ ಮುದ್ದೇಬಿಹಾಳ ತಾಳಿಕೋಟೆ ಗ್ರಾಮ ಆಡಳಿತ ಅಧಿಕಾರಿಗಳ ನಡೆಸುತ್ತಿರುವ ಹೋರಾಟದಲ್ಲಿ ಪಾಲ್ಗೊಂಡು ಮಾಧ್ಯಮ ಜೊತೆ ಅವರು ಮಾತನಾಡಿದರು.

ಬೆಂಗಳೂರಿನಲ್ಲಿ ನಡೆಯುತ್ತಿರುವ ಹೋರಾಟದಲ್ಲಿ ನಮ್ಮ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಶಿವಾನಂದ ನಾಯಕ ಅವರನ್ನು ಸರಕಾರದ ಯೋಜನೆಗಳನ್ನು ವಿರೋಧಿಸುತ್ತಿದ್ದಾರಂತ ಅವರನ್ನು ಅಮಾನತ್ತು ಮಾಡಿ ಅವರ ಮೇಲೆ ಎಫ್‌ಐಆರ್ ದಾಖಲಿಸಲು ಆದೇಶ ಮಾಡಿದೆ. ಸರಕಾರಕ್ಕೆ ನಮ್ಮ ಹೋರಾಟದ ಬಗ್ಗೆ ಸಾರ್ವಜನಿಕರ ಬಗ್ಗೆ ರೈತರ, ವಿದ್ಯಾರ್ಥಿಗಳಿಗೆ ಆಗುತ್ತಿರುವ ತೊಂದರೆ ಬಗ್ಗೆ ಯೋಚಿಸುತ್ತಿಲ್ಲಾ. ನಮ್ಮ ಹ

'ಮೃತ್ಯುಕುಂಭ' ಹೇಳಿಕೆಗೆ ದೋಸ್ತಿ ಪಕ್ಷ ಏನಂತು?

ಲಖನೌ: ಉತ್ತರ ಪ್ರದೇಶದ ಪ್ರಯಾಗರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳವನ್ನು 'ಮೃತ್ಯುಕುಂಭ' ಎಂದು ಕರೆದಿರುವ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ವಿರುದ್ಧ ದೇಶಾದ್ಯಂತ ಆಕ್ರೋಶ ಭುಗಿಲೆದ್ದಿದೆ. ದೇಶದ ಬೃಹತ್ ಧಾರ್ಮಿಕ

ಸಮಾರಂಭಕ್ಕೆ ಮಮತಾ ಬ್ಯಾನರ್ಜಿ ಅವಮಾನ ಮಾಡಿರುವುದನ್ನು ಒಪ್ಪಲು ಸಾಧ್ಯವಿಲ್ಲ ಎಂದು ಭಕ್ತರು ತೀವ್ರ ಅಸಮಾಧಾನ ಹೊರಹಾಕಿದ್ದಾರೆ. ಅಲ್ಲದೇ ಬಿಜೆಪಿ ನಾಯಕರು ಕೂಡ ಮಮತಾ ಬ್ಯಾನರ್ಜಿ ಹೇಳಿಕೆಗೆ ಕೆಂಡಾಮಂಡಲರಾಗಿದ್ದಾರೆ. ಜನರ ಧಾರ್ಮಿಕ ಭಾವನೆಗಳಿಗೆ ಮಮತಾ ಬ್ಯಾನರ್ಜಿ ಧಕ್ಕೆ ತಂದಿದ್ದಾರೆ ಎಂದು ಬಿಜೆಪಿ ತೀವ್ರ ವಾಗ್ದಾಳಿ ನಡೆಸಿದೆ. ಆದರೆ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಹೇಳಿಕೆಯನ್ನು, ಇಂಡಿ ಮೈತ್ರಿಕೂಟದ ಪಾಲುದಾರ ಪಕ್ಷ ಸಮಾಜವಾದಿ ಪಕ್ಷ ಸಮರ್ಥಿಸಿಕೊಂಡಿದೆ. ನಂಬಿಕೆ ಮತ್ತು ಆಡಳಿತ ವ್ಯವಸ್ಥೆ ನಡುವಿನ ವ್ಯತ್ಯಾಸವನ್ನು ಗುರುತಿಸುವಲ್ಲಿ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ನೇತೃತ್ವದ ಉತ್ತರ ಪ್ರದೇಶ ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ಸಮಾಜವಾದಿ ಪಕ್ಷ ಗುಡುಗಿದೆ. ಈ ಕುರಿತು ಮಾತನಾಡಿರುವ ಸಮಾಜವಾದಿ ಪಕ್ಷದ ನಾಯಕ ಮತ್ತು ಮಾಜಿ ಮುಖ್ಯಮಂತ್ರಿ ದಿವಂಗತ ಮುಲಾಯಂ ಸಿಂಗ್ ಯಾದವ್ ಅವರ ಸಹೋದರ ಶಿವಪಾಲ್ ಯಾದವ್, ಯೋಗಿ ಸರ್ಕಾರಕ್ಕೆ ನಂಬಿಕೆ ಮತ್ತು ಆಡಳಿತ ವ್ಯವಸ್ಥೆ ನಡುವೆ ಸಮನ್ವಯ ಸಾಧಿಸುವಲ್ಲಿ ವಿಫಲವಾಗಿದ್ದೇ ಕಾಲ್ತುಳಿತ

ದುರಂತಕ್ಕೆ ಕಾರಣ ಎಂದು ಆರೋಪಿಸಿದ್ದಾರೆ. ಮಹಾಕುಂಭ ಮೇಳದ ಬಗ್ಗೆ ನನಗೆ ಅಪ್ಪ ಗೌರವವಿದೆ. ಗಂಗಾ ಮಾತೆಯ ಬಗ್ಗೆಯೂ ನಾನು ಗೌರವ ಭಾವನೆ ಹೊಂದಿದ್ದೇನೆ. ಆದರೆ ಮಹಾಕುಂಭ ಮೇಳದ ವ್ಯವಸ್ಥೆ ಸರಿಯಿಲ್ಲದ ಕಾರಣಕ್ಕೆ, ಜನರು ಕಾಲ್ತುಳಿತಕ್ಕೆ ಸಿಕ್ಕು ಮೃತಪಟ್ಟಿರುವುದನ್ನು ಯಾವ ರೀತಿಯಿಂದಲೂ ಸಮರ್ಥಿಸಲು ಸಾಧ್ಯವಿಲ್ಲ ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಹೇಳಿದ್ದರು. ಮುಂದುವರೆದು, ಮಹಾಕುಂಭ ಮೇಳದ ಕಾಲ್ತುಳಿತ ದುರ್ಘಟನೆಯಲ್ಲಿ ಎಷ್ಟು ಜನ ಸಾವನ್ನಪ್ಪಿದ್ದಾರೆ ಎಂಬ ಅಂಕಿ-ಸಂಖ್ಯೆಯನ್ನು ಉ. ಪ್ರ. ಸರ್ಕಾರ ಇದುವರೆಗೂ ಬಹಿರಂಗ ಪಡಿಸಿಲ್ಲ ಇದು ಮಹಾಕುಂಭ ಮೇಳವಲ್ಲ ಮೃತ್ಯುಕುಂಭ ಎಂದು ಮಮತಾ ಬ್ಯಾನರ್ಜಿ ತೀವ್ರ ವಾಗ್ದಾಳಿ ನಡೆಸಿದ್ದರು.

ಮಮತಾ ಬ್ಯಾನರ್ಜಿ ಹೇಳಿದ್ದೇನು?

ಪಶ್ಚಿಮ ಬಂಗಾಳ ರಾಜ್ಯ ಬಜೆಟ್ ಅಧಿವೇಶನದ ಹಿನ್ನೆಲೆಯಲ್ಲಿ ವಿಧಾನಸಭೆಯಲ್ಲಿ ಮಾತನಾಡಿದ್ದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ, ಪ್ರಯಾಗರಾಜ್ ಮಹಾಕುಂಭ ಮೇಳದಲ್ಲಿ ನಡೆದ ಕಾಲ್ತುಳಿತ ಘಟನೆಯನ್ನು ತೀವ್ರವಾಗಿ ಖಂಡಿಸಿದ್ದರು. ಉತ್ತರ ಪ್ರದೇಶ ಸರ್ಕಾರದ ನಿರ್ಲಕ್ಷ್ಯದಿಂದಾಗಿ ಪ್ರಯಾಗರಾಜ್ ಮಹಾಕುಂಭ ಮೇಳವು ಮೃತ್ಯುಕುಂಭವಾಗಿ ಬದಲಾಗಿದೆ. ಜನರು ಕಾಲ್ತುಳಿತಕ್ಕೆ ಸಿಕ್ಕು ಸಾವನ್ನಪ್ಪಿದ್ದು, ಇದಕ್ಕೆಲ್ಲಾ ದುರ್ಬಲ ಆಡಳಿತ ವ್ಯವಸ್ಥೆ ಕಾರಣ ಎಂದು ಮಮತಾ ಆರೋಪಿಸಿದ್ದರು.



ಢಾಕಾ: ಭಾರತದಲ್ಲಿ ಆಶ್ರಯ ಪಡೆದಿರುವ ಬಾಂಗ್ಲಾದೇಶದ ಪದಚ್ಯುತ ಪ್ರಧಾನಿ ಶೇಖ್ ಹಸೀನಾ, ತಾವು ಸ್ವದೇಶಕ್ಕೆ ಮರಳುವ ಇಚ್ಛೆ ವ್ಯಕ್ತ ಪಡಿಸಿದ್ದಾರೆ. ಇದಕ್ಕೆ ತೀಕ್ಷ್ಣ ಪ್ರತಿ ಕ್ರಿಯೆ ನೀಡಿರುವ ಮುಹಮ್ಮದ್ ಯೂನಸ್ ನೇತೃತ್ವದ ಬಾಂಗ್ಲಾದೇಶದ ಹಂಗಾಮಿ ಸರ್ಕಾರ, ಶೇಖ್ ಹಸೀನಾ ಅವರ ಹಸ್ತಾಂತರ ಪ್ರಕ್ರಿಯೆ ತಮ್ಮ ಸರ್ಕಾರದ ಪ್ರಾಥಮಿಕ ಆದ್ಯತೆ ಎಂದು ಸೂಚ್ಯವಾಗಿ ಹೇಳಿದೆ.

ಕಳೆದ ಜುಲೈನಲ್ಲಿ ನಡೆದ ವಿದ್ಯಾರ್ಥಿ ದಂಗೆಯಲ್ಲಿ ಮೃತಪಟ್ಟ ನಾಲ್ವರು ಪೊಲೀಸರ ವಿಧವಾ ಪತ್ನಿಯರೊಂದಿಗೆ ಜೂಮ್ ಮೀಟಿಂಗ್‌ನಲ್ಲಿ ಮಾತನಾಡಿದ ಶೇಖ್ ಹಸೀನಾ, ಮುಹಮ್ಮದ್ ಯೂನಸ್ ನೇತೃತ್ವದ ಹಂಗಾಮಿ ಸರ್ಕಾರದ ದುರಾಡಳಿತದಿಂದ ಬಾಂಗ್ಲಾದೇಶದ ಜನರನ್ನು ಕಾಪಾಡಲು ಸ್ವದೇಶಕ್ಕೆ ಮರಳುವ ಇಚ್ಛೆ ಇದೆ ಎಂದು ಹೇಳಿದರು.

ಮುಹಮ್ಮದ್ ಯೂನಸ್ ನೇತೃತ್ವದ ಬಾಂಗ್ಲಾದೇಶ ಹಂಗಾಮಿ ಸರ್ಕಾರವನ್ನು 'ಮಾಫಿಯಾ ಗುಂಪು' ಎಂದು ಕರೆದಿರುವ ಶೇಖ್ ಹಸೀನಾ, ದೇಶದಲ್ಲಿ ಅರಾಜಕತೆ ಸೃಷ್ಟಿಸಲು ಭಯೋತ್ಪಾದಕರಿಗೆ ಮುಕ್ತ ಅವಕಾಶ ಕಲ್ಪಿಸಲಾಗಿದೆ ಎಂದು ಗಂಭೀರ ಆರೋಪ ಮಾಡಿದರು.

ಮುಹಮ್ಮದ್ ಯೂನಸ್ ನೇತೃತ್ವದ ಹಂಗಾಮಿ ಸರ್ಕಾರ, ಬಾಂಗ್ಲಾದೇಶವನ್ನು ನಿರ್ನಾಮ ಮಾಡಲಿದೆ ಎಂದು ಶೇಖ್ ಹಸೀನಾ ತೀವ್ರವಾಗಿ ಕಿಡಿಕಾರಿದರು. ನನ್ನನ್ನು ಅಧಿಕಾರದಿಂದ ಕೆಳಗಿಳಿಸಲು ಅವರು ರೂಪಿಸಿದ್ದ ಸೂಕ್ಷ್ಮ ಒಳಸಂಚನ್ನು ಬಾಂಗ್ಲಾದೇಶದ ಜನ ಇದೀಗ ಅರ್ಥ ಮಾಡಿಕೊಂಡಿದ್ದಾರೆ. ನಾನು ನನ್ನ ದೇಶಕ್ಕೆ ಹಿಂತಿರುಗಿ ಈ ಅಮಾನವೀಯ ಸರ್ಕಾರದ ದುರಾಡಳಿತದಿಂದ ನನ್ನ ಜನರನ್ನು ರಕ್ಷಿಸುತ್ತೇನೆ. ವಿದ್ಯಾರ್ಥಿ ದಂಗೆಯಲ್ಲಿ ಹುತಾತ್ಮರಾದ ಪೊಲೀಸರ ಸಾವಿಗೆ ಪ್ರತೀಕಾರ ತೀರಿಸಿಕೊಳ್ಳುತ್ತೇನೆ ಎಂದು ಶೇಖ್ ಹಸೀನಾ ಇದೇ ವೇಳೆ ವಾಗ್ದಾನ ಮಾಡಿದರು.

ಶೇಖ್ ಹಸೀನಾ ಅವರನ್ನು ಬಾಂಗ್ಲಾದೇಶದ ನೆಲದಲ್ಲಿ ವಿಚಾರಣೆಗೆ ಗುರಿಪಡಿಸಲು ಅವರ ಹಸ್ತಾಂತರ ಅನಿವಾರ್ಯವಾಗಿದೆ. ಭಾರತದಿಂದ ಅವರನ್ನು ಕರೆತರುವ ನಮ್ಮ ಪ್ರಯತ್ನಗಳನ್ನು ನಾವು ಮುಂದುವರೆಸುತ್ತೇವೆ. ಎಂದು ಮುಹಮ್ಮದ್ ಯೂನಸ್ ಅವರ ಪತ್ರಿಕಾ ಕಾರ್ಯದರ್ಶಿ ಶಫೀಕುಲ್ ಆಲಂ ಸ್ಪಷ್ಟಪಡಿಸಿದ್ದಾರೆ.

ಬಾಂಗ್ಲಾದೇಶದ ವಿದೇಶಾಂಗ ಕಚೇರಿಯು ಶೇಖ್ ಹಸೀನಾ ಅವರನ್ನು ಹಿಂದಿರುಗಿಸುವಂತೆ ಕೋರಿ, ಭಾರತಕ್ಕೆ ರಾಜತಾಂತ್ರಿಕ ಟಿಪ್ಪಣಿಯನ್ನು ಸಲ್ಲಿಸಿದೆ.

ನವದೆಹಲಿ ಅದರ ಸ್ವೀಕೃತಿಯನ್ನು ಒಪ್ಪಿಕೊಂಡಿದೆಯಾದರೂ, ಇದುವರೆಗೂ ಯಾವುದೇ ಪ್ರತಿಕ್ರಿಯೆ ನೀಡಿಲ್ಲ.

ಭಾರತದಲ್ಲಿ ಆಶ್ರಯ ಪಡೆದಿರುವ ಬಾಂಗ್ಲಾದೇಶದ ಪದಚ್ಯುತ ಪ್ರಧಾನಿ ಶೇಖರ್ ಹಸೀನಾ, ತಾವು ಸ್ವದೇಶಕ್ಕೆ ಮರಳುವ ಇಚ್ಛೆ ವ್ಯಕ್ತಪಡಿಸಿದ್ದಾರೆ. ಇದಕ್ಕೆ ತೀಕ್ಷ್ಣ ಪ್ರತಿಕ್ರಿಯೆ ನೀಡಿರುವ ಮುಹಮ್ಮದ್ ಯೂನಸ್ ನೇತೃತ್ವದ ಬಾಂಗ್ಲಾದೇಶದ ಹಂಗಾಮಿ ಸರ್ಕಾರ, ಶೇಖ್ ಹಸೀನಾ ಅವರ ಹಸ್ತಾಂತರ ಪ್ರಕ್ರಿಯೆ ತಮ್ಮ ಸರ್ಕಾರದ ಪ್ರಾಥಮಿಕ ಆದ್ಯತೆ ಎಂದು ಸೂಚ್ಯವಾಗಿ ಹೇಳಿದೆ. ಬಾಂಗ್ಲಾದೇಶದ ವಿದೇಶಾಂಗ ಕಚೇರಿಯು ಶೇಖ್ ಹಸೀನಾ ಅವರನ್ನು ಹಿಂದಿರುಗಿಸುವಂತೆ ಕೋರಿ, ಭಾರತಕ್ಕೆ ರಾಜತಾಂತ್ರಿಕ ಟಿಪ್ಪಣಿಯನ್ನು ಸಲ್ಲಿಸಿದೆ.

ಬಾಂಗ್ಲಾಗೆ ಮರಳುವ ಇಚ್ಛೆ ಹೊರಹಾಕಿದ ಹಸೀನಾ

● ನಿಮ್ಮ ಬರುವಿಕೆಗೆ ಕಾಯುತ್ತಿದ್ದೇವೆ ಎಂದ ಯೂನಸ್ ಸರ್ಕಾರ

ದೇಶದ ಎಲ್ಲಾ ತನಿಖಾ ಸಮಿತಿಗಳನ್ನು ಮುಹಮ್ಮದ್ ಯೂನಸ್ ನೇತೃತ್ವದ ಹಂಗಾಮಿ ಸರ್ಕಾರ ವಿಸರ್ಜಿಸಿದೆ. ಜನರಿಗೆ ನ್ಯಾಯ ದೊರೆಯುವ ಭರವಸೆಯೇ ಹೊರಟು ಹೋಗಿದೆ. ಜನರನ್ನು ಭಯದಲ್ಲಿ ಇಡಲು ಭಯೋತ್ಪಾದಕರಿಗೆ ಮುಕ್ತ ಅವಕಾಶ ಕಲ್ಪಿಸಿ ಅರಾಜಕತೆ ಸೃಷ್ಟಿಸಲಾಗುತ್ತಿದೆ. ಇದೆಲ್ಲವನ್ನು ಸರಿಮಾಡಲು ನಾನು ಸ್ವದೇಶಕ್ಕೆ ಮರಳುವುದು ಅನಿವಾರ್ಯ

-ಶೇಖ್ ಹಸೀನಾ, ಪದಚ್ಯುತ ಪ್ರಧಾನಿ



- ಬಾಂಗ್ಲಾದೇಶಕ್ಕೆ ಮರಳುವ ಇಚ್ಛೆ ವ್ಯಕ್ತಪಡಿಸಿದ ಶೇಖ್ ಹಸೀನಾ
- ನೀವು ಬರುವುದನ್ನೇ ಕಾಯುತ್ತಿದ್ದೇವೆ ಎಂದ ಯೂನಸ್ ಸರ್ಕಾರ
- ಬಾಂಗ್ಲಾ ಸರ್ಕಾರವನ್ನು 'ಮಾಫಿಯಾ ಗುಂಪು' ಎಂದು ಕರೆದ ಶೇಖ್ ಹಸೀನಾ
- ಶೇಖ್ ಹಸೀನಾ ಹಸ್ತಾಂತರಕ್ಕೆ ಭಾರತಕ್ಕೆ ಮನವಿ ಮಾಡಿರುವ ಬಾಂಗ್ಲಾದೇಶ

ಶೇಖ್ ಹಸೀನಾ ಅವರ ಆಡಳಿತಾವಧಿಯಲ್ಲಿ ನಡೆದ ಹತ್ಯೆಗಳು, ಬಲವಂತದ ಕಣ್ಮರೆ ಪ್ರಕರಣಗಳು ಮತ್ತು ಇತರ ಅಪರಾಧ ಪ್ರಕರಣಗಳಲ್ಲಿ ತಪ್ಪಿತಸ್ಥರಿಗೆ ಶಿಕ್ಷೆ ಯಾಗಲೇಬೇಕು. ಶೇಖ್ ಹಸೀನಾ ಕೂಡ ಇದರಿಂದ ಹೊರತಾಗಿಲ್ಲ

ಯೂನಸ್ ಸರ್ಕಾರದ ಪ್ರತಿಕ್ರಿಯೆ

ಇನ್ನು ಮಾಜಿ ಪ್ರಧಾನಿ ಶೇಖ್ ಹಸೀನಾ ಅವರ ಬಾಂಗ್ಲಾದೇಶ ಮರಳುವಿಕೆ ಇಚ್ಛೆಗೆ ತೀಕ್ಷ್ಣವಾಗಿ ಪ್ರತಿಕ್ರಿಯಿಸಿರುವ ಮುಹಮ್ಮದ್ ಯೂನಸ್ ನೇತೃತ್ವದ ಹಂಗಾಮಿ ಸರ್ಕಾರ, ಶೇಖ್ ಹಸೀನಾ ಅವರನ್ನು ಭಾರತದಿಂದ ಹಿಂದಕ್ಕೆ ಕರೆತರುವ ತನ್ನ ಬದ್ಧತೆಯನ್ನು ಪುನರುಚ್ಚರಿಸಿದೆ. ಶೇಖ್ ಹಸೀನಾ ಅವರ ಹಸ್ತಾಂತರ ಪ್ರಕ್ರಿಯೆ ತನ್ನ ಪ್ರಮುಖ ಆದ್ಯತೆ ಎಂದು ಮುಹಮ್ಮದ್ ಯೂನಸ್ ಸರ್ಕಾರ ಒತ್ತಿ ಹೇಳಿದೆ.

ಪ್ರಯಾಗ್‌ರಾಜ್ ತ್ರಿವೇಣಿ ಸಂಗಮದ ನೀರು ಸ್ನಾನಕ್ಕಷ್ಟೇ ಅಲ್ಲ ಕುಡಿಯಲೂ ಯೋಗ್ಯ

ಹೊಸದಿಲ್ಲಿ: ಪವಿತ್ರ ಮಹಾಕುಂಭ ಮೇಳ ನಡೆಯುತ್ತಿರುವ ತ್ರಿವೇಣಿ ಸಂಗಮದ ನೀರು ಸ್ನಾನಕ್ಕೆ ಯೋಗ್ಯವಾಗಿಲ್ಲ, ಸಂಗಮದ ನೀರಿನಲ್ಲಿ ಮಿತಿ ಮೀರಿದ ಮಲ ಬ್ಯಾಕ್ಟೀರಿಯಾ ಪತ್ತೆ ಆಗಿದೆ ಎಂದು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ ವರದಿ ನೀಡಿದ ಬೆನ್ನಲ್ಲೇ, ವರದಿಯನ್ನು ತಳ್ಳಿಹಾಕಿರುವ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ತ್ರಿವೇಣಿ ಸಂಗಮದ ನೀರು ಕೇವಲ ಸ್ನಾನಕ್ಕಷ್ಟೇ ಅಲ್ಲ, ಕುಡಿಯಲು ಕೂಡ ಯೋಗ್ಯವಾಗಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

ಉತ್ತರ ಪ್ರದೇಶ ವಿಧಾನಸಭೆ ಅಧಿವೇಶನವನ್ನು ಉದ್ದೇಶಿಸಿ ಬುಧವಾರ ಮಾತನಾಡಿದ ಯೋಗಿ ಆದಿತ್ಯನಾಥ್, ಮಾಲಿನ್ಯ ನಿಯಂತ್ರಣ ಮಂಡಳಿ ಹಸಿರು ನ್ಯಾಯಾಧಿಕರಣಕ್ಕೆ ನೀಡಿರುವ ವರದಿಯ ವಿರುದ್ಧ ಕಿಡಿಕಾರಿದ್ದಾರೆ. ಸನಾತನ ಧರ್ಮ, ಗಂಗಾ ಮಾತೆ, ಮಹಾ ಕುಂಭದ ವಿರುದ್ಧ ಆಧಾರರಹಿತ ಆರೋಪಗಳನ್ನು ಮಾಡುವುದು ಅಥವಾ ನಕಲಿ ವೀಡಿಯೋಗಳನ್ನು ಪ್ರಸಾರ ಮಾಡುವುದು ಪ್ರಯಾಗ್ ರಾಜ್‌ನಲ್ಲಿ ನಡೆಯುತ್ತಿರುವ ಮೇಳದಲ್ಲಿ ಪವಿತ್ರ ಸ್ನಾನ ಮಾಡಿದ ಕೋಟ್ಯಂತರ ಜನರ ನಂಬಿಕೆಯೊಂದಿಗೆ ಆಟವಾಡಿದಂತೆ ಎಂದು ಹೇಳಿದ್ದಾರೆ. ಅಲ್ಲದೇ ಸಂಗಮ ನೀರು ಸ್ನಾನಕ್ಕೆ ಮಾತ್ರವಲ್ಲ, ಕುಡಿಯಲು ಕೂಡ ಸೂಕ್ತವಾಗಿದೆ ಎಂದು ಸಮರ್ಥಿಸಿಕೊಂಡಿರುವ ಅವರು, ನೀರಿನಲ್ಲಿ ಮಲದ ಬ್ಯಾಕ್ಟೀರಿಯಾ ಇದೆ ಎಂಬ ವರದಿಯ ಬಳಿಕ ಮಹಾಕುಂಭ ಮೇಳಕ್ಕೆ ಕಳಂಕ ತರುವ ಹುನ್ನಾರ ನಡೆಯುತ್ತಿದೆ, ಅಪಪ್ರಚಾರ ಕೈಗೊಳ್ಳಲಾಗುತ್ತಿದೆ ಎಂದು ಕಿಡಿಕಾರಿದ್ದಾರೆ.

ಮಹಾಕುಂಭದ ಸಮಯದಲ್ಲಿ ಪ್ರಯಾಗ್ ರಾಜ್‌ನ ವಿವಿಧ ಸ್ಥಳಗಳು ಸ್ನಾನ ಮಾಡಲು ಪ್ರಾಥಮಿಕ ನೀರಿನ ಗುಣಮಟ್ಟಕ್ಕೆ ಅನುಗುಣವಾಗಿಲ್ಲ ಎಂದು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ ರಾಷ್ಟ್ರೀಯ ಹಸಿರು ನ್ಯಾಯಮಂಡಳಿಗೆ ವರದಿಯನ್ನು ಸಲ್ಲಿಸಿತ್ತು. ಈ ವರದಿ ದೇಶದೆಲ್ಲೆಡೆ ಭಾರೀ ಚರ್ಚೆಗೆ ಗ್ರಾಸವಾಗಿತ್ತು. ಕೋಟ್ಯಂತರ ಜನರು ಪುಣ್ಯಸ್ನಾನ ಕೈಗೊಳ್ಳುತ್ತಿರುವ ತ್ರಿವೇಣಿ ಸಂಗಮದ ನೀರಿನ ಶುದ್ಧತೆಯ ಬಗ್ಗೆ ಹಲವು ಅನುಮಾನಗಳು ಮೂಡಿದ್ದವು. ಇದರ ಬೆನ್ನಲ್ಲೇ, ಯೋಗಿ ಆದಿತ್ಯನಾಥ್ ಅವರ ಹೇಳಿಕೆ ಹೊರಬಿದ್ದಿದೆ.

ಕಾಲ್ತುಳಿತದ ಘಟನೆಗೆ ಸಂತಾಪ: ಜನವರಿ 29ರಂದು ಸಂಭವಿಸಿದ ಮಹಾ ಕುಂಭ ಕಾಲ್ತುಳಿತದ ಸಂತ್ರಸ್ತರಿಗೆ ಸಂತಾಪ ಸೂಚಿಸಿದ ಯೋಗಿ ಆದಿತ್ಯನಾಥ್, ಕಾಲ್ತುಳಿತಕ್ಕೆ ಬಲಿಯಾದ ಎಲ್ಲಾರಿಗೂ, ಕುಂಭಕ್ಕೆ ಪ್ರಯಾಣಿಸುವಾಗ ರಸ್ತೆ ಅಪಘಾತಗಳಲ್ಲಿ ಪ್ರಾಣ ಕಳೆದುಕೊಂಡವರಿಗೆ ನಮ್ಮ ಸಹಾನುಭೂತಿ ಇದೆ. ನಮ್ಮ ಸಂತಾಪಗಳು ಅವರ ಕುಟುಂಬ ಸದಸ್ಯರೊಂದಿಗೆ ಇವೆ, ಸರ್ಕಾರವು ಅವರೊಂದಿಗೆ ನಿಲ್ಲುತ್ತದೆ, ಸರ್ಕಾರವು ಅವರಿಗೆ ಸಾಧ್ಯವಿರುವ ಎಲ್ಲ ರೀತಿಯಲ್ಲಿ ಸಹಾಯ ಮಾಡುತ್ತದೆ.

ಯೋಗಿ ಸಮರ್ಥನೆ

ಮಹಾ ಕುಂಭ ಮೇಳವನ್ನು ಯಾವುದೇ ನಿರ್ದಿಷ್ಟ ಪಕ್ಷ ಅಥವಾ ಸಂಸ್ಥೆ ಆಯೋಜಿಸುವುದಿಲ್ಲ. ಈ ಕಾರ್ಯಕ್ರಮವು ಸಮಾಜದದ್ದಾಗಿದೆ, ಸರ್ಕಾರವು ತನ್ನ ಜವಾಬ್ದಾರಿಗಳನ್ನು ಪೂರೈಸಲು ಸೇವಕನಂತೆ ಕಾರ್ಯನಿರ್ವಹಿಸುತ್ತಿದೆ. ಈ ಶತಮಾನದ ಮಹಾ ಕುಂಭದೊಂದಿಗೆ ಕೈಜೋಡಿಸುವ ಅವಕಾಶ ನಮ್ಮ ಸರ್ಕಾರಕ್ಕೆ ದೊರೆತಿರುವುದು ನಮ್ಮ ಅದೃಷ್ಟ. ದೇಶ, ಜಗತ್ತು ಕುಂಭಮೇಳದಲ್ಲಿ ಭಾಗವಹಿಸಿವೆ ಮತ್ತು ಎಲ್ಲಾ ಸುಳ್ಳು ಅಭಿಯಾನಗಳನ್ನು ನಿರ್ಲಕ್ಷಿಸಿ ಅದನ್ನು ಯಶಸ್ಸಿನ ಹೊಸ ಎತ್ತರಕ್ಕೆ ಕೊಂಡೊಯ್ದಿವೆ. ಮಹಾಕುಂಭಕ್ಕೆ ಇನ್ನು ಏಳು ದಿನಗಳು ಉಳಿದಿವೆ ಮತ್ತು ಅಂಕಿ ಅಂಶಗಳ ಪ್ರಕಾರ, ಈ ವರೆಗೆ 56 ಕೋಟಿಗೂ ಹೆಚ್ಚು ಭಕ್ತರು ಪವಿತ್ರ ಸ್ನಾನ ಮಾಡಿದ್ದಾರೆ ಎಂದು ಯೋಗಿ ಆದಿತ್ಯನಾಥ್ ವಿಧಾನಸಭೆಯಲ್ಲಿ ಹೇಳಿಕೆ ನೀಡಿದ್ದಾರೆ.

ಭಾರೀ ಚರ್ಚೆಗೆ ಗ್ರಾಸ

ಬ್ರಾಹ್ಮಣೇತರ ಅರ್ಚಕರಿಗೆ ದೇವಸ್ಥಾನ ಪ್ರವೇಶ ನಿರ್ಬಂಧ

ಚೆನ್ನೈ: ತಮಿಳುನಾಡಿನ ದೇವಸ್ಥಾನಗಳ ಪೂಜಾರಿಕೆಗಾಗಿ ಬ್ರಾಹ್ಮಣೇತರ ವ್ಯಕ್ತಿಗಳನ್ನು ನೇಮಕ ಮಾಡುವ ಮೂಲಕ ತಮಿಳುನಾಡಿನಲ್ಲಿ ಹೊಸ ಕ್ರಾಂತಿ ಮಾಡಿದ್ದ ತಮಿಳುನಾಡು ಸರ್ಕಾ ರಕ್ಕೆ ತಿರುಚನಾಪಳ್ಳಿಯ ಕುಮಾರವಯಲೂರ್ ಸುಬ್ರಹ್ಮಣ್ಯ ಸ್ವಾಮಿ ದೇವಾಲಯದ ವಂಶಪಾರಂಪರ್ಯ ಪೂಜಾರಿಗಳು ಸೆಡ್ಡು ಹೊಡೆದಿದ್ದಾರೆ. 2021ರಲ್ಲಿ ಆ ದೇವಸ್ಥಾನದಲ್ಲಿ ಪೂಜಾರಿಗಳಾಗಿ ಸರ್ಕಾರದಿಂದ ನೇಮಕವಾಗಿದ್ದ ಇಬ್ಬರು ಪೂಜಾರಿಗಳಿಗೆ ದೇವಸ್ಥಾನ ಪ್ರವೇಶಿಸದಂತೆ ನಿಷೇಧಿಸಲಾಗಿದೆ. ಹಾಗೆಂದು, ಸರ್ಕಾರದಿಂದ ಅರ್ಚಕರಾಗಿ ನೇಮಕಗೊಂಡಿದ್ದ ಎಸ್. ಪ್ರಭು ಹಾಗೂ ಜಯಪಾಲ್ ಎಂಬವರು ಆರೋಪಿಸಿದ್ದಾರೆ. ಈ ಕುರಿತಂತೆ, ಮುಖ್ಯಮಂತ್ರಿ ಸ್ಟ್ಯಾಲಿನ್ ಹಾಗೂ ಮುಜರಾಯಿ ಇಲಾಖೆಗೆ ಪತ್ರ ಬರೆದಿದ್ದಾರೆ. ಫೆ. 19ರಿಂದ, ಆ ದೇವಸ್ಥಾನದ ದೇವರಾದ ಮುರುಗನ್ ದೇವರಿಗೆ ಕುಂಭಾಭಿಷೇಕ ನೆರವೇರಿಸಲಾಗುತ್ತಿದೆ. ಈ ಸಂದರ್ಭದಲ್ಲಿ, ಸರ್ಕಾರದಿಂದ ನೇಮಕವಾಗಿರುವ ಅರ್ಚಕರನ್ನು ದೇವಸ್ಥಾನದಿಂದ ಬಹಿಷ್ಕಾರಗೊಳಿಸಲಾಗಿದೆ. ಹೀಗೆಂದು, ಎಸ್. ಪ್ರಭು ಜಯಪಾಲ್ ಅವರು ಆರೋಪಿಸಿದ್ದಾರೆ.

ದೇವಸ್ಥಾನದಲ್ಲಿ ಉತ್ಸವ ನಡೆಯುತ್ತಿರುವ ಸಂದರ್ಭದಲ್ಲಿ ತಮ್ಮನ್ನು ದೇವಸ್ಥಾನದ ಅಂಗಳಕ್ಕೂ ಬಿಟ್ಟುಕೊಳ್ಳುತ್ತಿಲ್ಲ. ನಮ್ಮನ್ನು ದೇವಸ್ಥಾನದಿಂದ ಹೊರಗೆ ಹಾಕಲಾಗಿದೆ ಎಂದು ಇಬ್ಬರೂ ಆರೋಪಿಸಿದ್ದಾರೆ.

ಮೂರು ವರ್ಷಗಳಾದರೂ ಗರ್ಭಗುಡಿಯೊಳಗೆ ಪ್ರವೇಶವಿಲ್ಲ: ಮಾಧ್ಯಮಗಳೊಂದಿಗೆ ಮಾತನಾಡಿರುವ ಅವರು, ಈಗಷ್ಟೇ ಅಲ್ಲ, ತಾವು ಈ ದೇವಸ್ಥಾನದ ಅರ್ಚಕರಾಗಿ ನೇಮಕವಾದಾಗಿನಿಂದ ಈ ದೇವಸ್ಥಾನದಲ್ಲಿರುವ ವಂಶಪಾರಂಪರ್ಯ ಪೂಜಾರಿಗಳು ಗರ್ಭಗುಡಿಯ ಒಳಗೆ ನಮ್ಮನ್ನು ಬಿಟ್ಟೇ ಇಲ್ಲ, ಈಗಾಗಲೇ ನಾವು ಈ ದೇವಸ್ಥಾನಕ್ಕೆ ಅರ್ಚಕರಾಗಿ ನೇಮಕವಾಗಿ ಮೂರು ವರ್ಷಗಳೇ ಕಳೆದಿವೆ. ಆದರೆ, ಇಷ್ಟು ದಿನಗಳ ಸುದೀರ್ಘ ಸೇವೆಯಲ್ಲಿ ನಮಗೆ ದೇವಸ್ಥಾನದ ಬೇರೆ ಬೇರೆ ಕೆಲಸಗಳನ್ನು ಕೊಡಲಾಗಿದೆ. ಆದರೆ ಗರ್ಭಗುಡಿಯೊಳಗೆ ಹೋಗಿ ದೇವರಿಗೆ ಅಲಂಕಾರ ಮಾಡುವುದು ಅಥವಾ ದೇವರಿಗೆ ಪೂಜೆ ಮಾಡಲು ಸಾಧ್ಯವಾಗಿಲ್ಲ ಎಂದು ಅವರು ದೂರಿದ್ದಾರೆ.

ದೇವಸ್ಥಾನಕ್

ಪಾಕಿಸ್ತಾನದ ಕಿವಿ ಹಿಂಡಿದ ಕಿವೀಸ್

ಉದ್ಘಾಟನಾ ಪಂದ್ಯದಲ್ಲೇ ಪಾಕಿಸ್ತಾನಕ್ಕೆ ಮುಖಭಂಗ

ಪಾಕಿಸ್ತಾನ ಮತ್ತು ನ್ಯೂಜಿಲೆಂಡ್ ನಡುವಿನ ಪಂದ್ಯದೊಂದಿಗೆ ಚಾಂಪಿಯನ್ಸ್ ಟ್ರೋಫಿ ಆರಂಭವಾಗಿದೆ. 29 ವರ್ಷಗಳ ನಂತರ ಪಾಕಿಸ್ತಾನದಲ್ಲಿ ಐಸಿಸಿ ಟೂರ್ನಮೆಂಟ್ ನಡೆಯುತ್ತಿದೆ. ಮೊದಲ ಪಂದ್ಯದಲ್ಲೇ ಪಾಕಿಸ್ತಾನಕ್ಕೆ ನ್ಯೂಜಿಲ್ಯಾಂಡ್ ಸೋಲಿನ ರುಚಿ ತೋರಿಸಿದೆ. ಪಾಕಿಸ್ತಾನ ಮತ್ತು ನ್ಯೂಜಿಲೆಂಡ್ ನಡುವಿನ ಪಂದ್ಯದೊಂದಿಗೆ ಚಾಂಪಿಯನ್ಸ್ ಟ್ರೋಫಿ ಆರಂಭವಾಗಿದೆ. 29 ವರ್ಷಗಳ ನಂತರ ಪಾಕಿಸ್ತಾನದಲ್ಲಿ ಐಸಿಸಿ ಟೂರ್ನಮೆಂಟ್ ನಡೆಯುತ್ತಿದೆ. ಮೊದಲ ಪಂದ್ಯದಲ್ಲೇ ಪಾಕಿಸ್ತಾನಕ್ಕೆ ನ್ಯೂಜಿಲ್ಯಾಂಡ್ ಸೋಲಿನ ರುಚಿ ತೋರಿಸಿದೆ.

ನ್ಯೂಜಿಲ್ಯಾಂಡ್ ನೀಡಿದ 321 ರನ್ ಗಳ ಗುರಿ ಬೆನ್ನಟ್ಟಿದ ಪಾಕಿಸ್ತಾನಕ್ಕೆ ಆರಂಭಿಕ ಹಿನ್ನಡೆಯಾಯಿತು. 6 ರನ್ ಗಳಿಸಿದ್ದ ಸೌದ್ ಶಕೀಲ್ ಮತ್ತು 3 ರನ್ ಗಳಿಸಿದ್ದ ಮೊಹಮ್ಮದ್ ರಿಜ್ವಾನ್ ಬ'ರೂರ್ಕ್ ಎಸೆತದಲ್ಲಿ ಔಟಾಗಿ ಪೆವಿಲಿಯನ್ ಸೇರಿದರು. ನಂತರ ಫಖರ್ ಜಮಾನ್ 24 ರನ್ ಗಳಿಸಿ ಔಟಾದರೆ, ಸಲ್ಮಾನ್ ಆಫ್ ಸ್ಫೋಟಕ ಬ್ಯಾಟಿಂಗ್ ಮಾಡಿ 28 ಎಸೆತಗಳಲ್ಲಿ 42 ರನ್ ಸಿಡಿಸಿ ಔಟಾದರು. ಬಾಬರ್ ಅಜಂ ತಾಳ್ಮೆಯ ಆಟವಾಡಿದರೂ ಸಹ ಬ್ಯಾಟರ್ ಗಳು ಸಪೋರ್ಟ್ ಮಾಡಲಿಲ್ಲ. ಅಲ್ಪಮೊತ್ತಕ್ಕೆ ಔಟಾಗಿ ಪೆವಿಲಿಯನ್ ಸೇರಿದರು. ಅಂತಿಮವಾಗಿ ಪಾಕಿಸ್ತಾನ 260 ರನ್ ಗೆ ಆಲೌಟ್ ಆಗಿದ್ದು 60 ರನ್ ಗಳಿಂದ ಸೋಲು ಕಂಡಿದೆ. 2025ರ ಐಸಿಸಿ ಚಾಂಪಿಯನ್ಸ್ ಟ್ರೋಫಿಯ ಮೊದಲ ಪಂದ್ಯದಲ್ಲಿಯೇ 2 ಶತಕಗಳು ದಾಖಲಾಗಿವೆ. ಕರಾಚಿಯಲ್ಲಿ ಪಾಕಿಸ್ತಾನ ವಿರುದ್ಧ ನ್ಯೂಜಿಲೆಂಡ್‌ನ ಆರಂಭಿಕ ಆಟಗಾರರಾದ ವಿಲ್ ಯಂಗ್ ಮತ್ತು ಟಾಮ್ ಲ್ಯಾಥಮ್ ಶತಕಗಳನ್ನು ಗಳಿಸಿದ್ದಾರೆ. ವಿಲ್ ಯಂಗ್ 107 ಮತ್ತು ಟಾಮ್ ಲ್ಯಾಥಮ್ ಅಜೇಯ 118 ರನ್ ಗಳಿಸಿದರು. ಇಬ್ಬರ ಬ್ಯಾಟಿಂಗ್ ನೆರವಿನಿಂದ ನ್ಯೂಜಿಲೆಂಡ್ 50 ಓವರ್ ಗಳಲ್ಲಿ 5 ವಿಕೆಟ್‌ಗೆ 320 ರನ್ ಗಳಿಸಿತು. ಇದಲ್ಲದೆ, ಗ್ಲೆನ್ ಫಿಲಿಪ್ಸ್ 39 ಎಸೆತಗಳಲ್ಲಿ 61 ರನ್ ಗಳಿಸಿದರು. ಪಾಕಿಸ್ತಾನ ಪರ ಹ್ಯಾರಿಸ್ ರೌಫ್ ಮತ್ತು ನಸೀಮ್ ಶಾ ತಲಾ 2 ವಿಕೆಟ್ ಪಡೆದರು. ಆದರೆ ರೌಫ್ 83 ರನ್ ದುಬಾರಿ ಬೌಲರ್ ಎನಿಸಿಕೊಂಡರು. ಅಬ್ರಾರ್ ಅಹ್ಮದ್ 1 ವಿಕೆಟ್ ಪಡೆದರು.



ಪಾಕಿಸ್ತಾನದಲ್ಲಿ ಕೊನೆಗೂ ಹಾರಿದ ತ್ರಿವರ್ಣ ಧ್ವಜ

ಚಾಂಪಿಯನ್ಸ್ ಟ್ರೋಫಿಗೆ ಇಂದಿನಿಂದ ಅದ್ಧೂರಿ ಚಾಲನೆ ಸಿಕ್ಕಿದೆ. ಮೊದಲ ಪಂದ್ಯದಲ್ಲಿ ಆತಿಥೇಯ ಪಾಕಿಸ್ತಾನ ಹಾಗೂ ನ್ಯೂಜಿಲೆಂಡ್ ತಂಡಗಳು ಮುಖಾಮುಖಿಯಾಗಿವೆ. ಆದರೆ ಈ ಪಂದ್ಯಕ್ಕೂ ಮುನ್ನ ಎದ್ದಿದ್ದ ವಿವಾದಕ್ಕೆ ತೆರೆ ಎಳೆಯುವ ಮೂಲಕ ಪಾಕಿಸ್ತಾನ ಕ್ರಿಕೆಟ್ ಮಂಡಳಿ ವಿಶ್ವ ಕ್ರಿಕೆಟ್ ಮುಂದೆ ಮುಜುಗರಕ್ಕೀಡಾಗುವುದರಿಂದ ಪಾರಾಗಿದೆ. ವಾಸ್ತವವಾಗಿ ಈ ಐಸಿಸಿ ಟೂರ್ನಿಗೆ ಆತಿಥ್ಯ ನೀಡುತ್ತಿರುವ ಕರಾಚಿ ಮತ್ತು ಲಾಹೋರ್ ಕ್ರೀಡಾಂಗಣಗಳಲ್ಲಿ ಪಿಸಿಬಿ 7 ತಂಡಗಳ ಧ್ವಜಗಳನ್ನು ಹಾರಿಸಿತ್ತು. ಆದರೆ ಇದರಲ್ಲಿ ಭಾರತದ ಧ್ವಜವನ್ನು ಹಾರಿಸಿರಲಿಲ್ಲ. ಇದರಿಂದ ಪಂದ್ಯಾವಳಿ ಆರಂಭಕ್ಕೂ ಮುನ್ನವೇ ವಿವಾದ ಎದ್ದಿತ್ತು. ಆದರೆ ಈಗ ಕರಾಚಿಯ ರಾಷ್ಟ್ರೀಯ ಕ್ರೀಡಾಂಗಣದಲ್ಲಿ ಭಾರತದ ತ್ರಿವರ್ಣ ಧ್ವಜವನ್ನು ಹಾರಿಸಲಾಗಿದೆ.

ಮೇಲೆ ಹೇಳಿದಂತೆ ಕ್ರೀಡಾಂಗಣದಲ್ಲಿ ಭಾರತದ ಧ್ವಜವನ್ನು ಹಾರಿಸದ ಪಿಸಿಬಿ ನಡೆಗೆ ಭಾರತೀಯರು ಆಕ್ರೋಶ ಹೊರಹಾಕಿದ್ದರು. ಇದಾದ ನಂತರ ಪಿಸಿಬಿಯನ್ನು ಸಾಮಾಜಿಕ ಜಾಲತಾಣಗಳಲ್ಲಿ ತೀವ್ರವಾಗಿ ಟೀಕಿಸಲಾಗಿತ್ತು. ಭಾರತ ತಂಡವು ಪಾಕಿಸ್ತಾನದಲ್ಲಿ ಚಾಂಪಿಯನ್ಸ್ ಟ್ರೋಫಿ ಪಂದ್ಯಗಳನ್ನು ಆಡುತ್ತಿಲ್ಲವಾದ್ದರಿಂದ ಪಿಸಿಬಿ ಈ ನಿರ್ಧಾರವನ್ನು ತೆಗೆದುಕೊಂಡಿದೆ ಎಂದು ಹೇಳಲಾಗಿತ್ತು. ಆದರೆ ಈಗ ಪಾಕಿಸ್ತಾನ ಕ್ರಿಕೆಟ್ ಮಂಡಳಿ ತನ್ನ ನಿರ್ಧಾರದಿಂದ ಹಿಂದೆ ಸರಿದಿದೆ.

ಇದೀಗ ಕರಾಚಿಯ ರಾಷ್ಟ್ರೀಯ ಕ್ರೀಡಾಂಗಣದಲ್ಲಿ ಭಾರತದ ಧ್ವಜವನ್ನು ಹಾರಿಸಲಾಗಿದೆಯಾದರೂ, ಈ ಮೊದಲು ಕರಾಚಿಯಲ್ಲಿ ತ್ರಿವರ್ಣ ಧ್ವಜವನ್ನು ತಲೆಕೆಳಗಾಗಿ ಹಾರಿಸಲಾಗಿತ್ತು. ಇದರ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿಯೂ ವೈರಲ್ ಆಗಿತ್ತು.

ವಾಸ್ತವವಾಗಿ ಈ ಹಿಂದೆ ಗಡಾಫಿ ಕ್ರೀಡಾಂಗಣದಲ್ಲಿ ಭಾರತದ ಧ್ವಜ ಹಾರಿಸದಿರುವ ಬಗ್ಗೆ ಗದ್ದಲ ಉಂಟಾದಾಗ, ಪಾಕಿಸ್ತಾನ ಕ್ರಿಕೆಟ್ ಮಂಡಳಿ ಈ ಬಗ್ಗೆ ಸ್ಪಷ್ಟೀಕರಣವನ್ನು ನೀಡಿತ್ತು. ಇದರ ಹಿಂದಿನ ಕಾರಣವನ್ನು ವಿವರಿಸಿದ ಪಾಕ್ ಮಾಧ್ಯಮ, '2025 ರ ಚಾಂಪಿಯನ್ಸ್ ಟ್ರೋಫಿಯ ಪಂದ್ಯಗಳಲ್ಲಿ ಕೇವಲ ನಾಲ್ಕು ಧ್ವಜಗಳು ಮಾತ್ರ ಹಾರಿಸಬೇಕು ಎಂದು ಐಸಿಸಿ ಸೂಚಿಸಿತ್ತು. ಈ ನಾಲ್ಕು ಧ್ವಜಗಳಲ್ಲಿ ಒಂದು ಐಸಿಸಿಯದ್ದು, ಇನ್ನೊಂದು ಆತಿಥೇಯ ದೇಶದ್ದು ಹಾಗೂ ಉಳಿದ ಎರಡು ಧ್ವಜಗಳು ಯಾವ ತಂಡಗಳ ನಡುವೆ ಪಂದ್ಯ ನಡೆಯುತ್ತಿರುತ್ತದೊ ಆ ದೇಶಗಳದ್ದು ಎಂದು ಹೇಳಿಕೊಂಡಿತ್ತು. ಆದರೆ ಪಿಸಿಬಿಯ ಈ ಕಳಪೆ ವಿವರಣೆಯು ಇನ್ನಷ್ಟು ಗದ್ದಲವನ್ನು ಸೃಷ್ಟಿಸಿತ್ತು. ಏಕೆಂದರೆ ಕ್ರೀಡಾಂಗಣದಲ್ಲಿ 4 ಕ್ಕೂ ಹೆಚ್ಚು ಧ್ವಜಗಳನ್ನು ಹಾರಿಸಿರುವುದು ವಿಡಿಯೋದಲ್ಲಿ ಸ್ಪಷ್ಟವಾಗಿ ಕಾಣಬಹುದಾಗಿದೆ.

ಬಾಬರ್‌ಗೆ ಹಿಂಬಡ್ತಿಯ ಶಾಕ್ ನೀಡಿದ ಶುಭ್‌ಮನ್ ಗಿಲ್

ಇಂಗ್ಲೆಂಡ್ ವಿರುದ್ಧದ ಏಕದಿನ ಸರಣಿಯಲ್ಲಿ ಅಮೋಘ ಪ್ರದರ್ಶನ ನೀಡಿದ್ದ ಟೀಂ ಇಂಡಿಯಾದ ಸ್ಟಾರ್ ಓಪನರ್ ಶುಭ್‌ಮನ್ ಗಿಲ್ ಏಕದಿನ ಶ್ರೇಯಾಂಕದಲ್ಲಿ ಅಗ್ರ ಸ್ಥಾನಕ್ಕೇರಿದ್ದಾರೆ. ಪಾಕಿಸ್ತಾನದ ಸ್ಟಾರ್ ಬ್ಯಾಟ್ಸ್‌ಮನ್ ಬಾಬರ್ ಆಝಂ ಅವರನ್ನು ಹಿಂದಿಕ್ಕಿರುವ ಗಿಲ್ ನಂಬರ್ 1 ಸ್ಥಾನ ಪಡೆದಿರುವುದು ಚಾಂಪಿಯನ್ಸ್ ಟ್ರೋಫಿ ಆರಂಭಕ್ಕೆ ಶುಭಾರಂಭ ಸಿಕ್ಕಂತ್ತಾಗಿದೆ.

ಶುಭ್‌ಮನ್ ಗಿಲ್ 796 ರೇಟಿಂಗ್ ಅಂಕಗಳೊಂದಿಗೆ ನಂಬರ್ 1 ಸ್ಥಾನಕ್ಕೇರಿದ್ದರೆ, ಬಾಬರ್ ಆಝಂ 773 ರೇಟಿಂಗ್‌ಗಳೊಂದಿಗೆ ಎರಡನೇ ಸ್ಥಾನಕ್ಕೆ ಕುಸಿದಿದ್ದಾರೆ. ನ್ಯೂಜಿಲೆಂಡ್ ಮತ್ತು ದಕ್ಷಿಣ ಆಫ್ರಿಕಾ ವಿರುದ್ಧದ ತ್ರಿಕೋನ ಸರಣಿಯಲ್ಲಿ ಬಾಬರ್ ರನ್ ಗಳಿಸುವಲ್ಲಿ ವಿಫಲರಾಗಿದ್ದರು. ಹೀಗಾಗಿ ಬಾಬರ್ ಹಿಂಬಡ್ತಿ ಪಡೆಯಬೇಕಾಯಿತು.

ಮತ್ತೊಂದೆಡೆ, ಶುಭ್‌ಮನ್ ಗಿಲ್ ಇಂಗ್ಲೆಂಡ್ ವಿರುದ್ಧದ ಏಕದಿನ ಸರಣಿಯಲ್ಲಿ ಅದ್ಭುತ ಪ್ರದರ್ಶನ ನೀಡಿದ್ದರು. ಏಕದಿನ ತಂಡದ ಉಪನಾಯಕತ್ವವಹಿಸಿಕೊಂಡು ಜವಬ್ದಾರಿಯುತ ಬ್ಯಾಟಿಂಗ್ ಮಾಡಿದ ಗಿಲ್, ಮೂರು ಪಂದ್ಯಗಳ ಸರಣಿಯಲ್ಲಿ 2 ಅರ್ಧಶತಕಗಳು ಮತ್ತು 1 ಶತಕ ಕೂಡ ಬಾರಿಸಿದ್ದರು.

2019 ರಲ್ಲಿ ಕ್ರಿಕೆಟ್‌ಗೆ ಪಾದಾರ್ಪಣೆ ಮಾಡಿದ ಗಿಲ್ ಇಲ್ಲಿಯವರೆಗೆ ಕೇವಲ 50 ಏಕದಿನ ಪಂದ್ಯಗಳನ್ನು ಆಡಿದ್ದು, ಕೆಲವೇ ಪಂದ್ಯಗಳಲ್ಲಿ ನಂಬರ್ 1 ಸ್ಥಾನವನ್ನು ತಲುಪಿದ್ದಾರೆ. ಈ ಮಾದರಿಯಲ್ಲಿ ಗಿಲ್ 60 ಕ್ಕಿಂತ ಹೆಚ್ಚು ಸರಾಸರಿಯಲ್ಲಿ 2587 ರನ್ ಗಳಿಸಿದ್ದಾರೆ. ಇದರಲ್ಲಿ 7 ಶತಕ ಮತ್ತು 15 ಅರ್ಧಶತಕಗಳು ಸೇರಿವೆ. ಗಿಲ್ ಏಕದಿನ ಕ್ರಿಕೆಟ್‌ನಲ್ಲಿ ಒಂದು ದ್ವಿಶತಕ ಕೂಡ ಗಳಿಸಿದ್ದಾರೆ.

ಅಲ್ಲದೆ ಶುಭ್‌ಮನ್ ಗಿಲ್ ಏಕದಿನ ಕ್ರಿಕೆಟ್‌ನಲ್ಲಿ ಅತಿ ವೇಗವಾಗಿ 2500 ರನ್ ಗಳಿಸಿದ ಆಟಗಾರ ಎಂಬ ಹೆಗ್ಗಳಿಕೆಗೂ ಪಾತ್ರರಾಗಿದ್ದಾರೆ. ಇದೇ ಕಾರಣಕ್ಕಾಗಿ ಗಿಲ್ ಏಕದಿನ ಕ್ರಿಕೆಟ್‌ನಲ್ಲಿ ನಂಬರ್ 1 ಬ್ಯಾಟ್ಸ್‌ಮನ್ ಆಗಿ ಮೂಡಿಬಂದಿದ್ದಾರೆ.

ಇದೀಗ ಬಾಬರ್ ಅವರನ್ನು 2ನೇ ಸ್ಥಾನಕ್ಕೆ ತಳ್ಳಿರುವ ಗಿಲ್ ಈ ಶ್ರೇಯಾಂಕವನ್ನು ಉಳಿಸಿಕೊಳ್ಳಲು ಚಾಂಪಿಯನ್ಸ್ ಟ್ರೋಫಿಯಲ್ಲಿ ಉತ್ತಮ ಪ್ರದರ್ಶನ ನೀಡಬೇಕಾಗುತ್ತದೆ. ಈ ಬಲಗೈ ಬ್ಯಾಟ್ಸ್‌ಮನ್ ಪ್ರಸ್ತುತ ಅದ್ಭುತ ಫಾರ್ಮ್‌ನಲ್ಲಿದ್ದು ಚಾಂಪಿಯನ್ಸ್ ಟ್ರೋಫಿಯಲ್ಲಿ ಅವರು ಸಾಕಷ್ಟು ರನ್ ಗಳಿಸಿದರೆ ಮುಂದಿನ ದಿನಗಳಲ್ಲೂ ನಂಬರ್ 1 ಸ್ಥಾನದಲ್ಲಿ ವ ಮುಂದುವರೆಯಲಿದ್ದಾರೆ.

2028ರ ಒಲಿಂಪಿಕ್ಸ್‌ನಲ್ಲಿ ಕ್ರಿಕೆಟ್ ಭಾಗವಾಗುತ್ತಿರುವುದು ಸಂತಸ ತಂದಿದೆ

ಬೋಸ್ಟನ್‌ನಲ್ಲಿ ನಡೆದ ಹಾರ್ವರ್ಡ್ ಇಂಡಿಯಾ ಸಮ್ಮೇಳನದಲ್ಲಿ ನೀತಾ ಅಂಬಾನಿ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಅವರು ಒಲಿಂಪಿಕ್ಸ್‌ನಲ್ಲಿ ಕ್ರಿಕೆಟ್ ಸೇರ್ಪಡೆಗೆ ಬಗ್ಗೆ ಹಾಗೂ 2036 ರ ಒಲಿಂಪಿಕ್ಸ್ ಅನ್ನು ಆಯೋಜಿಸಲು ಭಾರತ ಆಸಕ್ತಿ ಹೊಂದಿದೆ ಎಂದು ನೀತಾ ಅಂಬಾನಿ ಹೇಳಿದರು.

2028 ರ ಲಾಸ್ ಏಂಜಲೀಸ್ ಒಲಿಂಪಿಕ್ಸ್‌ನಲ್ಲಿ ಕ್ರಿಕೆಟ್ ಅನ್ನು ಸೇರಿಸಲು ಒಲಿಂಪಿಕ್ ಸಮಿತಿ ನಿರ್ಧರಿಸಿದೆ. ಈ ಸಂದರ್ಭದಲ್ಲಿ, ಅಂತರರಾಷ್ಟ್ರೀಯ ಒಲಿಂಪಿಕ್ ಸಮಿತಿ ಸದಸ್ಯೆ ಮತ್ತು ರಿಲಯನ್ಸ್ ಫೌಂಡೇಶನ್ ಸಂಸ್ಥಾಪಕಿ ಮತ್ತು ಅಧ್ಯಕ್ಷೆ ನೀತಾ ಅಂಬಾನಿ ಅವರು 2028 ರ ಲಾಸ್ ಏಂಜಲೀಸ್ ಒಲಿಂಪಿಕ್ಸ್‌ನಲ್ಲಿ ಕ್ರಿಕೆಟ್ ಅನ್ನು ಸೇರಿಸುವ ಬಗ್ಗೆ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು. ಕಳೆದ ವರ್ಷ ಅಕ್ಟೋಬರ್‌ನಲ್ಲಿ ನಡೆದ ಅಂತರರಾಷ್ಟ್ರೀಯ ಒಲಿಂಪಿಕ್ ಸಮಿತಿಯ 141 ನೇ ಅಧಿವೇಶನದಲ್ಲಿ ಟೀಮ್ ಇಂಡಿಯಾದ ಸ್ಟಾರ್ ಬ್ಯಾಟ್ಸ್‌ಮನ್ ವಿರಾಟ್ ಕೊಹ್ಲಿ ಅವರನ್ನು ಉಲ್ಲೇಖಿಸಲಾಗಿತ್ತು. ಆಗ ಒಲಿಂಪಿಕ್ಸ್‌ನಲ್ಲಿ ಕ್ರಿಕೆಟ್ ಅನ್ನು ಸೇರಿಸುವ ನಿರ್ಧಾರ ತೆಗೆದುಕೊಳ್ಳಲಾಯಿತು.

ಬೋಸ್ಟನ್‌ನಲ್ಲಿ ನಡೆದ ಹಾರ್ವರ್ಡ್ ಇಂಡಿಯಾ ಸಮ್ಮೇಳನದಲ್ಲಿ ನೀತಾ ಅಂಬಾನಿ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಅವರು ಒಲಿಂಪಿಕ್ಸ್‌ನಲ್ಲಿ ಕ್ರಿಕೆಟ್ ಸೇರ್ಪಡೆಗೆ ಬಗ್ಗೆ ಹಾಗೂ 2036 ರ ಒಲಿಂಪಿಕ್ಸ್ ಅನ್ನು ಆಯೋಜಿಸಲು ಭಾರತ ಆಸಕ್ತಿ ಹೊಂದಿದೆ ಎಂದು ನೀತಾ ಅಂಬಾನಿ ಹೇಳಿದರು.

ಕನ್ನಡದ ಈ ಹಾಡು ರಾಮ್‌ಗೆ ಬಲು ಇಷ್ಟ

ಟಾಲಿವುಡ್ ನಟ ರಾಮ್ ಚರಣ್ ಸದ್ಯ ಸೋಲಿನ ಸುಳಿಯಲ್ಲಿ ಸಿಲುಕಿದ್ದಾರೆ. ಮೆಗಾ ಹೀರೋ ಕನ್ನಡ ಹಾಡಿನ ಬಗ್ಗೆ ಮಾತಾಡಿದ್ರು. ಈ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ರಾಮ್ ಚರಣ್ ಇಷ್ಟದ ಕನ್ನಡ ಹಾಡು ಯಾವುದು ಗೊತ್ತಾ ರಾಮ್ ಚರಣ್, ಜೂನಿಯರ್ ಎನ್‌ಟಿಆರ್ ನಟಿಸಿದ ಆರ್ ಆರ್ ಆರ್ ಸಿನಿಮಾ ಸೂಪರ್ ಡೂಪರ್ ಹಿಟ್ ಆಯ್ತು. ಬಳಿಕ ಬಂದ ರಾಮ್ ಚರಣ್ ಸಿನಿಮಾಗಳು ನೆಲ ಕಚ್ಚಿದೆ. ಆಚಾರ್ಯ್ ಸಿನಿಮಾ ಫ್ಲಾಪ್ ಆಯ್ತು. ಇತ್ತೀಚಿಗಷ್ಟೇ ತೆರೆಕಂಡ ಗೇಮ್ ಚೇಂಜರ್ ಸಿನಿಮಾ ಮಕಾಡೆ ಮಲಗಿತು. ಮೆಗಾಸ್ಟಾರ್ ಚಿರಂಜೀವಿ ಪುತ್ರ ರಾಮ್ ಚರಣ್ ಅವರ ಹಳೆಯ ವಿಡಿಯೋ ಒಂದು ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ಕನ್ನಡ ಹಾಡಿನ ಬಗ್ಗೆ ರಾಮ್ ಚರಣ್ ಮಾತಾಡಿದ್ದಾರೆ. ಯಾವ ಹಾಡು ತನಗೆ ಇಷ್ಟ ಅನ್ನೋದನ್ನು ತಿಳಿಸಿದ್ದಾರೆ. ಇದೇ ವೇಳೆ ಸಂದರ್ಶನವೊಂದರಲ್ಲಿ ಮಾತಾಡಿದ ರಾಮ್ ಚರಣ್, ಕನ್ನಡದ ಸಾಂಗ್ ಬಗ್ಗೆಯೂ ಮಾತಾಡಿದ್ರು. ನನಗೆ ಕೆಜಿಎಫ್ ಸಿನಿಮಾ ಈ ಹಾಡು ಅಂದ್ರೆ ಬಲು ಇಷ್ಟ ಎಂದು ರಾಮ್ ಚರಣ್ ಹೇಳಿದ್ದಾರೆ. ರಾಕಿಂಗ್ ಸ್ಟಾರ್ ಯಶ್ ಅಭಿನಯದ ಕೆಜಿಎಫ್ ಸಿನಿಮಾ ಹಾಡು ಇದಾಗಿದೆ. ನೀವು ನಡೆದು ಬರುವಾಗ ಯಾವ ಹಾಡು ಬ್ಯಾಕ್ ಗ್ರೌಂಡ್ ನಲ್ಲಿ ಬರುತ್ತದೆ ಎಂದು ಕೇಳಿದ್ರು. ಆಗ ರಾಜಮೌಳಿ ಅವರು 'ಧೀರ.. ಧೀರ..' ಎಂದು ಹಾಡು ಹೇಳಲು ಮುಂದಾದರು. ರಾಮ್ ಚರಣ್ ಅವರು ನಾನು ಅಷ್ಟು ಸ್ಲೋ ಅಲ್ಲ. ನನಗೆ ಕೆಜಿಎಫ್ ಸಿನಿಮಾದ ಧೀರ.. ಧೀರ.. ಧೀರಾದಿ ಸುಲ್ತಾನ ಹಾಡು ಇಷ್ಟ ಎಂದು ಹೇಳಿದ್ರು. ಇದನ್ನು ಕೇಳಿ ಯಶ್ ಅಭಿಮಾನಿಗಳು ಕೂಡ ಖುಷ್ ಆಗಿದ್ದಾರೆ. ಮೆಗಾ ಹೀರೋ ರಾಮ್ ಚರಣ್ ಅವರು ಕನ್ನಡ ಹಾಡುಗಳನ್ನು ಇಷ್ಟಪಟ್ಟು ಕೇಳ್ತಾರೆ ಎಂದಾಯ್ತು ಅಂತಿದ್ದಾರೆ ಫ್ಯಾನ್ಸ್.

ಕಟ್ ಆಯ್ತು ಹನಿ ಧರಿಸಿದ್ದ ಡ್ರೆಸ್!

ನಟಿ ಹನಿ ರೋಸ್ ಉದ್ಘಾಟನಾ ಸಮಾರಂಭವೊಂದರಲ್ಲಿ ಭಾಗಿಯಾಗಿದ್ರು. ನಟಿ ಹನಿ ರೋಸ್ ನೋಡಲು ಅಭಿಮಾನಿಗಳು ಕೂಡ ಆಗಮಿಸಿದ್ರು. ವಿದೇಶದಲ್ಲಿ ನಡೆದ ಕಾರ್ಯಕ್ರಮ ಇದಾಗಿತ್ತು. ಹೀಗಾಗಿ ಹನಿ ರೋಸ್ ಕೊಂಚ ಮಾರ್ಡೆನ್ ಆಗಿಯೇ ರೆಡಿಯಾಗಿದ್ರು. ಬ್ಲ್ಯಾಕ್ ಕಲರ್ ಗೌನ್ ಧರಿಸಿ ಮಿಂಚುತ್ತಿದ್ರು. ಹನಿ ರೋಸ್ ಬ್ಲ್ಯಾಕ್ ಕಲರ್ ಗೌನ್ ಧರಿಸಿದ್ರು. ಡ್ರೆಸ್ ನಲ್ಲಿ ಫ್ಲವರ್ ಡಿಸೈನ್ ಕೂಡ ಇದೆ. ಕೂದಲಿಗೆ ಬನ್ ಹಾಕಿದ್ರು. ಡ್ರೆಸ್ ಜೊತೆಗೆ ಕುತ್ತಿಗೆಗೆ ಟ್ರೆಂಡಿ ಚೋಕರ್, ಒಂದು ಕೈಯಲ್ಲಿ ಸಿಂಪಲ್ ಬಳೆ ಹಾಗೂ ಕಿವಿಗೆ ರೆಡ್ ಸ್ಟೋನ್ ಕಿವಿಯೋಲೆಗಳನ್ನ ಧರಿಸಿದ್ರು. ಹನಿ ರೋಸ್ ಅವರನ್ನು ಮಲಯಾಳಂ ನಟ ಮತ್ತು ನಿರೂಪಕ ಮಿಥುನ್ ರಮೇಶ್ ಮತ್ತು ಅವರ ತಂಡವು ವೇದಿಕೆಯ ಮೇಲೆ ಕರೆದೊಯ್ದರು.

ಕಾರ್ಯಕ್ರಮದ ವೇಳೆ ಹನಿ ರೋಸ್ ಧರಿಸಿದ್ದ ಗೌನ್ ಕಿತ್ತು ಹೋಯ್ತು. ಒಂದು ಭುಜದ ಪಟ್ಟಿ ಕಳಚಿ ಬಿದ್ದಿದೆ. ಕೊಂಚ ಟೆನ್ಷನ್ ಆದ ನಟಿ ಹನಿ ರೋಸ್ ಅಲ್ಲೇ ನಿಂತು ಕಿತ್ತು ಹೋದ ಪಟ್ಟಿಯನ್ನು ಯಾರಿಗೂ ಕಾಣದಂತೆ ಮಡಚಿದ್ರು. ಬಳಿಕ ಹನಿ ರೋಸ್ ಧರಿಸಿದ್ದ ಗೌನ್ ಹೊಸ ರೂಪ ಪಡೆಯಿತು.

ಶಾರ್ಜಾದಲ್ಲಿ ಹನಿ ರೋಸ್ ಭಾಗವಹಿಸಿದ ಕಾರ್ಯಕ್ರಮದ ಫೋಟೋ ಹಾಗೂ ವಿಡಿಯೋಗಳು ಇದೀಗ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗ್ತಿದೆ. ಬಾಬಿ ಚೆಮ್ಮನೂರು ವಿರುದ್ಧ ಪ್ರಕರಣ ದಾಖಲಿಸಿದ ನಂತರ ಹನಿ ರೋಸ್ ಭಾಗವಹಿಸಿದ ಕೆಲವೇ ಕಾರ್ಯಕ್ರಮಗಳಲ್ಲಿ ಇದೂ ಒಂದು. ವೈರಲ್ ಆದ ವಿಡಿಯೊಗಳಲ್ಲಿ ಹನಿ ತನ್ನ ತಂದೆಯೊಂದಿಗೆ ಶಾರ್ಜಾ ನಗರವನ್ನು ರೌಂಡ್ಸ್ ಹಾಕಿದ ಒಂದು ಸಣ್ಣ ವಿಡಿಯೋ ಕೂಡ ಸೇರಿದೆ. ಹನಿ ರೋಸ್ ಈ ವಿಡಿಯೋವನ್ನು ತಮ್ಮ ಇನ್ ಸ್ಟಾಗ್ರಾಮ್ ಖಾತೆಯಲ್ಲಿ ಪೋಸ್ಟ್ ಮಾಡಿದ್ದಾರೆ.

75ರ ನಟನ ಜೊತೆ ಪೂಜಾ

ತೆಲುಗು ಬ್ಯೂಟಿ ಪೂಜಾ ಹೆಗ್ಡೆ 'ರಂಗಸ್ಥಳಂ' ಚಿತ್ರದಲ್ಲಿ ಐಟಂ ಸಾಂಗ್ ಮಾಡಿ ಮನಗೆದ್ದಿದ್ರು. ಈಗ ಮತ್ತೊಮ್ಮೆ ಸ್ಪೆಷಲ್ ಸಾಂಗ್ ಮಾಡ್ತಿದ್ದಾರಂತೆ. ಆದ್ರೆ 75 ವರ್ಷದ ನಟನ ಜೊತೆ ಹೆಜ್ಜೆ ಹಾಕಲಿದ್ದಾರಂತೆ.

ತೆಲುಗು ಪ್ರೇಕ್ಷಕರು ಪೂಜಾ ಹೆಗ್ಡೆಯವರನ್ನು ಮುದ್ದಾಗಿ ಬುಟ್ಟಬೊಮ್ಮ ಅಂತ ಕರೀತಾ